ಸಂಪುಟ: 05 ಸಂಚಿಕೆ: 283 ಪುಟಗಳು: 08 ಶನಿವಾರ 27 ಡಿಸೆಂಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಪ್ರಪಂಚದ ನಾಲ್ಕು ದಿಕ್ಕುಗಳಲ್ಲೂ ಸಂಚರಿಸಿ ಬನ್ನಿ. ನಿಜವಾದ ಧರ್ಮ ನಿಮಗೆ ಎಲ್ಲಿಯೂ ಸಿಕ್ಕುವುದಿಲ್ಲ. ಏಕೆಂದರೆ, ಅದು ಇರುವುದು ಇಲ್ಲಿ... ನಮ್ಮದೇ ಹೃದಯದಲ್ಲಿ

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮುಟ್ಟಾದವರನ್ನು ಹೊರಕೂರಿಸುವ ಪದ್ಧತಿ ನಿವಾರಿಸಿ: ಡಿ.ಸಿ.ಗಳಿಗೆ ಪತ್ರ

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗ ಮತ್ತು ತುಮಕೂರಿನ ಕೆಲವಡೆ ಕಾಡುಗೊಲ್ಲ ಸಮುದಾಯದವರು ಮುಟ್ಟಾದ ಮತ್ತು ಬಾಣಂತಿ ಹೆಣ್ಣುಮಕ್ಕಳನ್ನು ಮನೆಯಿಂದ ಹೊರಗೆ ಇರಿಸುತ್ತಿದ್ದು, ಈ ಪದ್ಧತಿಯನ್ನು ನಿವಾರಿಸಲು ಅಗತ್ಯ ಕ್ರಮ ತೆಗೆದುಕೊಳ್ಳಿ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ಅವರು ಎರಡೂ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ.

ತುಮಕೂರು, ಬೆಂಗಳೂರು ಉತ್ತರ, ಕೋಲಾರ, ಚಿತ್ರದುರ್ಗದ ಕೆಲವು ಕಾಡುಗೊಲ್ಲರಹಟ್ಟಿಗಳಲ್ಲಿ ಈ ಪದ್ಧತಿ ಆಚರಣೆಯಲ್ಲಿ ಇರುವುದರ ಸಂಬಂಧ ಮಹಿಳಾ ಆಯೋಗಕ್ಕೆ ದೂರುಗಳು ಬಂದಿದ್ದವು. ಈ ಬಗ್ಗೆ ಪರಿಶೀಲನೆ ನಡೆಸುವ ಉದ್ದೇಶದಿಂದ ಆಯೋಗದ ಅಧ್ಯಕ್ಷ ನಾಗಲಕ್ಷ್ಮೀ ಚೌಧರಿ ಅವರು ಇದೇ ಡಿಸೆಂಬರ್‌ನಲ್ಲಿ ಹಲವು ಕಾಡುಗೊಲ್ಲರಹಟ್ಟಿಗಳಿಗೆ ಭೇಟಿ ನೀಡಿದ್ದರು.

## ದೇವೇಗೌಡ ಚುನಾವಣೆಗಳಲ್ಲಿ ಬಿಜೆಪಿ ಜತೆ ಜಿ.ಪಂ, ತಾ.ಪಂ ಹೊಂದಾಣಿಕೆ ಕಷ್ಟ

• ಉದಯವಾಹಿನಿ, ಬೆಂಗಳೂರು

'ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಬಿಜೆಪಿ ಜತೆಗೆ ಹೊಂದಾಣಿಕೆ ಕಷ್ಟವಾಗಲಿದೆ. ಅಲ್ಲೆಲ್ಲಾ ಜೆಡಿಎಸ್ ಸ್ವಂತ ಬಲದಲ್ಲಿ ಸ್ಪರ್ಧಿಸಲಿದೆ' ಎಂದು ಪಕ್ಷದ ವರಿಷ್ಠ ಎಚ್.ಡಿ.ದೇವೇಗೌಡ ಹೇಳಿದರು. 'ಲೋಕಸಭೆ, ರಾಜ್ಯಸಭೆ, ವಿಧಾನಸಭೆ ಮತ್ತು ವಿಧಾನಪರಿಷತ್ತುಗಳಿಗೆ ನಡೆಯುವ ಚುನಾವಣೆಗಳಲ್ಲಿ ಜೆಡಿಎಸ್ ಮತ್ತು ಬಿಜೆಪಿ ಹೊಂದಾಣಿಕೆಯಲ್ಲಿ ಸ್ಪರ್ಧಿಸಲಿವೆ. ಅದರಲ್ಲಿ ಯಾವುದೇ ಬದಲಾವಣೆ ಇಲ್ಲ' ಎಂದು ಸ್ಪಷ್ಟಪಡಿಸಿದರು. 'ಆದರೆ, ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಪರಿಸ್ಥಿತಿ ಭಿನ್ನವಾಗಿದೆ. ಅಲ್ಲೆಲ್ಲಾ ಪಕ್ಷದ ಸಂಘಟನೆ ಬಲವಾಗಿದ್ದು, ಸ್ವತಂತ್ರವಾಗಿಯೇ ಸ್ಪರ್ಧಿಸಬೇಕಾಗುತ್ತದೆ. ಹೀಗಾಗಿ ಆ ಹಂತದ ಚುನಾವಣೆಗಳಲ್ಲಿ ಬಿಜೆಪಿ ಜತೆ ಹೊಂದಾಣಿಕೆ ಮಾಡಿಕೊಳ್ಳುವುದು ಕಷ್ಟ' ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

'ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅಥವಾ ಗೃಹ ಸಚಿವ ಅಮಿತ್ ಶಾ ಅವರ ಜತೆ ಮಾತನಾಡಲು ಸಾಧ್ಯವೇ? ಈ ವಿಚಾರದಲ್ಲಿ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರು ತಮ್ಮ ನಿಲುವನ್ನು ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಹೀಗಾಗಿ ನಾವೂ ನಮ್ಮ ಸ್ವಂತ ಬಲದಲ್ಲಿಯೇ ಚುನಾವಣೆ ಎದುರಿಸುತ್ತೇವೆ. ಕೇರಳದಲ್ಲಿ ಎಡಪಕ್ಷಗಳ ಜತೆಗೆ ಮೈತ್ರಿ ಮಾಡಿಕೊಳ್ಳುತ್ತೇವೆ' ಎಂದು ವಿವರಿಸಿದರು.

## ಮುಖ್ಯ ಶಿಕ್ಷಕನ ಸ್ವಂತ ಖರ್ಚಿನಲ್ಲಿ ವಿದ್ಯಾರ್ಥಿಗಳ ವಿಮಾನಯಾನ!

• ಉದಯವಾಹಿನಿ, ಕೊಪ್ಪಳ

ತಾಲ್ಲೂಕಿನ ಬಹದ್ದೂರ ಬಂಡಿ ಗ್ರಾಮದ ಸರ್ಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಬೀರಪ್ಪ ಅಂಡಗಿ ಅವರು ಸ್ವಂತ ಹಣದಿಂದ ತಮ್ಮ ಶಾಲೆಯ 24 ವಿದ್ಯಾರ್ಥಿಗಳನ್ನು ವಿಮಾನದಲ್ಲಿ ಶೈಕ್ಷಣಿಕ ಪ್ರವಾಸಕ್ಕೆ ಶುಕ್ರವಾರ ಬೆಂಗಳೂರಿಗೆ ಕರೆದುಕೊಂಡು ಹೋದರು. ಬಳ್ಳಾರಿಯ ಜಿಂದಾಲ್ ವಿಮಾನ ನಿಲ್ದಾಣದಿಂದ ಬೆಂಗಳೂರಿಗೆ ತೆರಳಿದ ಮಕ್ಕಳು ವಿಮಾನದಲ್ಲಿ ಫೋಟೊ ಕ್ಲಿಕ್ಕಿಸಿಕೊಂಡು ಶಿಕ್ಷಕರು ಹಾಗೂ ಸಿಬ್ಬಂದಿ ಜೊತೆ ಸಂಭ್ರಮಿಸಿದರು. ಮೊದಲ ಬಾರಿಗೆ ವಿಮಾನಯಾನ ಪ್ರಯಾಣ ಮಾಡಿದ ಮಕ್ಕಳಲ್ಲಿ ಸಂಭ್ರಮ ಮನೆ ಮಾಡಿತ್ತು. ವಿಕಲಚೇತನ ನೌಕರರ ಸಂಘದ ರಾಜ್ಯಾಧ್ಯಕ್ಷರೂ ಆದ ಬೀರಪ್ಪ ಅಂಡಗಿ ಹಣ ಸಂಗ್ರಹ ಮಾಡದೆ ವಿದ್ಯಾರ್ಥಿಗಳ ವಿಮಾನ ಪ್ರಯಾಣ. ಊಟ ಹಾಗೂ ವಸತಿ ಸೌಲಭ್ಯದ ಖರ್ಚು ಭರಿಸಿದ್ದಾರೆ. ವಿಮಾನದಲ್ಲಿ ಪ್ರವಾಸಕ್ಕೆ ಕರೆದುಕೊಂಡು ಹೋಗುವ ವಿದ್ಯಾರ್ಥಿಗಳ ಆಯ್ಕೆಗಾಗಿ ಪ್ರವೇಶ ಪರೀಕ್ಷೆ ನಡೆಸಿ 5ರಿಂದ 8ನೇ ತರಗತಿ ತನಕ ಪ್ರತಿ ತರಗತಿಯಿಂದ ತಲಾ ಆರು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಪ್ರವಾಸಕ್ಕೆ ಕರೆದುಕೊಂಡು ಹೋಗಿದ್ದಾರೆ. ಬಹದ್ದೂರ್ ಬಂಡಿ ಶಾಲೆಯಿಂದ ಜಿಲ್ಲಾಡಳಿತ ಭವನಕ್ಕೆ ಬಂದ ಮಕ್ಕಳು ಮತ್ತು ಪ್ರವಾಸ ವ್ಯವಸ್ಥೆ ಮಾಡಿದ ಬೀರಪ್ಪ ಅವರಿಗೆ ಸಂಸದ ರಾಜಶೇಖರ ಹಿಟ್ನಾಳ ಶುಭ ಕೋರಿದರು.

## ಹಿರಿಯೂರು ಬಸ್ ಬೆಂಕಿ ದುರಂತದಲ್ಲಿ ಸಾವಿನ ಸಂಖ್ಯೆ 7ಕ್ಕೆ ಏರಿಕೆ

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ಹಿರಿಯೂರು ಬಳಿ ಸಂಭವಿಸಿದ ಭೀಕರ ಬಸ್ ಅಪಘಾತ ಇಡೀ ರಾಜ್ಯವನ್ನೇ ಬೆಚ್ಚಿಬೀಳಿಸಿದ್ದು, ಇದೀಗ ಸಾವಿನ ಸಂಖ್ಯೆ 7 ಕ್ಕೆ ಏರಿದೆ. ಈ ದುರ್ಘಟನೆಯಲ್ಲಿ ನಿನ್ನೆ 6 ಮಂದಿ ಸಜೀವ ದಹನಗೊಂಡಿದ್ದು, ಗಂಭೀರ ಗಾಯಗೊಂಡಿದ್ದ ಸೀಬರ್ಡ್ ಬಸ್ ಚಾಲಕ ಮಹಮದ್ ರಫೀಕ್ (42) ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದಾರೆ. ಮೂಲತಃ ಹಾವೇರಿ ಜಿಲ್ಲೆ ಶಿಗ್ಗಾಂವಿ ನಿವಾಸಿ ರಫೀಕ್ ಅವರು ಅಪಘಾತದಿಂದ ಗಂಭೀರವಾಗಿ ಗಾಯಗೊಂಡಿದ್ದರು. ಅವರನ್ನು ನಿನ್ನೆ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಇಂದು ಬೆಳಗ್ಗೆ ಮೃತಪಟ್ಟಿದ್ದಾರೆ. ಬೆಂಗಳೂರಿನಿಂದ ಮೊನ್ನೆ ರಾತ್ರಿ 8.40ರ ಸುಮಾರಿಗೆ ಗೋಕರ್ಣಕ್ಕೆ ಹೊರಟಿದ್ದ ಸೀಬರ್ಡ್ ಬಸ್ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕು ಜವನಗೊಂಡನಹಳ್ಳಿ ಸಮೀಪದ ರಾಷ್ಟ್ರೀಯ ಹೆದ್ದಾರಿ 48 ರಲ್ಲಿ ಹೋಗುತ್ತಿತ್ತು. ನಿನ್ನೆ ಬೆಳಗಿನ ಜಾವ 2 ಗಂಟೆ ಸುಮಾರಿನಲ್ಲಿ ಪಕ್ಕದ ರಸ್ತೆಯಲ್ಲಿ ಹೋಗುತ್ತಿದ್ದ ಲಾರಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಕ್ಕದ ರಸ್ತೆಗೆ ನುಗ್ಗಿ ಈ ಬಸ್‌ಗೆ ಅಪ್ಪಳಿಸಿದ್ದರಿಂದ ಹಠಾತ್ ಬೆಂಕಿ ಹೊತ್ತಿಕೊಂಡು ಐದು ವರ್ಷದ ಮಗು ಸೇರಿದಂತೆ ಬಸ್‌ನಲ್ಲಿದ್ದ ಐವರು ಪ್ರಯಾಣಿಕರು ಹಾಗೂ ಲಾರಿ ಚಾಲಕ ಸೇರಿ 6 ಮಂದಿ ಸಜೀವ ದಹನವಾದರು.

ಅರುಣಾಚಲ ಪ್ರದೇಶ, ತೈವಾನ್ ಮತ್ತು ದಕ್ಷಿಣ ಚೀನಾ ಸಮುದ್ರದ ಮೇಲಿನ ಹಕ್ಕುಗಳು ಚೀನಾದ 'ಮೂಲಭೂತ ಆಸಕ್ತಿಗಳು' ಎಂದು ಉಲ್ಲೇಖಿಸಿದ್ದ ಅಮೆರಿಕದ ರಕ್ಷಣಾ ಇಲಾಖೆ ವರದಿ ಚೀನಾ ತೀವ್ರವಾಗಿ ತಿರಸ್ಕರಿಸಿದೆ. ಈ ವರದಿಯು ವಾಸ್ತವಕ್ಕೆ ದೂರವಾಗಿದ್ದು, ತನ್ನ ಮಿಲಿಟರಿ ಪ್ರಾಬಲ್ಯವನ್ನು ಸಮರ್ಥಿಸಿಕೊಳ್ಳಲು ಅಮೆರಿಕ ಹೂಡಿರುವ ತಂತ್ರ ಎಂದು ಚೀನಾ ಟೀಕಿಸಿದೆ. ಅಮೆರಿಕದ ಪೆಂಟಗನ್ ಇತ್ತೀಚೆಗೆ ಬಿಡುಗಡೆ ಮಾಡಿದ ವರದಿಯಲ್ಲಿ "ಚೀನಾವು ಅರುಣಾಚಲ ಪ್ರದೇಶದ ಮೇಲಿನ ಹಕ್ಕನ್ನು ತೈವಾನ್‌ನಷ್ಟೇ ಪ್ರಮುಖವೆಂದು ಪರಿಗಣಿಸುತ್ತಿದೆ. 2049ರ ವೇಳೆಗೆ ಚೀನಾದ 'ಮಹಾನ್ ಪುನರುಜ್ಜೀವನ' ಸಾಧಿಸಲು ಈ ಪ್ರದೇಶಗಳನ್ನು ವಶಪಡಿಸಿಕೊಳ್ಳುವುದು ಅದರ ಗುರಿಯಾಗಿದೆ. ಪಾಕಿಸ್ತಾನದೊಂದಿಗೆ ಸೇರಿ ಚೀನಾ ಹೊಸ ಮಿಲಿಟರಿ ನೆಲೆಗಳನ್ನು ಸ್ಥಾಪಿಸಲು ಮುಂದಾಗುತ್ತಿದೆ ಎಂದು ಎಚ್ಚರಿಸಿತ್ತು.

# ಭಾರತ, ಚೀನಾ ಒಗ್ಗಟ್ಟು ದೊಡ್ಡಣ್ಣನಿಗೆ ತಿರುಗೇಟು!





**ಭಾರತದ ಜೊತೆ ಸ್ನೇಹಕ್ಕೆ ಸಿದ್ಧ, ಅಮೆರಿಕದ ಹಸ್ತಕ್ಷೇಪ ಸಹಿಸಲ್ಲ**

**ಅರುಣಾಚಲದ ಮೇಲೆ ಚೀನಾ ಕಣ್ಣು : ಅಮೆರಿಕ**

**ಪೆಂಟಗಾನ್ ಆರೋಪಕ್ಕೆ ಚೀನಾ ಕೆಂಡಾಮಂಡಲ**

**ಪೆಂಟಗಾನ್ ವರದಿಗೆ ಚೀನಾ ಕಿಡಿ**

ಈ ವರದಿ ಬಿಡುಗಡೆಯಾಗುತ್ತಿದ್ದಂತೆ ಕೆಂಡಾಮಂಡಲವಾಗಿರುವ ಚೀನಾ ವರದಿಯಲ್ಲಿ ಉಲ್ಲೇಖವಾಗಿರುವ ಅಂಶಗಳನ್ನು ತೀವ್ರವಾಗಿ ಖಂಡಿಸಿದೆ. ಅಲ್ಲದೆ, ಈ ವರದಿ ಸುಳ್ಳು ಸುದ್ದಿ ಹಬ್ಬಿಸುವ ಜೊತೆಗೆ ಉಭಯ ದೇಶಗಳ ನಡುವೆ ವೈಮನಸ್ಸು ಮೂಡುವಂತೆ ಮಾಡುತ್ತಿದೆ ಎಂದು ಆರೋಪಿಸಿದೆ. ಈ ಕುರಿತು ಮಾತನಾಡಿರುವ ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ಈ ವರದಿ ಕುರಿತು ನಮಗೆ ತೀವ್ರ ಅಸಮಾಧಾನವಿದ್ದು, ನಾವು ಇದನ್ನು ಬಲವಾಗಿ ನಿರಾಕರಿಸುತ್ತೇವೆ. ಅಮೆರಿಕಾ ತನ್ನ ಮಿಲಿಟರಿ ಪ್ರಾಬಲ್ಯವನ್ನು ಕಾಪಾಡಿಕೊಳ್ಳಲು ನೆಪ ಹುಡುಕುತ್ತಿದ್ದು, ಪೆಂಟಗಾನ್ ನೀಡಿರುವ ಈ ವರದಿಯು ಸುಳ್ಳು ನಿರೂಪಣೆಗಳನ್ನು ಮಾಡುತ್ತಿದ್ದು, ಅಸತ್ಯವನ್ನು ಹರಡುವ ಕೆಲಸ ಮಾಡುತ್ತಿದೆ. ಈ ಮೂಲಕ ಚೀನಾದ ರಕ್ಷಣಾ ನೀತಿಯನ್ನು ತಪ್ಪಾಗಿ ಚಿತ್ರಿಸಿ, ಇತರ ದೇಶಗಳೊಂದಿಗೆ ವೈಮನಸ್ಸ್ಯವನ್ನು ಸೃಷ್ಟಿಸುತ್ತಿದೆ ಎಂದು ಆರೋಪಿಸಿದ್ದಾರೆ.

**ತೈವಾನ್‌ಗೆ ಶಸ್ತ್ರಾಸ್ತ್ರ ಮಾರಾಟ**

ತೈವಾನ್‌ಗೆ ಶಸ್ತ್ರಾಸ್ತ್ರ ಮಾರಾಟದ ವಿಷಯಕ್ಕೆ ಸಂಬಂಧಿಸಿ ಅಮೆರಿಕಾದ 20 ರಕ್ಷಣಾ ಸಂಸ್ಥೆಗಳು ಹಾಗೂ 10 ವ್ಯಕ್ತಿಗಳ ಮೇಲೆ ಚೀನಾದ ವಿದೇಶಾಂಗ ಇಲಾಖೆ ಶುಕ್ರವಾರ ನಿರ್ಬಂಧ ಘೋಷಿಸಿದೆ. ಈ ಸಂಸ್ಥೆಗಳು ಮತ್ತು ವ್ಯಕ್ತಿಗಳು ಚೀನಾದಲ್ಲಿ ಹೊಂದಿರುವ ಯಾವುದೇ ಸ್ವತ್ತುಗಳನ್ನು ಈ ಕ್ರಮವು ಸ್ಥಂಭನಗೊಳಿಸುತ್ತದೆ ಹಾಗೂ ದೇಶೀಯ ಸಂಸ್ಥೆಗಳು ಮತ್ತು ವ್ಯಕ್ತಿಗಳು ಅವರೊಂದಿಗೆ ವ್ಯಾಪಾರ ಮಾಡುವುದನ್ನು ನಿರ್ಬಂಧಿಸುತ್ತದೆ. ಪಟ್ಟಿಯಲ್ಲಿರುವ ವ್ಯಕ್ತಿಗಳು ಹಾಗೂ ನಿರ್ಬಂಧಿತ ಸಂಸ್ಥೆಗಳ ಹಿರಿಯ ಅಧಿಕಾರಿಗಳು ಚೀನಾ ಪ್ರವೇಶಿಸುವುದನ್ನು ನಿಷೇಧಿಸುತ್ತದೆ. ಅಂದೂರಿಲ್ ಇಂಡಸ್ಟ್ರೀಸ್, ನಾರ್ಥ್‌ರಾಪ್ ಗ್ರಮ್ಮನ್ ಸಿಸ್ಟಮ್ಸ್ ಕಾರ್ಪೊರೇಷನ್, ಎಲ್3 ಹ್ಯಾರಿಸ್ ಮಾರಿಟೈಮ್ ಸರ್ವಿಸಸ್ ನಿರ್ಬಂಧಕ್ಕೆ ಒಳಗಾದ ಸಂಸ್ಥೆಗಳ ಪಟ್ಟಿಯಲ್ಲಿವೆ ಎಂದು ವಿದೇಶಾಂಗ ಇಲಾಖೆ ಹೇಳಿದೆ.

1. ಚೀನಾ-ಭಾರತದೊಂದಿಗೆ ಸಂಬಂಧ ಬೆಳೆಸುವ ಮೂಲಕ ಅಮೆರಿಕಾ-ಭಾರತದ ಸಂಬಂಧವನ್ನು ಹಾಳು ಮಾಡುತ್ತಿದೆ ಎಂದ ಪಂಟಗಾನ್ ವರದಿ
2. ಚೀನಾ ಭಾರತದ ಬೈಭಾಗವಾದ ಅರುಣಾಚಲ ಪ್ರದೇಶವನ್ನು ತನ್ನ ಪ್ರಮುಖ ಹಿತಾಸಕ್ತಿಯಾಗಿಯೇ ಉಳಿಸಿಕೊಂಡಿದೆ ಎಂದು ಎಚ್ಚರಿಕೆ
3. ಪೆಂಟಗಾನ್ ವರದಿ ಸುಳ್ಳು ಸುದ್ದಿ ಹರಡಿಸಿ ನಮ್ಮ ಮಧ್ಯೆ ವೈಮನಸ್ಸು ಮೂಡಿಸುವ ಕೆಲಸ ಮಾಡುತ್ತಿದೆ ಎಂದು ಚೀನಾ ಕೆಂಡಾಮಂಡಲ

• ಉದಯವಾಹಿನಿ, ದೆಹಲಿ

ಚೀನಾದ ವಿದೇಶಾಂಗ ವಕ್ತಾರ ಲಿನ್ ಜಿಯಾನ್, ಅಮೆರಿಕ ಪ್ರತಿವರ್ಷ ಇಂತಹ ವರದಿಗಳನ್ನು ಬಿಡುಗಡೆ ಮಾಡುವ ಮೂಲಕ ಚೀನಾದ ಆಂತರಿಕ ವಿಷಯಗಳಲ್ಲಿ ಹಸ್ತಕ್ಷೇಪ ಮಾಡುತ್ತಿದೆ. ಇದು ಎರಡು ದೇಶಗಳ ನಡುವೆ ಭಿನ್ನಾಭಿಪ್ರಾಯ ಬಿತ್ತುವ ಸಂಚು ಎಂದು ಆರೋಪಿಸಿದ್ದಾರೆ. ಅತ್ತ ಚೀನಾದ ರಕ್ಷಣಾ ಸಚಿವಾಲಯದ ವಕ್ತಾರ ಜಾಂಗ್ ಕ್ಸಿಯೋಗಾಂಗ್ ಮಾತನಾಡಿ, ಚೀನಾದ ರಕ್ಷಣಾ ನೀತಿಯನ್ನು ಪೆಂಟಗನ್ ವರದಿ ದುರುದ್ದೇಶಪೂರ್ವಕವಾಗಿ ತಪ್ಪಾಗಿ ಚಿತ್ರಿಸಿದೆ. ನಮ್ಮ ಮಿಲಿಟರಿ ಬೆಳವಣಿಗೆಯ ಬಗ್ಗೆ ಆಧಾರರಹಿತ ಊಹೆಗಳನ್ನು ಮಾಡಲಾಗಿದೆ ಎಂದು ಕಿಡಿಕಾರಿದ್ದಾರೆ.

ಗಮನಾರ್ಹ ಸಂಗತಿಯೆಂದರೆ, ಅಮೆರಿಕದ ವಿರುದ್ಧ ಹರಿಹಾಯ್ದಿರುವ ಚೀನಾ, ಭಾರತದ ವಿಚಾರದಲ್ಲಿ ಮಾತ್ರ ಸೌಮ್ಯ ಮಾತುಗಳನ್ನಾಡಿದೆ. ಬೀಜಿಂಗ್ ಮತ್ತು ನವದೆಹಲಿ ನಡುವಿನ ಸಂಬಂಧವನ್ನು ನಾವು ದೀರ್ಘಾವಧಿಯ ದೃಷ್ಟಿಕೋನದಿಂದ ನೋಡುತ್ತಿದ್ದೇವೆ. ಸಂವಹನ ಬಲಪಡಿಸಲು, ಪರಸ್ಪರ ನಂಬಿಕೆ ಹೆಚ್ಚಿಸಲು ಮತ್ತು ಭಿನ್ನಾಭಿಪ್ರಾಯಗಳನ್ನು ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಲು ನಾವು ಸಿದ್ಧರಿದ್ದೇವೆ ಎಂದು ಲಿನ್ ಜಿಯಾನ್ ತಿಳಿಸಿದ್ದಾರೆ.

**ಸಂಬಂಧ ಹಾಳು ಮಾಡಲು ಪ್ರಯತ್ನ:** ಗಡಿ ವಿಷಯದಲ್ಲಿ ಸ್ವಲ್ಪ ಮೃಧು ಧೋರಣೆ ತೋರಿಸುವ ಮೂಲಕ ಅಮೆರಿಕದೊಂದಿಗೆ ಭಾರತದ ಸಂಬಂಧವನ್ನು ಹಾಳು ಮಾಡಲು ಚೀನಾ ಯತ್ನಿಸುತ್ತಿದೆ ಎಂಬ ಅಮೆರಿಕದ ಯುದ್ಧ ಇಲಾಖೆಯ ವರದಿಗೆ ಚೀನಾ ಆಕ್ಷೇಪ ವ್ಯಕ್ತಪಡಿಸಿದೆ. ಈ ಕುರಿತು ಪ್ರತಿಕ್ರಿಯಿಸಿರುವ ಚೀನಾದ ವಿದೇಶಾಂಗ ಇಲಾಖೆ, 'ಪೆಂಟಗಾನ್ ವರದಿಯು ಚೀನಾದ ರಕ್ಷಣಾ ನೀತಿಯನ್ನು ಹಾಳು ಮಾಡುತ್ತಿದೆ. ಇತರ ದೇಶಗಳ ನಡುವೆ ಭಿನ್ನಾಭಿಪ್ರಾಯ ಬಿತ್ತುವ ಕೆಲಸ ಮಾಡುತ್ತಿದೆ. ಅಮೆರಿಕ ತನ್ನ ಮಿಲಿಟರಿ ಪ್ರಾಬಲ್ಯವನ್ನು ಕಾಪಾಡಿಕೊಳ್ಳಲು ನೆಪ ಹುಡುಕುತ್ತಿದೆ. ಚೀನಾ ಈ ವರದಿಯನ್ನು ವಿರೋಧಿಸುತ್ತಿದೆ' ಎಂದಿದ್ದಾರೆ.

**ಪಾಕ್, ಲಂಕಾ, ಬಾಂಗ್ಲಾದಲ್ಲಿ ಸೇನಾ ನೆಲೆಗೆ ಚೀನಾ ಸ್ಕೆಚ್:** ಭಾರತದ ನೆರೆಹೊರೆಯ ದೇಶಗಳಾದ ಪಾಕಿಸ್ತಾನ, ಶ್ರೀಲಂಕಾ, ಬಾಂಗ್ಲಾದೇಶ ಸೇರಿದಂತೆ ಹಲವು ದೇಶಗಳಲ್ಲಿ ಹೊಸದಾಗಿ ಸೇನಾ ನೆಲೆ ಸ್ಥಾಪಿಸುವ ಬಗ್ಗೆ ಚೀನಾ ಗಂಭೀರ ಚಿಂತನೆ ನಡೆಸಿದೆ. ಈ ಮೂಲಕ ಮಲಕ್ಕಾ, ಹೊರ್ಮುಜ್ ಜಲಸಂಧಿ, ಆಫ್ರಿಕಾ ಮತ್ತು ಮಧ್ಯ ಪೂರ್ವ ದೇಶಗಳ ವಲಯದಲ್ಲಿ ತನ್ನ ಸೇನಾ ಪ್ರಾಬಲ್ಯವನ್ನು ವಿಸ್ತರಿಸುವ ಮಹತ್ವಾಕಾಂಕ್ಷೆಯನ್ನು ಹೊಂದಿದೆ ಎಂಬ ಆಘಾತಕಾರಿ ವಿಷಯ ಬೆಳಕಿಗೆ ಬಂದಿದೆ. ಅಮೆರಿಕದ ಯುದ್ಧ ಇಲಾಖೆಯು ಅಮೆರಿಕ ಸಂಸತ್ತಿಗೆ ಸಲ್ಲಿಸಿದ ವಾರ್ಷಿಕ ವರದಿಯಲ್ಲಿ ಚೀನಾ ಸರ್ಕಾರದ ಮಿಲಿಟರಿ ಮತ್ತು ಭದ್ರತಾ ಬೆಳವಣಿಗೆಗಳ ಕುರಿತಾದ ವರದಿಯಲ್ಲಿ ಈ ಎಲ್ಲಾ ಅಂಶಗಳನ್ನು ಪ್ರಸ್ತಾಪಿಸಲಾಗಿದೆ. ಮಲಕ್ಕಾ ಜಲಸಂಧಿ ಮೂಲಕ ಭಾರತ ಮತ್ತು ಅಮೆರಿಕ ಯಾವುದೇ ಸಂದರ್ಭದಲ್ಲಿ ತನ್ನನ್ನು ಸುತ್ತುವರೆಯುವ ಅವಕಾಶ ಇದೆ ಎಂಬುದೇ ಈ ವಲಯದಲ್ಲಿ ಸೇನಾ ನೆಲೆ ಸ್ಥಾಪಿಸುವುದಕ್ಕೆ ಚೀನಾಕ್ಕೆ ಪ್ರಮುಖ ಕಾರಣ ಎನ್ನಲಾಗಿದೆ

**ಚೀನಾದ ಆಂತರಿಕ ವಿಚಾರಗಳಲ್ಲಿ ಅಮೆರಿಕಾ ಹಸ್ತಕ್ಷೇಪ**

ಚೀನಾದ ರಕ್ಷಣಾ ಸಚಿವಾಲಯದ ವಕ್ತಾರ ಝೂಂಗ್ ಕ್ಸಿಯಾಗಾಂಗ್ ಪೆಂಟಗಾನ್ ವರದಿಗೆ ತೀವ್ರ ಆಕ್ಷೇಪ ತೋರಿದ್ದು, ಚೀನಾ ಮತ್ತು ಪಾಕಿಸ್ತಾನದ ನಡುವಿನ ರಕ್ಷಣಾ ಮತ್ತು ಬಾಹ್ಯಾಕಾಶ ವಲಯಗಳಲ್ಲಿನ ಸಹಕಾರವನ್ನು, ವಿಶೇಷವಾಗಿ ಮಿಲಿಟರಿ ನೆಲೆ ಸ್ಥಾಪಿಸುವ ಯೋಜನೆಗಳನ್ನು ಎತ್ತಿ ತೋರಿಸಿದೆ. ಅಮೆರಿಕಾ ಪ್ರತಿ ವರ್ಷ ಇಂತಹ ವರದಿಗಳನ್ನು ಬಿಡುಗಡೆ ಮಾಡುತ್ತದೆ. ಇದು ಚೀನಾದ ಆಂತರಿಕ ವ್ಯವಹಾರಗಳಲ್ಲಿ ತೀವ್ರವಾಗಿ ಹಸ್ತಕ್ಷೇಪ ಮಾಡುತ್ತಿದೆ ಎಂದು ಝೂಂಗ್ ಹೇಳಿದ್ದಾರೆ. ಈ ವರದಿಯು ಚೀನಾದ ರಾಷ್ಟ್ರೀಯ ರಕ್ಷಣಾ ನೀತಿಯನ್ನು ದುರುದ್ದೇಶ ಪೂರಿತವಾಗಿ ತಪ್ಪಾಗಿ ಅರ್ಥೈಸಿಕೊಂಡಿದ್ದು, ಚೀನಾದ ಮಿಲಿಟರಿ ಅಭಿವೃದ್ಧಿಯ ಬಗ್ಗೆ ಆಧಾರ ರಹಿತ ಊಹೆಗಳನ್ನು ಮಾಡಿದೆ. ಚೀನಾದ ಸೇನೆಯ ಸಾಮಾನ್ಯ ಚಟುವಟಿಕೆಗಳನ್ನು ನಿಂದಿಸಿ, ಆಕ್ಷೇಪಾರ್ಹವಾಗಿ ಬಣ್ಣಿಸಿದೆ. ಇದು ಚೀನಾದ ಬಗ್ಗೆ ತಪ್ಪು ತಿಳುವಳಿಕೆಗಳು ಮತ್ತು ಭೌಗೋಳಿಕವಾಗಿ ರಾಜಕೀಯ ಪಕ್ಷಪಾತದಿಂದ ಕೂಡಿದೆ.

## ಕೇಂದ್ರದಿಂದ ರೈಲು ಪ್ರಯಾಣ ದರ ಹೆಚ್ಚಳ : ಬಿಜೆಪಿ ನಾಯಕರು ಪ್ರಶ್ನಿಸುವುದಿಲ್ಲ

• ಉದಯವಾಹಿನಿ, ದಾವಣಗೆರೆ

ಕೇಂದ್ರ ಸರ್ಕಾರ ರೈಲ್ವೆ ಪ್ರಯಾಣ ದರ ಏರಿಕೆ ಮಾಡಿದೆ. ಜನಸಾಮಾನ್ಯರ ಮೇಲೆ ದರ ಏರಿಕೆ ಹೊರೆಯಾಗುತ್ತಿರುವ ಬಗ್ಗೆ ರಾಜ್ಯದ ಬಿಜೆಪಿನಾಯಕರು ಪ್ರಶ್ನಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ದಾವಣಗೆರೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಾ, ಕೇಂದ್ರ ಸರ್ಕಾರ ರೈಲು ಪ್ರಯಾಣ ದರ ಏರಿಕೆ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದರು. ಬಿಜೆಪಿ ನಾಯಕರು ರೈಲು ದರ ಏರಿಕೆ ಆದರೂ ಮೌನ ವಹಿಸಿರುವ ಕುರಿತಾಗಿ ಅವರು ಆಕ್ರೋಶ ವ್ಯಕ್ತಪಡಿಸಿದರು.

**ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ**

**ಬಸ್ ಅಪಘಾತ: ತನಿಖೆ ನಡೆಸಲಾಗುವುದು:** ಚಿತ್ರದುರ್ಗದ ಹಿರಿಯೂರು ಬಳಿ ನಡೆದ ಬಸ್ ಮತ್ತು ಟ್ರಕ್ ಅಪಘಾತದ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸುತ್ತಾ, ಈ ಅಪಘಾತದಲ್ಲಿ ಟ್ರಕ್ ಚಾಲನ ತಪ್ಪಿರುವುದಾಗಿ ಮೇಲ್ನೋಟಕ್ಕೆ ಕಂಡು ಬರುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ವಿರುದ್ಧ ದಿಕ್ಕಿನಲ್ಲಿ ಬರುತ್ತಿದ್ದ ಟ್ರಕ್ ವಿಭಜಕವನ್ನು ದಾಟಿ ಬಸ್ ಗೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ 4 ಮಹಿಳೆಯರು ಹಾಗೂ ಒಂದು ಮಗು ಹಾಗೂ ಟ್ರಕ್ ಚಾಲಕ ಸಾವಿಗೀಡಾಗಿದ್ದಾರೆ. ಬಸ್ಸುಗಳು ಎಲ್ಲಾ ಸುರಕ್ಷತೆಯ ಕ್ರಮಗಳನ್ನು ಅನುಸರಿಸುವುದು ಅವಶ್ಯಕ. ಅಪಘಾತದ ಬಗ್ಗೆ ತನಿಖೆ ನಡೆಸಲಾಗುವುದು ಎಂದರು. ಇದೇ ಸಂದರ್ಭದಲ್ಲಿ ಕಾಂಗ್ರೆಸ್ ನ ಕಾರ್ಯಕಾರಣಿ ಸಭೆಯಲ್ಲಿ ಭಾಗವಹಿಸಲು ಇಂದು ನವದೆಹಲಿಗೆ ತೆರಳುತ್ತಿರುವುದಾಗಿ ತಿಳಿಸಿದರು.



**ಶಾಮನೂರು ಶಿವಶಂಕರಪ್ಪ ಅವರಿಗೆ ನುಡಿನಮನ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಜಿ ಸಚಿವ ದಿ. ಶಾಮನೂರು ಶಿವಶಂಕರಪ್ಪ ಅವರ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಲು ದಾವಣಗೆರೆಗೆ ಆಗಮಿಸಿ ಜಿಲ್ಲಾಡಳಿತದಿಂದ ಗೌರವ ವಂದನೆ ಸ್ವೀಕರಿಸಿ, ಸಾರ್ವಜನಿಕರ ಅಹವಾಲು ಪಡೆದರು. ಬಳಿಕ ಶಾಮನೂರು ಶಿವಶಂಕರಪ್ಪ ಅವರ ಸಮಾದಿಗೆ ಪುಷ್ಪನಮನ ಸಲ್ಲಿಸಿ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್, ಈಶ್ವರ್ ಖಂಡ್ರೆ ಸೇರಿ ಹಲವು ಮಂದಿ ಸಚಿವರು, ಶಾಸಕರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**ನಾಡಿಗೆ ಮತ್ತು ಪಕ್ಷಕ್ಕೆ ತುಂಬಲಾರದ ನಷ್ಟ:** ಜಾತ್ಯಾತೀತ ಹಾಗೂ ಜನಪ್ರಿಯ ನಾಯಕರೆನಿಸಿದ್ದ ಶಾಮನೂರು ಶಿವಶಂಕರಪ್ಪನವರ ನಿಧನದಿಂದ ನಾಡಿಗೆ ಮತ್ತು ಪಕ್ಷಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಮಾಜಿ ಸಚಿವ ದಿ.ಶಾಮನೂರು ಶಿವಶಂಕರಪ್ಪ ಅವರ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಾಮನೂರು ಶಿವಶಂಕರಪ್ಪ ಅವರು ದೇಶ ಕಂಡಂತಹ ಹಿರಿಯ ಶಾಸಕ, ಮಾಜಿ ಮಂತ್ರಿ ಹಾಗೂ ದಾವಣಗೆರೆಯ ನಗರಸಭೆ ಅಧ್ಯಕ್ಷರಾಗಿದ್ದರು. ಕಾಂಗ್ರೆಸ್ ಪಕ್ಷದಲ್ಲಿ ಖಜಾಂಚಿಯಾಗೀ ಸುಧೀರ್ಘ ಸೇವೆ ಸಲ್ಲಿಸಿದ್ದರು. ಇತ್ತೀಚೆಗೆ ಅವರ ಜನ್ಮದಿನಾಚರಣೆಯಲ್ಲಿ ಹಾಗೂ ದಾಲ್ ಮಿಲ್ ಉದ್ಘಾಟನೆಯಲ್ಲಿ ಪಾಲ್ಗೊಂಡಿದ್ದು, ಶ್ರೀಯುತರು ಶತಾಯುಷಿಗಳಾಗುತ್ತಾರೆ ಎಂಬ ನಂಬಿಕೆಯಿತ್ತು. ಅವರ ಅಗಲಿಕೆಯಿಂದ ನಾಡಿಗೆ ಮತ್ತು ಕಾಂಗ್ರೆಸ್ ಪಕ್ಷಕ್ಕೆ ತುಂಬಲಾರದ ನಷ್ಟವುಂಟಾಗಿದೆ. ತಮ್ಮ ಇಳಿವಯಸ್ಸಿನಲ್ಲಿಯೂ ಅತ್ಯಂತ ಕ್ರೀಯಾಶೀಲರಾಗಿದ್ದರು ಎಂದರು.

## ವಿವಿಧ ಪಟ್ಟಣ ಪಂಚಾಯಿತಿ ಚುನಾವಣೆ ಫಲಿತಾಂಶವು ಕಾಂಗ್ರೆಸ್ ವೈಫಲ್ಯಕ್ಕೆ ದಿಕ್ಸೂಚಿ

**● ಎಸ್‌ಸಿ ಎಸ್‌ಟಿ ಹಾಗೂ ಹಿಂದುಳಿದ ವರ್ಗಗಳಿಗೆ ನ್ಯಾಯ ಕೊಡುವ ಕೆಲಸವನ್ನು ಬಿಜೆಪಿ ಮಾಡಿದೆ**

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆಡಳಿತಕ್ಕೆ ಜನರು ಹಿಡಿಶಾಪ ಹಾಕುತ್ತಿದ್ದಾರೆ. ರಾಜ್ಯದ ಪಟ್ಟಣ ಪಂಚಾಯಿತಿಗಳ ಚುನಾವಣೆ ಫಲಿತಾಂಶವು ಅವರ ವೈಫಲ್ಯಕ್ಕೆ ದಿಕ್ಸೂಚಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಶುಕ್ರವಾರ ವೀರ ಬಾಲಕರ ದಿನ ಕಾರ್ಯಕ್ರಮದ ಅಂಗವಾಗಿ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರಕಾರದ ಬಗ್ಗೆ ಯಾರೂ ಸಂತಸದಿಂದಿಲ್ಲ. ಸಾಕಷ್ಟು ನಿರೀಕ್ಷೆ ಹುಟ್ಟುಹಾಕಿದ್ದ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದ 48 ಗಂಟೆಗಳಲ್ಲಿ ತಮ್ಮ ಮುಖವಾಡ ಕಳಚಿತ್ತು. ಪ್ರಧಾನಿ ಮೋದಿಜೀ ಅವರು ಕಿಸಾನ್ ಸಮ್ಮಾನ್ ಯೋಜನೆಯಡಿ 6 ಸಾವಿರ, ಯಡಿಯೂರಪ್ಪ ಅವರು 4 ಸಾವಿರ ನೀಡುತ್ತಿದ್ದರು. ಅದಕ್ಕೆ ಕಲ್ಲು ಹಾಕಿದರು ಎಂದು ಟೀಕಿಸಿದರು.

ಬಸವರಾಜ ಬೊಮ್ಮಾಯಿಯವರು ರೈತರ ಮಕ್ಕಳಿಗಾಗಿ ಆರಂಭಿಸಿದ ವಿದ್ಯಾನಿಧಿ ಯೋಜನೆಗೂ ಕಲ್ಲು ಹಾಕಿದ್ದಾರೆ ಎಂದು ಆಕ್ಷೇಪಿಸಿದರು. ಉತ್ತರ ಕರ್ನಾಟಕದ ಭೀಕರ ಅತಿವೃಷ್ಟಿ ಇದ್ದರೂ ಸಚಿವರು ಕನಿಷ್ಠ ಸೌಜನ್ಯಕ್ಕಾದರೂ ಸ್ಥಳಕ್ಕೆ ಭೇಟಿ ನೀಡಿ ರೈತರ ಸಂಕಷ್ಟ ಅರಿಯುವ ಪ್ರಯತ್ನ ಮಾಡಿಲ್ಲ ಎಂದು ಆಕ್ಷೇಪಿಸಿದರು.

**ವಿದ್ಯಾನಿಧಿ ಯೋಜನೆಗೂ ಕಲ್ಲು**

ಮೊನ್ನೆ ನಡೆದ ಪಟ್ಟಣ ಪಂಚಾಯಿತಿ ಚುನಾವಣೆಯಲ್ಲಿ ನಮ್ಮ ನಿರೀಕ್ಷೆಗೂ ಮೀರಿ ಬಿಜೆಪಿ ಯಶಸ್ಸು ಪಡೆದಿದೆ. ದಕ್ಷಿಣ ಕನ್ನಡದ ಬಜಪೆ, ಕಿನ್ನಿಗೋಳಿ ಪಟ್ಟಣ ಪಂಚಾಯಿತಿ, ಉತ್ತರ ಕನ್ನಡದ ಮಂಕಿ ಪಟ್ಟಣ ಪಂಚಾಯಿತಿ, ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಗಳಲ್ಲಿ ಬಹುಮತ ಪಡೆದಿದೆ ಎಂದು ತಿಳಿಸಿದರು.



**ಬಿಜೆಪಿ ಕಾರ್ಯಕರ್ತ ಎಂಬುದು ನಾವು ಹೆಮ್ಮೆ ಪಡಬೇಕಾದ ವಿಚಾರ**

ಮೋದಿ ಅವರು ಯಾವುದೇ ರಾಜಕೀಯ ಕುಟುಂಬದ ಹಿನ್ನೆಲೆ ಇದ್ದವರಲ್ಲ. ಬೂತ್ ಅಧ್ಯಕ್ಷರಾಗಿದ್ದು, ಕಾರ್ಯಕರ್ತರ ಸಂಘಟನೆ ಮಾಡಿ, ಗುಜರಾತ್ ರಾಜ್ಯದ ಮುಖ್ಯಮಂತ್ರಿಗಳಾಗಿ 14 ವರ್ಷ ಸೇವೆ ಸಲ್ಲಿಸಿದ್ದಾರೆ. 11 ವರ್ಷ ಸತತ ಕೇಂದ್ರದಲ್ಲಿ ಪ್ರಧಾನಿಯಾಗಿ ದೇಶವನ್ನು ಮುನ್ನಡೆಸುತ್ತಿದ್ದಾರೆ. ಜನಸೇವಕ ಎಂಬ ಭಾವನೆ ಅವರದು. ಅಂಥ ಬಿಜೆಪಿ ಕಾರ್ಯಕರ್ತ ಎಂಬುದು ನಾವು ಹೆಮ್ಮೆ ಪಡಬೇಕಾದ ವಿಚಾರ ಎಂದು ತಿಳಿಸಿದರು.

ಬಳಿಕ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯತ್ ಚುನಾವಣೆಯಲ್ಲಿ ಜಯಶೀಲರಾದ ಅಭ್ಯರ್ಥಿಗಳನ್ನು ಅಭಿನಂದಿಸಿ, ಸನ್ಮಾನಿಸಿದರು. ವೀರ ಬಾಲಕರ ಬಲಿದಾನದ ಜ್ಞಾಪಕಾರ್ಥವಾಗಿ ಇಂದಿನ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಪುಟ್ಟ ಬಾಲಕರು 8ನೇ ವಯಸ್ಸಿನಲ್ಲಿ ಮತಾಂತರ ಆಗಬೇಕೆಂದು ಏನೇ ಒತ್ತಡ ಬಂದರೂ ಅದಕ್ಕೆ ಒಪ್ಪದೇ ವೀರ ಮರಣ ಹೊಂದಿದ ಘಟನೆ ನಡೆದಿತ್ತು ಎಂದು ವಿವರಿಸಿದರು.

ಪ್ರಧಾನಿ ನರೇಂದ್ರ ಮೋದಿಜೀ ಅವರು ಈ ವೀರಮರಣವನ್ನು ಮತ್ತು ಬಲಿದಾನವನ್ನು ದೇಶಕ್ಕೆ ಪರಿಚಯಿಸುವ ಕೆಲಸ ಮಾಡಿದ್ದಾರೆ ಎಂದರು. ಬಾಶೆಟ್ಟಿಹಳ್ಳಿ ಪಂಚಾಯಿತಿಯಲ್ಲಿ ಗೆಲುವಿನ ಹಿನ್ನೆಲೆಯಲ್ಲಿ ಬಿ.ವೈ.ವಿಜಯೇಂದ್ರ ಅವರನ್ನು ಅಭಿನಂದಿಸಿ ಗೌರವಿಸಲಾಯಿತು.

ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ, ರಾಜ್ಯ ಕಾರ್ಯದರ್ಶಿಗಳಾದ ಡಾ. ಲಕ್ಷ್ಮೀ ಅಶ್ವಿನ್ ಗೌಡ, ಶರಣು ತಳ್ಳಿಕೇರಿ, ಯುವ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಶಾಸಕ ಧೀರಜ್ ಮುನಿರಾಜು, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ ಮತ್ತು ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಬದುಕು ಅಸ್ಥಿರ, ಇರಲಿ ತಿಳುವಳಿಕೆ

ಬದಲಾವಣೆ ಜಗದ ನಿಯಮ. ಇದ್ದಂತೆ ಯಾವುದೂ ಇರದು. ಕೆಲವು ಬದಲಾವಣೆ ತ್ವರಿತ ಕೆಲವು ನಿಧಾನ. ಅದೆಷ್ಟೋ ಜೀವ ಜೀವಕೋಶಗಳು ಪ್ರತಿ ಕ್ಷಣ ನಿತ್ಯ ಹುಟ್ಟುತ್ತವೆ ಸಾಯುತ್ತವೆ. ಮನುಷ್ಯ ಅಂದಾಜು ನೂರು ವರ್ಷ ಬದುಕಬಲ್ಲನಾದರೂ ಮರಣ ಸಮಯ ರೀತಿ ಹೇಳಲಾಗದು. ಆದಾಗ್ಯೂ ಕೆಲವರ ನಡೆ ಅತ್ಯಾಶೆ ಅತಿವ್ಯಾಮೋಹ ಅತ್ಯಹಂಕಾರ ದ್ವೇಷ ಕ್ರೌರ್ಯ ದೌರ್ಜನ್ಯ ನಿರ್ದಯ ದುಶ್ಚಟ ನಿರ್ಲಕ್ಷ್ಯಗಳು ಚಿಂತೆಗೀಡುಮಾಡುತ್ತವೆ. ಅಕ್ಟೋಬರ್ ಇಪ್ಪತ್ನಾಲ್ಕರಂದು ಆಂಧ್ರದ ಕರ್ನೂಲ್ ಬಳಿಯ ಬಸ್ ಅಪಘಾತದಲ್ಲಿ ಇಪ್ಪತ್ತು ಜನರ ದುರ್ಮರಣ. ಬೈಕ್ ಸವಾರನ ಮದ್ಯದ ಅಮಲು ಬಸ್ ಚಾಲಕನ ನಿರ್ಲಕ್ಷ್ಯ ಕಾರಣ. ನಿನ್ನೆ ಡಿಸೆಂಬರ್ ಇಪ್ಪತ್ತೈದು ಬಸ್ ಅಪಘಾತ ಆರು ಜನರ ದುರ್ಮರಣ. ಕಂಟೇನರ್ ಚಾಲಕನ ನಿರ್ಲಕ್ಷ್ಯವೋ ಯಾಂತ್ರಿಕಾದಿ ದೋಷವೋ ಈ ಬಸ್ ಹಿಂದಿದ್ದ ಶಾಲಾ ಮಕ್ಕಳ ಬಸ್ ಚಾಲಕ ಸಚಿನ್ ಸಮಯಪ್ರಜ್ಞೆ ತೋರಿ ಬಸ್ ಸುರಕ್ಷಿತ ನಿಲ್ಲಿಸಿ ಅಪಘಾತಕ್ಕೀಡಾದ ಬಸ್ನಲ್ಲಿದ್ದ ಜನರನ್ನು ರಕ್ಷಿಸಲು ನೆರವಾಗಿ ಅವರ ಪ್ರಯಾಣಕ್ಕೆ ಬೇರೆ ಬಸ್ ವ್ಯವಸ್ಥೆ ಮಾಡಿದ್ದು ಶ್ಲಾಘನೀಯ. ಇದೇ ಮಾನವೀಯತೆ. ಆದರೆ ಡಿಸೆಂಬರ್ ಹದಿನಾರು ಬೆಂಗಳೂರಿನ ಕದಿರೇನಹಳ್ಳಿಯಲ್ಲಿ ಬೈಕ್ನಲ್ಲಿ ಸಾಗುವಾಗ ವೆಂಕಟರಮಣ ಹೃದಯಾಘಾತಕ್ಕೊಳಗಾಗಿ ನಡುರಸ್ತೆಯಲ್ಲಿ ಬಿದ್ದಾಗ ಪತ್ನಿ ಕೈ ಒಡ್ಡಿ ಅಂಗಲಾಚಿ ಬೇಡಿದರೂ ಯಾವ ಸವಾರರೂ ಸಹಕರಿಸದೇ ವಿಲವಿಲ ಒದ್ದಾಡಿ ಸತ್ತದ್ದು ಸಮಾಜದ ಅಮಾನವೀಯತೆ. ಇಷ್ಟಾದರೂ ಸಮಾಜಕ್ಕೆ ಅವರ ಕಣ್ಣು ದಾನ ನೀಡಿದ ಅವರ ಕುಟುಂಬದ ಹೃದಯ ವೈಶಾಲ್ಯ ಅನುಕರಣೀಯ.

# ಪ್ರಧಾನಿ ಮೋದಿ ನೇತೃತ್ವದಲ್ಲಿ ಭಾರತ ಪ್ರಗತಿ ಸಾಧಿಸುತ್ತಿದೆ

## ಕಾಂಗ್ರೆಸ್‌ನಿಂದಾಗಿ ಕರ್ನಾಟಕ ಅವನತಿಯತ್ತ: ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು

**101ನೇ ಜನ್ಮ ದಿನಾಚರಣೆಯ ಕಾರ್ಯಕ್ರಮ**

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗುವತ್ತ ಸ್ಥಿರವಾಗಿ ಸಾಗುತ್ತಿದ್ದರೆ, ಕಾಂಗ್ರೆಸ್ ಸರ್ಕಾರದ ಅಡಿಯಲ್ಲಿ ಕರ್ನಾಟಕ ವಿರುದ್ಧ ದಿಕ್ಕಿನಲ್ಲಿ ಸಾಗುತ್ತಿದೆ ಎಂದು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ.

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 101ನೇ ಜನ್ಮ ದಿನಾಚರಣೆಯ ಕಾರ್ಯಕ್ರಮ, ಅಟಲ್ ಪ್ರಶಸ್ತಿ ಪ್ರದಾನ, ಉತ್ತಮ ಆಡಳಿತ ದಿನಾಚರಣೆಯ ಸಂದರ್ಭದಲ್ಲಿ ಮಾತನಾಡಿದ ಅವರು, ಕರ್ನಾಟಕವು ಒಂದು ಕಾಲದಲ್ಲಿ ಆಡಳಿತ ಮತ್ತು ಅಭಿವೃದ್ಧಿಗೆ ಮಾದರಿ ರಾಜ್ಯವಾಗಿತ್ತು ಎಂದು ಹೇಳಿದರು. ಕರ್ನಾಟಕವು ಒಂದು ಕಾಲದಲ್ಲಿ ಅನುಕರಣೀಯ ಆಡಳಿತಕ್ಕೆ ಸಮಾನಾರ್ಥಕವಾಗಿತ್ತು. ಅದು ಅತ್ಯುತ್ತಮ ಅಭಿವೃದ್ಧಿ ಮಾದರಿಯನ್ನು ಅಳವಡಿಸಿಕೊಂಡಿತ್ತು ಮತ್ತು ಇಡೀ ರಾಷ್ಟ್ರಕ್ಕೆ ನಾಯಕನಾಗಿ ಹೊರಹೊಮ್ಮಿತ್ತು. ಆದರೆ, ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ, ಈ ಎಲ್ಲಾ ಕಳೆದುಹೋಗಿವೆ ಮತ್ತು ರಾಜ್ಯವು ಈಗ ವಿರುದ್ಧ ದಿಕ್ಕಿನಲ್ಲಿ ಸಾಗುತ್ತಿದೆ ಎಂದರು.

ಸದ್ಯದ ಆಡಳಿತವು ಶಿಕ್ಷಣ ಕ್ಷೇತ್ರವನ್ನು ಸಂಪೂರ್ಣವಾಗಿ ಹಾನಿಗೊಳಿಸಿದೆ. ಕರ್ನಾಟಕವು ಒಂದು ಕಾಲದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿತ್ತು. ಉತ್ತಮ ರಾಜ್ಯದಲ್ಲಿ ಕ್ಷುಲ್ಲಕ ರಾಜಕೀಯ ನಡೆಯುತ್ತಿದೆ. ಆರೋಗ್ಯ, ಶಿಕ್ಷಣ, ಕೃಷಿ ಮತ್ತು ಕಂದಾಯ ಸೇರಿದಂತೆ ಎಲ್ಲಾ ಇಲಾಖೆಗಳಲ್ಲಿ ಆಡಳಿತ ಹದಗೆಟ್ಟಿದೆ. ಜನರು ಈಗ ಗಂಭೀರವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು.

ಉತ್ತಮ ಆಡಳಿತದ ಯುಗ ಮತ್ತೆ ಬರಬೇಕು ಎಂದು ಪ್ರತಿಪಾದಿಸಿದ ಕುಮಾರಸ್ವಾಮಿ, ಈ ಸರ್ಕಾರದ ದುರಾಡಳಿತದಿಂದ ಜನರು ಬೇಸತ್ತಿದ್ದಾರೆ. ಒಂದು ಕಾಲದಲ್ಲಿ ಐಟಿ-ಬಿಟಿ ರಾಜಧಾನಿ, ಶಿಕ್ಷಣ ಮತ್ತು ತಂತ್ರಜ್ಞಾನದ ಕೇಂದ್ರವಾಗಿದ್ದ ಬೆಂಗಳೂರು, ಮೂಲಸೌಕರ್ಯ ವಿಚಾರದಲ್ಲಿ ಸಂಪೂರ್ಣವಾಗಿ ಹದಗೆಟ್ಟಿದೆ ಎಂದು ತಿಳಿಸಿದರು. ಮೋದಿ ಸರ್ಕಾರದ ಅಡಿಯಲ್ಲಿ ಭಾರತ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಲು ಹೆಜ್ಜೆ ಹಾಕುತ್ತಿರುವ ಸಮಯದಲ್ಲಿ, ಕರ್ನಾಟಕ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂದು ಎಲ್ಲರೂ ಆಶ್ಚರ್ಯ ಪಡುತ್ತಾರೆ. ಅದು ಹಿಂದಕ್ಕೆ ಚಲಿಸುತ್ತಿದೆ ಮತ್ತು ಅವನತಿಯತ್ತ ಜಾರುತ್ತಿದೆ' ಎಂದು ಅವರು ತಿಳಿಸಿದರು. ಹೆಚ್ಚುತ್ತಿರುವ ಅಶಾಂತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, 'ಕರ್ನಾಟಕ ಮತ್ತೊಮ್ಮೆ ಎಲ್ಲಾ ಸಮುದಾಯಗಳಿಗೆ ಶಾಂತಿಯ ತೋಟವಾಗಬೇಕು. ಸಮಾಜದಲ್ಲಿ ಅಶಾಂತಿ ಇದೆ. ಕುಟುಂಬಗಳಲ್ಲಿ ಏನು ನಡೆಯುತ್ತಿದೆ ಎಂಬುದನ್ನು ನೋಡಿದಾಗ, ಅದು ಆತಂಕವನ್ನು ಉಂಟುಮಾಡುತ್ತದೆ.



ರಾಜ್ಯ ಸರ್ಕಾರವು ಸದುದ್ದೇಶ ಮತ್ತು ತಜ್ಞರ ಸಲಹೆಯನ್ನು ಸ್ವೀಕರಿಸುವ ಮನಸ್ಥಿತಿಯನ್ನು ಹೊಂದಿಲ್ಲ. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಬಗ್ಗೆಯೂ ಬೇಜವಾಬ್ದಾರಿಯಿಂದ ಮಾತನಾಡುವ ಸಂಸ್ಕೃತಿಯನ್ನು ಅದು ಬೆಳೆಸಿಕೊಂಡಿದೆ. ರಾಜ್ಯವು ಅಭಿವೃದ್ಧಿ ಹೊಂದಲು ಅಗತ್ಯವಿರುವ ಎಲ್ಲಾ ಸಾಮರ್ಥ್ಯ ಹೊಂದಿದೆ ಎಂದು ಹೇಳಿದರು.

> ಶತ್ರುಗಳಿಲ್ಲದ ನಾಯಕ, ರಾಷ್ಟ್ರಕ್ಕೆ ದೀರ್ಘಕಾಲ ಮತ್ತು ವಿಶಿಷ್ಟ ಸೇವೆ ಸಲ್ಲಿಸಿದ ವಾಜಪೇಯಿ ಅವರು ಅಜಾತಶತ್ರು ಆಗಿದ್ದಾರೆ. ವಾಜಪೇಯಿ ಅವರಂತಹ ನಾಯಕರು ಇಂದು ಅಪರೂಪ. ವಿದೇಶಾಂಗ ಸಚಿವರಾಗಿ, ವಿರೋಧ ಪಕ್ಷದ ನಾಯಕರಾಗಿ ಮತ್ತು ಪ್ರಧಾನಿಯಾಗಿ ಅವರ ಕೊಡುಗೆಗಳು ಅಪಾರ. ಅವರು ಬಿಜೆಪಿಯನ್ನು ಸಂಸತ್ತಿನಲ್ಲಿ ಕೇವಲ ಎರಡು ಸ್ಥಾನಗಳಿಂದ 170 ಸ್ಥಾನಗಳಿಗೆ ಕೊಂಡೊಯ್ದ ದೂರದೃಷ್ಟಿಯ ನಾಯಕರಾಗಿದ್ದರು
>
> – ಎಚ್‌ಡಿ ಕುಮಾರಸ್ವಾಮಿ

ತಂತ್ರಜ್ಞಾನ ಮುಂದುವರೆದು ಆರ್ಥಿಕ ಶಕ್ತಿ ಹೆಚ್ಚುತ್ತಿರುವಾಗ, ಬೆಳಿಗ್ಗೆ ದೂರದರ್ಶನ ಆನ್ ಮಾಡುವುದಕ್ಕೂ ಭಯವಾಗುತ್ತದೆ. ಯಾರಿಗೂ ನೆಮ್ಮದಿ ಇಲ್ಲ. ಈ ಕಾರಣಕ್ಕಾಗಿಯೇ ನಾನು ಶಾಲಾ ಮಟ್ಟದಲ್ಲಿ ಭಗವದ್ಗೀತೆಯನ್ನು ಕಲಿಸಬೇಕೆಂದು ಪ್ರತಿಪಾದಿಸಿದ್ದೇನೆ. ದುರದೃಷ್ಟವಶಾತ್, ಈ ವಿಷಯದಲ್ಲಿ ರಾಜಕೀಯವನ್ನು ಅನಗತ್ಯವಾಗಿ ಬೆರೆಸಲಾಗುತ್ತಿದೆ' ಎಂದರು.

## ಅರ್ಜಿ ಆಹ್ವಾನಿಸಿದ ಆಮ್ ಆದ್ಮ ಪಕ್ಷ

• ಉದಯವಾಹಿನಿ, ಬೆಂಗಳೂರು

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ನಡೆಯುವ ಚುನಾವಣೆಯಲ್ಲಿ ಸ್ಪರ್ಧಿಸಲು ಬಯಸುವ ಆಕಾಂಕ್ಷಿಗಳಿಂದ ಆಮ್ ಆದ್ಮ ಪಕ್ಷ (ಎಎಪಿ) ಅರ್ಜಿಗಳನ್ನು ಆಹ್ವಾನಿಸಿದೆ. ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಎಎಪಿ ಕಾರ್ಯಾಧ್ಯಕ್ಷ ಸೀತಾರಾಮ್ ಗುಂಡಪ್ಪ, ಐದು ನಗರ ಪಾಲಿಕೆಗಳ ಚುನಾವಣೆಯಲ್ಲಿ ಎಎಪಿಯಿಂದ ಸ್ಪರ್ಧಿಸಲು ಇಚ್ಛಿಸುವವರು ಅರ್ಜಿ ಸಲ್ಲಿಸಬಹುದು.

ಎಲ್ಲರೂ ಒಂದಾಗಿ ಚುನಾವಣೆಯಲ್ಲಿ ಗೆಲ್ಲುವ ಮೂಲಕ ಸುಂದರ ಬೆಂಗಳೂರನ್ನು ಕಟ್ಟೋಣ ಎಂದರು. ಕಳೆದ ಐದು ವರ್ಷಗಳಿಂದ ಬೆಂಗಳೂರಿನಲ್ಲಿ ಚುನಾವಣೆಗಳನ್ನು ನಡೆಸದೆ ಸಂವಿಧಾನ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬುಡಮೇಲು ಮಾಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಇದಕ್ಕೆ ಇತಿಶ್ರೀ ಹಾಡುವ ಸಮಯ ಬಂದಿದೆ. ನಗರ ಪಾಲಿಕೆ ಚುನಾವಣೆಗೆ ಎಎಪಿ ಸ್ಪರ್ಧಿಸಿ, ಜಯಗಳಿಸುವ ಮೂಲಕ ಆಡಳಿತ ನಡೆಸಲು ಸಜ್ಜಾಗಿದೆ ಎಂದು ಹೇಳಿದರು.

## ಬೆಂಗಳೂರು-ಹುಬ್ಬಳ್ಳಿ, ಗದಗ ಬೈಪಾಸ್ ಮೂಲಕ ವಿಜಯಪುರಕ್ಕೆ ವಿಶೇಷ ರೈಲು

• ಉದಯವಾಹಿನಿ, ಬೆಂಗಳೂರು

ಕ್ರಿಸ್ಮಸ್, ವರ್ಷಾಂತ್ಯ ರಜೆ ಹಿನ್ನೆಲೆಯಲ್ಲಿ ಪ್ರಯಾಣಿಕರ ದಟ್ಟಣೆ ತಗ್ಗಿಸಲು ನೈರುತ್ಯ ರೈಲ್ವೆಯು ಬೆಂಗಳೂರು-ಹುಬ್ಬಳ್ಳಿ, ಗದಗ ಬೈಪಾಸ್ ಮೂಲಕ ವಿಜಯಪುರಕ್ಕೆ ಕಲ್ಪಿಸಿರುವ ವಿಶೇಷ ರೈಲು ಸೇವೆಯನ್ನು ಖಾಯಂಗೊಳಿಸುವಂತೆ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಮನವಿ ಮಾಡಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಸಚಿವ ಎಂ.ಬಿ.ಪಾಟೀಲ್ ಅವರು, ಕ್ರಿಸ್ಮಸ್ ಮತ್ತು ವರ್ಷಾಂತ್ಯದ ರಜೆ ಹಿನ್ನೆಲೆಯಲ್ಲಿ ಪ್ರಯಾಣಿಕರ ದಟ್ಟಣೆ ತಗ್ಗಿಸಲು ನೈರುತ್ಯ ರೈಲ್ವೆಯು ಇದೇ ಮೊದಲ ಬಾರಿಗೆ ಬೆಂಗಳೂರಿನಿಂದ ಹುಬ್ಬಳ್ಳಿ ಮತ್ತು ಗದಗ ಬೈಪಾಸ್ ಮೂಲಕ ವಿಜಯಪುರಕ್ಕೆ ವಿಶೇಷ ರೈಲನ್ನು ಓಡಿಸಿರುವುದು ಸ್ವಾಗತಾರ್ಹವಾಗಿದೆ ಎಂದು ಹೇಳಿದ್ದಾರೆ. ಬೆಂಗಳೂರು ವಿಜಯಪುರ ರೈಲುಗಳನ್ನು ಹುಬ್ಬಳ್ಳಿ ಗದಗ ಬೈಪಾಸ್ ಮೂಲಕ ಓಡಿಸಲು ನಡೆದ ನಮ್ಮ ಪ್ರಯತ್ನಕ್ಕೆ ಮೊದಲ ಯಶಸ್ಸು ದೊರೆತಿದೆ. ಈ ಹೊಸ ಮಾರ್ಗದ ಮೂಲಕ ಒಂದು ವಿಶೇಷ ರೈಲು ಯಶಸ್ವಿಯಾಗಿ ಓಡಿದೆ, ಇದರಿಂದ ಇಂಜಿನ್ ಬದಲಾವಣೆ ತಪ್ಪಿದ್ದು ಸಮಯ ಉಳಿತಾಯವಾಗಿದೆ. ಬಾಗಲಕೋಟೆ ವಿಜಯಪುರದ ಎಲ್ಲಾ ರೈಲುಗಳನ್ನು ಈ ಬೈಪಾಸ್ ಮೂಲಕ ಓಡಿಸಿದರೆ, ಪ್ರಯಾಣದ ಸಮಯವನ್ನು 14 ರಿಂದ 10 ಗಂಟೆಗಳಿಗೆ ಇಳಿಸಬಹುದು. ಜೊತೆಗೆ ಪ್ರಯಾಣ ದರವೂ ಕಡಿಮೆಯಾಗಲಿದೆ.

## ರಾಯರ ಮಠದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ಅಖಂಡ ಭಾಗವತ ಪ್ರವಚನ

• ಉದಯವಾಹಿನಿ, ಬೆಂಗಳೂರು

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಸುಧೀಂದ್ರನಗರದ ರಾಯರ ಮಠದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ಡಿಸೆಂಬರ್ 30, ಮಂಗಳವಾರ ಬೆಳಗ್ಗೆ 6-00 ರಿಂದ ರಾತ್ರಿ 12-30ರ ವರೆಗೆ ನಾಡಿನ ಪ್ರಸಿದ್ಧ ವಿದ್ವಾಂಸರುಗಳಿಂದ ಅಖಂಡ ಭಾಗವತ ಪ್ರವಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಪ್ರತಿಯೊಬ್ಬ ಪಂಡಿತರ ಪ್ರವಚನ ಅವಧಿ ಒಂದೂವರೆ ಗಂಟೆ ನಿಗದಿಪಡಿಸಲಾಗಿದೆ. ಉಪನ್ಯಾಸ ನೀಡುವ ಪಂಡಿತರು : ಶ್ರೀ ಚಂದ್ರಶೇಖರ ಆಚಾರ್ (ಸ್ಕಂದ-1) ಶ್ರೀ ಕಲ್ಲಾಪುರ ಪವಮಾನಾಚಾರ್ (ಸ್ಕಂದ-2) ಶ್ರೀ ಕಲ್ಯಾ ಶ್ರೀಕಾಂತಾಚಾರ್ (ಸ್ಕಂದ-3) ಶ್ರೀ ಬ್ರಹ್ಮಣ್ಯಾಚಾರ್ (ಸ್ಕಂದ-4) ಶ್ರೀ ದ್ವೈಪಾಯನಾಚಾರ್ ಜೋಶಿ (ಸ್ಕಂದ-5), ಶ್ರೀ ಜೆ.ಎಂ. ಚಿಮ್ಮಲಗಿ ಆಚಾರ್ಯ (ಸ್ಕಂದ-6), ಶ್ರೀ ವೆಂಕಟನರಸಿಂಹಾಚಾರ್ ಸ್ಕಂದ-7 ಶ್ರೀ ಪ್ರಶಾಂತ ಭಾರ್ಗವಾಚಾರ್ (ಸ್ಕಂದ-8), ಶ್ರೀ ಮಾಳಗಿ ಆನಂದತೀರ್ಥಾಚಾರ್ (ಸ್ಕಂದ-9), ಶ್ರೀ ರಾಮವಿಠಲಾಚಾರ್ (ಸ್ಕಂದ-10) ಭಾಗ-1 ಶ್ರೀ ಸುಧಾಮಾಚಾರ್ (ಸ್ಕಂದ-10 ಭಾಗ-2), ಶ್ರೀ ಗುರುಪ್ರಸಾದಾಚಾರ್ (ಸ್ಕಂದ-11) ಮತ್ತು ಶ್ರೀ ನಾರಾಯಣಾಚಾರ್ (ಸ್ಕಂದ-12). ಕಾರ್ಯಕ್ರಮ ನಡೆಯುವ ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು560003.



## ಬೀದಿ ನಾಯಿಗಳನ್ನು ದತ್ತು ಪಡೆಯಲು ಅವಕಾಶ: ಬೆಂಗಳೂರು ಕೇಂದ್ರ ನಗರ ಪಾಲಿಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಮುದಾಯದ ನಾಯಿಗಳು/ ಬೀದಿ ನಾಯಿಗಳನ್ನು ಮಾನವೀಯ ನಿರ್ವಹಣೆಯ ಭಾಗವಾಗಿ, ಸಾರ್ವಜನಿಕರು, ಸಂಘ-ಸಂಸ್ಥೆಗಳು, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಮತ್ತು ಸ್ವಯಂಸೇವಾ ಸಂಸ್ಥೆಗಳು ದತ್ತು ಪಡೆದುಕೊಳ್ಳುವಂತೆ ಬೆಂಗಳೂರು ಕೇಂದ್ರ ನಗರ ಪಾಲಿಕೆ ಕೋರಿದೆ. ದತ್ತು ನೀಡಲಾಗುವ ನಾಯಿಗಳ ಆರೋಗ್ಯ ತಪಾಸಣೆ ಮಾಡಿ, ಲಸಿಕೆ ನೀಡಿ, ಸಂತಾನಶಕ್ತಿ ನಿರೋಧಕ ಶಸ್ತ್ರಚಿಕಿತ್ಸೆ ಮಾಡಿರಲಾಗಿರುತ್ತದೆ. ಬೀದಿ ನಾಯಿಗಳ ದತ್ತಕವು ಪ್ರಾಣಿ ಕಲ್ಯಾಣವನ್ನು ಉತ್ತೇಜಿಸುವುದರ ಜೊತೆಗೆ ನಗರದಲ್ಲಿ ಸಹಬಾಳ್ವೆ, ಸಾರ್ವಜನಿಕ ಆರೋಗ್ಯದ ರಕ್ಷಣೆಗೆ ಸಹಕಾರಿಯಾಗುತ್ತದೆ ಎಂದು ಪಶುಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ. ಬೀದಿ ನಾಯಿಗಳನ್ನು ದತ್ತು ಪಡೆಯಲು ಇಚ್ಛಿಸುವವರು ಎನ್.ಆರ್. ಚೌಕದಲ್ಲಿರುವ ನಗರ ಪಾಲಿಕೆಯ ಪಶು ಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು.

## ಬ್ಲಾಕ್‌ಸ್ಪಾಟ್ ನಿರ್ಮೂಲನೆಗೆ ಕಸ ಕಿಯೋಸ್ಕ್ ಆರಂಭ

• ಉದಯವಾಹಿನಿ, ಬೆಂಗಳೂರು

ಕಸ ಸುರಿಯುವ ಕಪ್ಪು ಚುಕ್ಕೆ ಪ್ರದೇಶಗಳನ್ನು (ಬ್ಲಾಕ್ ಸ್ಪಾಟ್) ನಿರ್ಮೂಲನೆ ಮಾಡಲು ಪಾಲಿಕೆಯು ಇನ್ನಿಲ್ಲದ ಕಸರತ್ತು ನಡೆಸುತ್ತಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಗುರುತಿಸಲಾದ ಬ್ಲಾಕ್‌ಸ್ಪಾಟ್‌ಗಳ ನಿರ್ಮೂಲನೆಗೆ ದಿನದ ಯಾವುದೇ ಸಮಯದಲ್ಲಿ ಕಸ ನೀಡಲು ಜನರಿಗೆ ಅವಕಾಶ ಕಲ್ಪಿಸಲು ಕಿಯೋಸ್ಕ್‌ಗಳನ್ನನ ಆರಂಭಿಸಲಾಗಿದೆ. ಕಸ ಕಿಯೋಸ್ಕ್‌ಗಳು ನಗರದ ಕೆಲವು ಸ್ಥಳಗಳಲ್ಲಿ ಕಾರ್ಯನಿರ್ವಹಿಸಲು ಪ್ರಾರಂಭಿಸಿವೆ, ನಿಯಮಿತವಾಗಿ ಕಸ ಸಂಗ್ರಹ ತಪ್ಪಿಸುವ ವ್ಯಕ್ತಿಗಳು ತಮ್ಮ ಕಸವನ್ನು ಇಲ್ಲಿ ಹಾಕಬಹುದಾಗಿದೆ.

ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ಸುಮಾರು 70 ಕಸ ಕಿಯೋಸ್ಕ್‌ಗಳನ್ನು ಕಸ ಕಿಯೋಸ್ಕ್‌ಗಳು ಸ್ಥಾಪಿಸಲು ಯೋಜಿಸುತ್ತಿದೆ ಪ್ರಸ್ತುತ, ಕದಿರೇನಹಳ್ಳಿ, ಪ್ರಗತಿಪುರ ಮತ್ತು ಸರಬಂಡೆಪಾಳ್ಯದಲ್ಲಿ ಕಿಯೋಸ್ಕ್‌ಗಳನ್ನು ಸ್ಥಾಪಿಸಲಾಗಿದೆ, ಶೀಘ್ರದಲ್ಲೇ ನಗರದಾದ್ಯಂತ ಕಸ ಸಂಗ್ರಹ ಕಳಪೆಯಾಗಿರುವ ಸ್ಥಳಗಳಲ್ಲಿ ಕಿಯೋಸ್ಕ್‌ಗಳನ್ನು ಸ್ಥಾಪಿಸಲಾಗುವುದು ಎಂದು ಮತ್ತು BSWML ಅಧಿಕಾರಿಗಳು ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

ನಾಗರಿಕರು ಕಸ ಕಿಯೋಸ್ಕ್ ಯೋಜನೆಯನ್ನು ಸ್ವಾಗತಿಸಿದ್ದಾರೆ, ಆದರೆ ಕಿಯೋಸ್ಕ್‌ಗಳು ಮಾನವ ರಹಿತವಾಗಿವೆ, ಹೀಗಾಗಿ ಅವು ಭವಿಷ್ಯದಲ್ಲಿಯೂ ಕಾರ್ಯನಿರ್ವಹಿಸುತ್ತಲೇ ಇರುತ್ತವೆ ಎಂದು ಅವರು ತಮ್ಮ ಕಳವಳವನ್ನು ವ್ಯಕ್ತಪಡಿಸಿದರು.

ಕಿಯೋಸ್ಕ್‌ಗಳ ಕಲ್ಪನೆಯು ಸ್ವಾಗತಾರ್ಹ ಕ್ರಮವಾಗಿದೆ ಎಂದು ಅವರು ಹೇಳಿದರು ಏಕೆಂದರೆ ಜವಾಬ್ದಾರಿಯುತ ನಾಗರಿಕರು ತಮ್ಮ ಕಸವನ್ನು ಹಸ್ತಾಂತರಿಸಲು ಹತ್ತಿರದ ಕಿಯೋಸ್ಕ್‌ಗೆ ಹೋಗುತ್ತಾರೆ. ಕಿಯೋಸ್ಕ್‌ಗಳು ಎರಡು ಪಾಳಿಗಳಲ್ಲಿ ಕಾರ್ಯನಿರ್ವಹಿಸುತ್ತವೆ ಮತ್ತು ಪ್ರದೇಶದ ಸಂಯೋಜನೆಯನ್ನು ಆಧರಿಸಿ, ಹಾಗೂ ಪ್ರತಿಯೊಂದರ ಸಮಯ ಬದಲಾಗುತ್ತದೆ ಎಂದು ಬಿಎಸ್‌ಡಬ್ಲ್ಯುಎಂಎಲ್ ಅಧಿಕಾರಿಗಳು ಸಮರ್ಥಿಸಿಕೊಂಡರು.

> ಜನರು, ವಿಶೇಷವಾಗಿ ಗಂಡ ಮತ್ತು ಹೆಂಡತಿ ಇಬ್ಬರೂ ಕೆಲಸ ಮಾಡುವ ಮನೆಗಳಲ್ಲಿ, ಕಾರ್ಪೊರೇಷನ್ ವಾಹನವು ಪ್ರತಿದಿನ ತಮ್ಮ ಮನೆ ಬಾಗಿಲಿಗೆ ಬಂದಾಗ ಕಸ ನೀಡಲು ತಪ್ಪಿಸಿಕೊಳ್ಳುವುದು ತುಂಬಾ ಸಾಮಾನ್ಯವಾಗಿದೆ. ಕಸದ ವಾಸನೆ ಸೇರಿದಂತೆ ಹಲವು ಕಾರಣಗಳಿಗಾಗಿ, ಬೆಕ್ಕುಗಳು, ನಾಯಿಗಳು ಮತ್ತು ಇಲಿಗಳು ತಮ್ಮ ಮನೆಗಳ ಪಕ್ಕದಲ್ಲಿ ಕಸವನ್ನು ಚೆಲ್ಲುವ ಭಯದಿಂದ, ಜನರು ಯಾವಾಗಲೂ ತಮಗೆ ಅನುಕೂಲಕರವಾದ ಸ್ಥಳಗಳಲ್ಲಿ ವಿಲೇವಾರಿ ಮಾಡಲು ಬಯಸುತ್ತಾರೆ, ಇದು ಅಂತಿಮವಾಗಿ ಈ ಪ್ರದೇಶದಲ್ಲಿ ಕಪ್ಪು ಚುಕ್ಕೆಯಾಗುತ್ತದೆ.
>
> ಕದಿರೇನಹಳ್ಳಿ ನಿವಾಸಿ ಚಂದ್ರು

## ನರೇಗಾದಂತಹ ಜನಪರ ಯೋಜನೆ ಮರುಸ್ಥಾಪನೆಗೆ ಜನಾಗ್ರಹದ ಒತ್ತಡ ಅತ್ಯಗತ್ಯ: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ನರೇಗಾದಂತಹ ಜನಪರ ಯೋಜನೆಯನ್ನು ಮರುಸ್ಥಾಪಿಸಲು ಜನಾಗ್ರಹದ ಒತ್ತಡ ಅತ್ಯಗತ್ಯವಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆಯವರು ಹೇಳಿದ್ದಾರೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಹೆಸರನ್ನು ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕಾ ಮಿಷನ್ (ಗ್ರಾಮೀಣ) ಎಂದು ಮರುನಾಮಕರಣ ಮಾಡುವ ಕೇಂದ್ರ ಸರ್ಕಾರದ ಯೋಜನೆಗೆ ಪ್ರಿಯಾಂಕ್ ಖರ್ಗೆಯವರು ವಿರೋಧ ವ್ಯಕ್ತಪಡಿಸಿದ್ದಾರೆ.

ಭೂ ರಹಿತ ಕಾರ್ಮಿಕರಿಗೆ ಉದ್ಯೋಗ ಸಂಪಾದನೆಯ ಭರವಸೆಯನ್ನು ನೀಡುವುದರೊಂದಿಗೆ ಸಣ್ಣ, ಅತಿ ಸಣ್ಣ ರೈತರು ಹೊಸ ಕೃಷಿ ಚಟುವಟಿಕೆಗಳಿಗೂ ನೆರವಾಗಿದೆ, ಅಲ್ಲದೆ ಉಪ ಕಸುಬುಗಳನ್ನು ಕೈಗೊಳ್ಳಲು ನೆರವಾಗುವ ಮೂಲಕ ಹೆಚ್ಚುವರಿ ಆದಾಯಕ್ಕೆ ದಾರಿ ಮಾಡಿಕೊಟ್ಟಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕಿನ ಮೇಲಿನಜೂಗಾನಹಳ್ಳಿ ಗ್ರಾಮ ಪಂಚಾಯಿತಿಯ ತುರುವನಹಳ್ಳಿ ಗ್ರಾಮದ ಅಂಬರೀಶ್ ಅವರು ನರೇಗಾ ಯೋಜನೆಯಡಿ ರೂ.70,000 ಆರ್ಥಿಕ ನೆರವು ಪಡೆದು ಸುಸಜ್ಜಿತ ಕುರಿ ಶೆಡ್ ನಿರ್ಮಿಸಿಕೊಂಡು ಉತ್ತಮ ಆದಾಯ ಪಡೆಯುತ್ತಿದ್ದಾರೆ.

ಹೀಗೆ ಬಹು ಆಯಾಮದಲ್ಲಿ ಗ್ರಾಮೀಣ ಜನರ ಬದುಕನ್ನು ಸದೃಢಗೊಳಿಸುತ್ತಿರುವ ನರೇಗಾ ಯೋಜನೆಯನ್ನು ಕೇಂದ್ರ ಸರ್ಕಾರ ಬಂದ್ ಮಾಡಿದೆ ಹಾಗೂ ಬದಲಾದ ಯೋಜನೆಯು ಗ್ರಾಮೀಣ ಜನರ ಭರವಸೆಯನ್ನು ಅತಂತ್ರಗೊಳಿಸಿದೆ. ಹೀಗಾಗಿ ನರೇಗಾದಂತಹ ಜನಪರ ಯೋಜನೆಯನ್ನು ಮರುಸ್ಥಾಪಿಸಲು ಜನಾಗ್ರಹದ ಒತ್ತಡ ಅತ್ಯಗತ್ಯವಾಗಿದೆ ಎಂದು ಹೇಳಿದ್ದಾರೆ.



## ಖುದ್ದು ಭದ್ರತೆ ಪರಿಶೀಲಿಸಿದ ಪೊಲೀಸ್ ಆಯುಕ್ತ, ಬೆಂಗಳೂರಿನಲ್ಲಿ ಹೈ ಅಲರ್ಟ್

• ಉದಯವಾಹಿನಿ, ಬೆಂಗಳೂರು

ಹೊಸ ವರ್ಷದ ಸ್ವಾಗತಕ್ಕೆ ಸಿಲಿಕಾನ್ ಸಿಟಿ ಬೆಂಗಳೂರು ಸಜ್ಜಾಗಿದ್ದು, ಈ ನಡುವೆ ಶಾಂತಿ ಮತ್ತು ಸುರಕ್ಷತೆ ಕಾಪಾಡಲು ಬೆಂಗಳೂರು ನಗರ ಪೊಲೀಸ್ ಸಿದ್ಧತೆ ನಡೆಸುತ್ತಿದ್ದಾರೆ. ನಗರಾದ್ಯಂತ ಜಾರಿಗೊಳಿಸಿರುವ ಭದ್ರತಾ ಕ್ರಮಗಳನ್ನು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಖುದ್ದು ಪರಿಶೀಲನೆ ನಡೆಸಿದ್ದಾರೆ. ಸಿಸಿಟಿವಿ ಮತ್ತು ಲೈವ್ ಮಾನಿಟರಿಂಗ್ ವ್ಯವಸ್ಥೆ, AI ಆಧಾರಿತ ಜನಸಂಚಾರ ವಿಶ್ಲೇಷಣಾ ಸಾಧನಗಳು, ಬ್ಯಾರಿಕೇಡ್‌ಗಳು ಪ್ರವೇಶ ನಿಯಂತ್ರಣ, ತುರ್ತು ಪ್ರತಿಕ್ರಿಯೆ ಭದ್ರತಾ ಪ್ರೋಟೋಕಾಲ್‌ಗಳನ್ನು ಆಯುಕ್ತರು ಪರಿಶೀಲಿಸಿದ್ದಾರೆ.

ನಂತರ ಮಾತನಾಡಿದ ಸೀಮಂತ್ ಕುಮಾರ್ ಅವರು, ಜನಸಂಚಾರವನ್ನು ವಾಸ್ತವವಾಗಿ ಅರ್ಥಮಾಡಿಕೊಳ್ಳಲು ಕ್ರಿಸ್ ಮಸ್ ಹಬ್ಬದ ದಿನದಂದು ಭೇಟಿ ನೀಡಲಾಗಿದೆ. ಹೊಸ ವರ್ಷದ ದಿನದ ಭದ್ರತೆಗೆ ನಾಗರಿಕರೂ ಕೂಡ ಪೊಲೀಸರಿಗೆ ಸಹಕಾರ ನೀಡಬೇಕು. ಪೊಲೀಸರು ನೀಡುವ ಸೂಚನೆಗಳನ್ನು ಪಾಲಿಸಿ, ಸುರಕ್ಷಿತವಾಗಿ ಹೊಸ ವರ್ಷವನ್ನು ಆಚರಿಸಬೇಕೆಂದು ಹೇಳಿದರು.



ಉದಯವಾಹಿನಿ ಚಿತ್ರ

ಪೊಲೀಸರು ಈಗಾಗಲೇ ತಯಾರಿಗಳನ್ನು ನಡೆಸಿದ್ದಾರೆ. ಯಾವೆಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ, ಅವುಗಳು ಸಮರ್ಥವಾಗಿವೆ ಎಂದು ವಿಶ್ಲೇಷಣೆ ಮಾಡುತ್ತಿದ್ದೇವೆ. ಯಾವುದೇ ಹೆಚ್ಚುವರಿ ಅಗತ್ಯಗಳು ಇದ್ದರೆ ಅವುಗಳನ್ನು ಗಮನಿಸುತ್ತೇವೆ. ಮಹಿಳೆಯರ ಭದ್ರತೆ, ಜನಸಂಚಾರ ಮತ್ತು ಟ್ರಾಫಿಕ್ ನಿಯಂತ್ರಣ ಆದ್ಯತೆಯಾಗಿದ್ದು, ನಗರವನ್ನು ಸುರಕ್ಷಿತವಾಗಿ ಕಾಯ್ದುಕೊಳ್ಳುವುದೇ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

## 400ಕ್ಕೂ ಹೆಚ್ಚು ಮಾಲಿನ್ಯ ಪರೀಕ್ಷಾ ಕೇಂದ್ರಗಳು ಬಂದ್!

• ಉದಯವಾಹಿನಿ, ಬೆಂಗಳೂರು

ಸಾರಿಗೆ ಇಲಾಖೆಯು ಸುಮಾರು ಒಂದು ತಿಂಗಳಿನಿಂದ ಹೊಲೊಗ್ರಾಮ್ ಸ್ಟಿಕ್ಕರ್‌ಗಳನ್ನು ಪೂರೈಸಲು ವಿಫಲವಾದ ನಂತರ ರಾಜ್ಯಾದ್ಯಂತ 400 ಕ್ಕೂ ಹೆಚ್ಚು ಮಾಲಿನ್ಯ ಪರಿಶೀಲನಾ ಕೇಂದ್ರಗಳು ಮುಚ್ಚಲ್ಪಟ್ಟಿವೆ.ಹೀಗಾಗಿ ವಾಹನ ಮಾಲಿನ್ಯ ಪರಿಶೀಲನೆ ವ್ಯವಸ್ಥೆಯು ಬಹುತೇಕ ಕುಸಿದಿದೆ. ಮುಚ್ಚಿದ ಕೇಂದ್ರಗಳಲ್ಲಿ ಹೆಚ್ಚಿನವು ಪೆಟ್ರೋಲ್ ಬಂಕ್‌ಗಳಿಗೆ ಸಂಬಂಧಿಸಿವೆ ಹಾಗೂ ಇದು ದಿನನಿತ್ಯದ ಮಾಲಿನ್ಯ ಹೊರಸೂಸುವಿಕೆ ಪರೀಕ್ಷೆಯನ್ನು ದುರ್ಬಲಗೊಳಿಸುತ್ತದ. ಸಾವಿರಾರು ವಾಹನ ಚಾಲಕರು ಮಾನ್ಯ ಪ್ರಮಾಣಪತ್ರಗಳಿಲ್ಲದೆ ಸಿಲುಕಿ ದಂಡ ಪಾವತಿಸಬೇಕಾಗುತ್ತದೆ.

**ಹೊಲೊಗ್ರಾಮ್ ಸ್ಟಿಕ್ಕರ್ ಸರಬರಾಜು ಸ್ಥಗಿತ**

ಕಳೆದ ಎಂಟು ದಿನಗಳಿಂದ ನಾವು ಶಟರ್‌ಗಳನ್ನು ಮುಚ್ಚಬೇಕಾಯಿತು ಎಂದು ಕರ್ನಾಟಕ ರಾಜ್ಯ ಪೆಟ್ರೋಲಿಯಂ ಡೀಲರ್‌ಗಳ ಸಂಘದ ಮಾಜಿ ಅಧ್ಯಕ್ಷ ಬಿ.ಆರ್. ರವೀಂದ್ರನಾಥ್ ಹೇಳಿದರು. ರಾಜ್ಯದಲ್ಲಿರುವ 2600 ಪಿ.ಯು.ಸಿ ಕೇಂದ್ರಗಳಲ್ಲಿ, ಹೆಚ್ಚಿನವು ಈಗ ಕಾರ್ಯನಿರ್ವಹಿಸುತ್ತಿಲ್ಲ.

ಹೊಲೊಗ್ರಾಮ್ ಸ್ಟಿಕ್ಕರ್‌ಗಳಿಲ್ಲದೆ ಹಾಗೂ ಪ್ರಮಾಣಪತ್ರಗಳನ್ನು ನೀಡಲಾಗುವುದಿಲ್ಲ ಎಂದಿದ್ದಾರೆ.



ಉದಯವಾಹಿನಿ ಚಿತ್ರ

ನಾವು ಸರ್ಕಾರಕ್ಕೆ ಪತ್ರ ಬರೆದಿದ್ದೇವೆ ಆದರೆ ಅವರು ಒಂದಲ್ಲ ಒಂದು ಕಾರಣವನ್ನು ಉಲ್ಲೇಖಿಸಿ ಸುಮಾರು ಎರಡು ತಿಂಗಳಿನಿಂದ ಅದನ್ನು ತೆರವುಗೊಳಿಸಿಲ್ಲ. ಈಗ ಅವರು ಅದನ್ನು ಹಣಕಾಸು ಇಲಾಖೆಗೆ ಕಳುಹಿಸಿದ್ದಾರೆ. ಅಲ್ಲಿ ಎಷ್ಟು ಸಮಯ ತೆಗೆದುಕೊಳ್ಳುತ್ತದೆ ಎಂದು ಯಾರಿಗೂ ತಿಳಿದಿಲ್ಲ.

ಸುಮಾರು ಒಂದು ತಿಂಗಳಿನಿಂದ ನಾವು ತುರ್ತು ಕ್ರಮವಾಗಿ 5 ಲಕ್ಷ ಹೊಲೊಗ್ರಾಮ್ ಸ್ಟಿಕ್ಕರ್‌ಗಳನ್ನು ವಿತರಿಸಿದ್ದೇವೆ ಆದರೆ ಈಗ ನಾವು ಅದನ್ನು ಮುಂದುವರಿಸಲು ಸಾಧ್ಯವಿಲ್ಲ ಎಂದಿದ್ದಾರೆ, ಕೆಲವು ನಿರ್ಲಜ್ಜ ವ್ಯಕ್ತಿಗಳು ನಕಲಿ ಹೊಲೊಗ್ರಾಮ್‌ಗಳನ್ನು ಬಳಸಿ ಎಮಿಶನ್ ಟೆಸ್ಟ್ ಕೇಂದ್ರಗಳನ್ನು ನಡೆಸುತ್ತಿದ್ದಾರೆ ಎಂಬ ದೂರುಗಳು ಬಂದಿವೆ. ಆದರೆ ಈ ಸಂಬಂಧ ಪ್ರತಿಕ್ರಿಯಿಸಲು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಲಭ್ಯವಿರಲಿಲ್ಲ. ಪರಿಹಾರಕ್ಕೆ ಸ್ಪಷ್ಟ ಸಮಯವಿಲ್ಲದ ಕಾರಣ, ಸರಬರಾಜು ಮಾಡುವಂತೆ ಸರ್ಕಾರದ ಮೇಲೆ ಒತ್ತಡ ಹೆಚ್ಚುತ್ತಿದೆ.

> ಭದ್ರತಾ ಹೊಲೊಗ್ರಾಮ್‌ಗಳ ಖರೀದಿ ಮತ್ತು ವಿತರಣೆಯಲ್ಲಿನ ವಿಳಂಬದಿಂದಾಗಿ ಬಿಕ್ಕಟ್ಟು ಉಂಟಾಗಿದೆ, ಇದು ನಕಲಿಯನ್ನು ತಡೆಗಟ್ಟಲು ಕಡ್ಡಾಯ ಅವಶ್ಯಕತೆಯಾಗಿದೆ. ಮಾಲಿನ್ಯ ಪರಿಶೀಲನಾ ಕೇಂದ್ರಗಳು ಕಾರ್ಯನಿರ್ವಹಿಸಲು ಸಾಧ್ಯವಿಲ್ಲ, ವಾಹನ ಮಾಲೀಕರು ಕಾನೂನನ್ನು ಪಾಲಿಸಲು ಸಾಧ್ಯವಿಲ್ಲ ಎಂದಿದ್ದಾರೆ. ಈ ಬಿಕ್ಕಟ್ಟು ಸಾರಿಗೆ ಇಲಾಖೆಯೊಳಗಿನ ಆಡಳಿತಾತ್ಮಕ ಅಡಚಣೆ ಮತ್ತು ಕಳಪೆ ಸಮನ್ವಯವನ್ನು ಬಹಿರಂಗಪಡಿಸುತ್ತದೆ ಎಂದು ಹೆಸರು ಬಹಿರಂಗಪಡಿಸಲು ಬಯಸದ ತಿಳಿಸಿದ್ದಾರೆ.
>
> -ಅಧಿಕಾರಿಯೊಬ್ಬರು

## ಸ್ವಯಂಕೃತ ಅಪರಾಧದಿಂದ ಪ್ರತಿಪಕ್ಷದಲ್ಲಿ ಕುಳಿತಿದ್ದೇವೆ: ಈಗಲೇ ಚುನಾವಣೆ ನಡೆದರೂ ಬಿಜೆಪಿಗೆ ಬಹುಮತ


• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಯಾವಾಗ ಚುನಾವಣೆ ನಡೆದರೂ ಬಿಜೆಪಿ ಸ್ವಂತ ಬಲದ ಮೇಲೆ ಅಧಿಕಾರಕ್ಕೆ ಬರಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪಕ್ಷದ ಕಚೇರಿಯಲ್ಲಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 101ನೇ ಜನ್ಮದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅಥವಾ 2028 ರಲ್ಲಿ ಚುನಾವಣೆ ನಡೆದರೆ, ಬಿಜೆಪಿ ಸುಮಾರು 130 ರಿಂದ 140 ಸ್ಥಾನಗಳನ್ನು ಗೆಲ್ಲುವ ಮೂಲಕ ಸ್ವಂತವಾಗಿ ಅಧಿಕಾರಕ್ಕೆ ಬರುವ ವಿಶ್ವಾಸವಿದೆ ಎಂದು ಅವರು ಹೇಳಿದರು.

ಕರ್ನಾಟಕವು ಮುಂದೊಂದು ದಿನ ದಕ್ಷಿಣ ಭಾರತದಲ್ಲಿ ಬಿಜೆಪಿಯ ಭದ್ರ ಕೋಟೆ ಆಗಲಿದೆ ಎಂಬ ದೂರದೃಷ್ಟಿತ್ವ ವಾಜಪೇಯಿ ಅವರಲ್ಲಿತ್ತು. ಕಾರ್ಯಕರ್ತರ ಕುರಿತು ಅದಮ್ಯ ವಿಶ್ವಾಸ ಅವರದಾಗಿತ್ತು. ಸೋಲಿನಿಂದ ಅಂಜುವ ಪ್ರಶ್ನೆಯೇ ಇಲ್ಲ ಎಂಬ ಮಾತನ್ನು ವಾಜಪೇಯಿ ಅವರು ಹೇಳುತ್ತಿದ್ದರು. ಪಕ್ಷವನ್ನು ದೃಢವಾಗಿ ಕಟ್ಟುವ ಆತ್ಮವಿಶ್ವಾಸವನ್ನು ಕಾರ್ಯಕರ್ತರಲ್ಲಿ ಅವರು ತುಂಬಿದ್ದರು ಎಂದು ಹೇಳಿದರು.

ವಾಜಪೇಯಿ ಅವರ ದೇಶಭಕ್ತಿ ನಮಗೆ ಪ್ರೇರಣೆ ಆಗಬೇಕು.



ಅವರ ದೂರದೃಷ್ಟಿತ್ವ ಅರ್ಥ ಮಾಡಿಕೊಳ್ಳಿ. ಅಸ್ತಿತ್ವ ಕಳಕೊಳ್ಳುತ್ತಿರುವ ಕಾಂಗ್ರೆಸ್ಸಿನ ಸ್ಥಿತಿಯನ್ನು ರಾಜ್ಯದ ಪಟ್ಟಣ ಪಂಚಾಯಿತಿ ಚುನಾವಣೆ ತೋರಿಸಿಕೊಟ್ಟಿದೆ ಎಂದರು. ಇವಿಎಂ ಇರಲಿ, ಬ್ಯಾಲೆಟ್ ಇರಲಿ. ಕಾಂಗ್ರೆಸ್ಸಿನ ಹಣೆಬರಹ ಬದಲಾಗಲು ಸಾಧ್ಯವಿಲ್ಲ ಎಂದು ಹೇಳಿದರು. ಕಾಂಗ್ರೆಸ್ ತನ್ನ ವಿಶ್ವಾಸವನ್ನು ಕಳೆದುಕೊಳ್ಳುತ್ತಿದೆ, ಮತ್ತು ಅದು ಪಟ್ಟಣ ಪಂಚಾಯತ್ ಚುನಾವಣೆಯ ಫಲಿತಾಂಶಗಳಿಂದ ಸ್ಪಷ್ಟವಾಗಿದೆ ಎಂದು ಅವರು ಹೇಳಿದರು. ನಮ್ಮ ಸ್ವಯಂಕೃತ ಅಪರಾಧದಿಂದ ಪ್ರತಿಪಕ್ಷದಲ್ಲಿ ಕುಳಿತಿದ್ದೇವೆ. ನಾವ್ಯಾರೂ ಆತಂಕ ಪಡಬೇಕಿಲ್ಲ. ರಾಜ್ಯದ ಜನವಿರೋಧಿ, ಬಡವರ ವಿರೋಧಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನಕ್ರೋಶ ಹೆಚ್ಚಾಗಿದೆ. ಜನ ಆಕ್ರೋಶ ಹೊರಹಾಕುತ್ತಿದ್ದಾರೆ. ಚುನಾವಣೆ ನಾಳೆಯೇ ನಡೆಯಲಿ ಅಥವಾ ನಿಗದಿತ 2028ರಲ್ಲೇ ನಡೆಯಲಿ.

ಯಾವಾಗ ನಡೆದರೂ ಕರ್ನಾಟಕದಲ್ಲಿ ಬಿಜೆಪಿ ಸ್ವಂತ ಶಕ್ತಿಯ ಮೇಲೆ 130-140 ಶಾಸಕರೊಂದಿಗೆ ಸ್ಪಷ್ಟ ಬಹುಮತ ಪಡೆದು ಅಧಿಕಾರಕ್ಕೆ ಬರಲಿದೆ. ನಾವೆಲ್ಲರೂ ಇದಕ್ಕಾಗಿ ಪಕ್ಷವನ್ನು ಬಲಪಡಿಸಬೇಕು ಎಂದು ಮನವಿ ಮಾಡಿದರು.

## ಹಬ್ಬದ ದಿನ ಬೆಂಗಳೂರಿಗೆ ಬರುವಾಗ ಖಾಲಿ ಖಾಲಿ

### ಬೆಂಗಳೂರಿನೊಳಗೆ ಪ್ರಯಾಣ ಮಾಡುವ ಅವಧಿ 90ರ ದಶಕದಂತೆ ಎಂದು ಮತ್ತೊಬ್ಬರು ಕಮೆಂಟ್ ಮಾಡಿದ್ದಾರೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಹಬ್ಬ ದಿನಗಳು ಬಂದರೆ ಸಾಕು, ರಸ್ತೆಗಳೆಲ್ಲ ಖಾಲಿ ಖಾಲಿ, ಇದೀಗ ನೆನ್ನೆ ಕ್ರಿಸ್‌ಮಸ್ ಇದ್ದ ಕಾರಣ ಬೆಂಗಳೂರಿನ ಹೊರವಲಯದಲ್ಲಿರುವ ಹೆದ್ದಾರಿಯಲ್ಲಿ ವಾಹನ ಸಂಚಾರ ಹೇಗಿತ್ತು ಎಂಬುದನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ವಿಡಿಯೋದಲ್ಲಿ ತೋರಿಸಿದ್ದಾರೆ. ಕ್ರಿಸ್‌ಮಸ್ ದಿನ ಬೆಂಗಳೂರಿನಿಂದ ಊರಿಗೆ ಹೋಗುತ್ತಿರುವ ಒಂದು ಕಡೆಯಾದರೆ, ಇನ್ನೊಂದು ಕಡೆ ಬೆಂಗಳೂರಿಗೆ ಬರುವವರು. ಹಬ್ಬದ ದಿನ ಹೋಗುವಾಗ ಹಾಗೂ ಬರುವಾಗ ರಸ್ತೆಗಳು ಹೇಗಿರುತ್ತದೆ ಎಂಬುದನ್ನು ಈ ವಿಡಿಯೋದಲ್ಲಿ ತೋರಿಸಿದ್ದಾರೆ.

ಈ ವಿಡಿಯೋವನ್ನು ತುಂಬಾ ತಮಾಷೆಯಾಗಿ ಹಂಚಿಕೊಂಡಿದ್ದಾರೆ. ವಿಡಿಯೋವನ್ನು ನೋಡಿ ಹಲವು ನೆಟ್ಟಿಗರು ತಮ್ಮ ಅಭಿಪ್ರಾಯವನ್ನು ಕಮೆಂಟ್ ಮಾಡಿದ್ದಾರೆ.

@wanderjoy ಎಂಬ ಇನ್ಸ್ಟಾಗ್ರಾಮ ಖಾತೆಯಲ್ಲಿ ಈ ವಿಡಿಯೋವನ್ನು ಹಂಚಿಕೊಳ್ಳಲಾಗಿದೆ. ಈ ವಿಡಿಯೋದಲ್ಲಿ ಬೆಂಗಳೂರಿಗೆ ಬರುವಾಗ ರಸ್ತೆಗಳು ಫುಲ್ ಖಾಲಿ ಖಾಲಿ ಇದೆ. ಆದರೆ ಅದೇ ಹೈವೇ ಮತ್ತೊಂದು ಕಡೆ ಅಂದರೆ ಬೆಂಗಳೂರಿನಿಂದ ಹೊರಗೆ ಹೋಗುವಾಗ ತುಂಬಾ ಟ್ರಾಫಿಕ್ ಇರುವುದನ್ನು ಈ ವಿಡಿಯೋದಲ್ಲಿ ತೋರಿಸಲಾಗಿದೆ. ಬೆಂಗಳೂರಿಗೆ ಪ್ರವೇಶಿಸುವಾಗ ಹಾಗೂ ನಿರ್ಗಮಿಸುವಾಗ ರಸ್ತೆಗಳು ಹೇಗಿರುತ್ತದೆ ನೋಡಿ.



ಉದಯವಾಹಿನಿ ಚಿತ್ರ

ಇದು ಬೆಂಗಳೂರಿನಲ್ಲಿ ಕಂಡು ಬಂದ ವಿಭಿನ್ನ ಸಂಚಾರ ಸ್ಥಿತಿ ಎಂದು ಈ ವಿಡಿಯೋದಲ್ಲಿ ಬರೆದುಕೊಳ್ಳಲಾಗಿದೆ. ಡಿಸೆಂಬರ್ 25 ರಂದು ಬೆಳಿಗ್ಗೆ 7 ಗಂಟೆಗೆ ಬೆಂಗಳೂರನ್ನು ಪ್ರವೇಶ ಮಾಡುವಾಗ ಖಾಲಿ ರಸ್ತೆಗಳು. ಆದರೆ ಮತ್ತೊಂದು ಕಡೆ ಸಿಕ್ಕಪಟ್ಟೆ ವಾಹನ ದಟ್ಟಣೆ ಇದೆ ಎಂದು ಹೇಳಲಾಗಿದೆ.

**ಹೊರಗೆ ಹೋಗುವಾಗ ಹೇಗಿರುತ್ತದೆ ನೋಡಿ**

**ಈ ವಿಡಿಯೋದ ಬಗ್ಗೆ ನೆಟ್ಟಿಗರು ಹೇಳಿದ್ದೇನು:** ರಜಾ ದಿನ ಎಂದರೆ ಬೆಂಗಳೂರಿನ ಅರ್ಧದಷ್ಟು ಜನರು ನಗರದಿಂದ ಹೊರಗೆ ಓಡುತ್ತಾರೆ ಎಂದು ಒಬ್ಬರು ಹೇಳಿದ್ದಾರೆ. ಬೆಂಗಳೂರಿನೊಳಗೆ ಪ್ರಯಾಣ ಮಾಡುವ ಅವಧಿ 90ರ ದಶಕದಂತೆ ಎಂದು ಮತ್ತೊಬ್ಬರು ಕಮೆಂಟ್ ಮಾಡಿದ್ದಾರೆ. ಇನ್ನು ಹೊಸ ವರ್ಷಕ್ಕೆ ಇದಕ್ಕಿಂತ ಡಬಲ್ ಇರುತ್ತದೆ ನೋಡಿ ಎಂದು ಇನ್ನೊಬ್ಬರು ಕಮೆಂಟ್ ಮಾಡಿದ್ದಾರೆ. ಕ್ರಿಸ್ ಮಸ್ ಮತ್ತು ಹೊಸ ವರ್ಷದ ಪ್ರಯುಕ್ತ ರಜೆ ಇರುವ ಕಾರಣ ಎಲ್ಲರೂ ಹೊರೆಗೆ ಹೋಗುತ್ತಾರೆ ಎಂದು ಮತ್ತೊಬ್ಬರು ಕಮೆಂಟ್ ಮಾಡಿದ್ದಾರೆ.

### ಬೆಂಗಳೂರು ಸಂಚಾರ

ಈಗಾಗಲೇ ಬೆಂಗಳೂರು ಟ್ರಾಫಿಕ್‌ಗೆ ಹೆಸರುವಾಸಿ, ಇದು ದೇಶದ ಅತ್ಯಂತ ಜನದಟ್ಟಣೆಯ ನಗರಗಳಲ್ಲಿ ಒಂದಾಗಿದೆ. ಹಬ್ಬ ದಿನ ಈ ನಗರದ ಚಿತ್ರಣವೇ ಬದಲಾಗುತ್ತದೆ. ನಗರದೊಳಗಿನ ರಸ್ತೆಗಳು ಸುಗಮವಾಗಿದ್ದರೆ, ಹೊರ ಹೋಗುವ ಮಾರ್ಗಗಳು ಭಾರೀ ದಟ್ಟಣೆಯಿಂದ ಕೂಡಿರುತ್ತದೆ. ಈ ವರ್ಷದ ಆರಂಭದಲ್ಲಿ, ದೀಪಾವಳಿಯ ಸಮಯದಲ್ಲಿ ಬೆಂಗಳೂರು ರಸ್ತೆಗಳು ತುಂಬಾ ಶಾಂತವಾಗಿರುತ್ತದೆ. ಈ ಮೌನವನ್ನು ನೋಡಿ ಒಬ್ಬರು ಬೆಂಗಳೂರು "ಭೂತ ಪಟ್ಟಣ" ದಂತೆ ಕಾಣುತ್ತಿದೆ ಎಂದು ಟೀಕಿಸಿದ್ದರು.

# ಚಿಮುಲ್ ಎಲೆಕ್ಷನ್ ಅಖಾಡದಲ್ಲಿ ಫೈಟ್ ಜೋರು; ಶುರುವಾಗಿದೆ ಕ್ರೆಡಿಟ್‌ವಾರ್

## ಆಡಳಿತ ಮಂಡಳಿ ಚುನಾವಣೆಗೆ ಸಂಬಂಧಿಸಿದಂತೆ ಚಿಮುಲ್ ಅರ್ಹಅನರ್ಹ ಮತದಾರರ ಕರಡು ಮತದಾರರ ಪಟ್ಟಿ ಪ್ರಕಟ

• **ಉದಯವಾಹಿನಿ ಚಿಕ್ಕಬಳ್ಳಾಪುರ**

ದಶಕದ ಹೋರಾಟದ ನಂತರ ಪ್ರತ್ಯೇಕ ಹಾಲು ಒಕ್ಕೂಟವಾಗಿರುವ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟಕ್ಕೆ (ಚಿಮುಲ್) ಈಗ ಮೊಟ್ಟ ಮೊದಲ ಚುನಾವಣೆ ಎದುರಾಗಿದೆ. ಪ್ರತಿಷ್ಠೆಯ ಕಣವಾಗಿರುವ ಚಿಮುಲ್ ಚುನಾವಣೆಯಲ್ಲಿ ಉಭಯ ಪಕ್ಷಗಳ ಮುಖಂಡರು ಗದ್ದುಗೆ ಏರಲು ಕಸರತ್ತು ಶುರು ಮಾಡಿದ್ದಾರೆ. ಪ್ರತ್ಯೇಕ ಒಕ್ಕೂಟ ರಚನೆಯ ಲಾಭ ಪಡೆಯಲು ಮುಖಂಡರು ತಂತ್ರಗಾರಿಕೆಯಲ್ಲಿ ತೊಡಗಿದ್ದಾರೆ ಒಕ್ಕೂಟದ ನಿರ್ದೇಶಕ ಸ್ಥಾನಗಳಿಗೆ 2026 ರ ಫೆ.1 ರಂದು ಚುನಾವಣೆ ನಡೆಯಲಿದೆ. ಆಡಳಿತ ಮಂಡಳಿ ಚುನಾವಣೆಗೆ ಸಂಬಂಧಿಸಿದಂತೆ ಚಿಮುಲ್ ಅರ್ಹಅನರ್ಹ ಮತದಾರರ ಕರಡು ಮತದಾರರ ಪಟ್ಟಿ ಪ್ರಕಟಿಸಿದೆ. ಜಿಲ್ಲೆಯಲ್ಲಿಒಟ್ಟು 913 ಅರ್ಹ,83 ಅನರ್ಹ ಮತದಾರರು ಇದ್ದು, ಚಿಮುಲ್ ಚುನಾವಣೆಗೆ ಜಿಲ್ಲೆಯ ಸಹಕಾರ ವಲಯದ ಧುರೀಣರು ಸ್ಪರ್ಧಿಸಲು ಸಜ್ಜಾಗುತ್ತಿದ್ದಾರೆ.

ನಿರ್ದೇಶಕರಾಗಿರುವವರು ಮತ್ತೊಮ್ಮೆ ಕಣಕ್ಕೆ ಇಳಿಯಲು ಉತ್ಸುಕರಾಗಿದ್ದಾರೆ.

**ಹಿಂದೆ ಏನಾಗಿತ್ತು?:** ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ಮಾಡಲು ದಶಕದಿಂದ ಹೋರಾಟ ನಡೆಯುತ್ತಿತ್ತು. ಜಿಲ್ಲೆಯ ಜನಪ್ರತಿನಿಧಿಗಳು ಆಸಕ್ತಿ ತೋರಿ ಕಳೆದ ಬಿಜೆಪಿ ಸರಕಾರದ ಅವಧಿಯಲ್ಲಿ 2022 ರಲ್ಲಿ ಆಗ ಸಚಿವರಾಗಿದ್ದ ಡಾ. ಕೆ. ಸುಧಾಕರ್ ನೇತೃತ್ವದಲ್ಲಿ ಸಿಎಂ ಆಗಿದ್ದ ಸಸವರಾಜ ಬೊಮ್ಮಾಯಿ ಅವರು ವಿಭಜನೆ ಮಾಡಿ


ಉದಯವಾಹಿನಿ ಚಿತ್ರ

ಆದೇಶಿಸಿ ಆಡಳಿತಾಧಿಕಾರಿಯನ್ನು ಸಹ ನೇಮಕ ಮಾಡಿದ್ದರು. ಎರಡೂ ಒಕ್ಕೂಟಗಳ ಆಡಳಿತವೂ ಪ್ರತ್ಯೇಕವಾಗಿ ನಡೆದಿತ್ತು. ಆದರೆ ಚಿಕ್ಕಬಳ್ಳಾಪುರ ಜಿಲ್ಲಾವ್ಯಾಪ್ತಿಯ ನಿರ್ದೇಶಕರ ಅಧಿಕಾರ ಚಲಾಯಿಸಲು ಅವಕಾಶವಿಲ್ಲ ಎಂಬ ಷರತ್ತು ವಿಧಿಸಿದ್ದರಿಂದ ಕೆಲವರು ಕೋರ್ಟ್ ಮೋರೆ ಹೋಗಿದ್ದರು.

ಅಷ್ಟರೊಳಗೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರಕಾರ ಬಿಜೆಪಿ ಸರಕಾರದ ಒಕ್ಕೂಟ ವಿಭಜನೆ ಆದೇಶವನ್ನು ರದ್ದುಗೊಳಿಸಿತ್ತು. ಚಿಮುಲ್‌ಅನ್ನು ಮತ್ತೆ ಕೋಮುಲ್‌ಗೆ ಸೇರಿಸಿತ್ತು. ಇದು ಬಿಜೆಪಿ-ಕಾಂಗ್ರೆಸ್ ಪಕ್ಷದ ಮುಖಂಡರ ನಡುವೆ ರಾಜಕೀಯ ತಿಕ್ಕಾಟಕ್ಕೆ ಕಾರಣವಾಗಿತ್ತು. ಹೈಕೋರ್ಟ್ ತೀರ್ಪು ಹೊರ ಬೀಳುತ್ತಿದ್ದಂತೆ ತಿಕ್ಕಾಟಕ್ಕೆ ತೆರೆ ಬಿದ್ದು, ಕೊನೆಗೆ 2025ರ ಜನವರಿ ತಿಂಗಳಲ್ಲಿಪ್ರತ್ಯೇಕ ಹಾಲು ಒಕ್ಕೂಟ ಆಸ್ತಿತ್ವಕ್ಕೆ ಬಂದಿತ್ತು.

**ಕಾಂಗ್ರೆಸ್ ವಾದ :** ಕಾಂಗ್ರೆಸ್ ಪಕ್ಷದ ಮುಖಂಡರು ಇದು ನಮ್ಮದೇ ಶ್ರಮದ ಫಲ ಎಂದು ಹೇಳಿದ್ದರು. ಬಿಜೆಪಿ ಸರಕಾರದಲ್ಲಿ ಕಾನೂನು ಪ್ರಕಾರ ಮಾಡಿರಲಿಲ್ಲ. ಇದು ಹಲವಾರು ತೊಡಕುಗಳಿಗೆ ಕಾರಣವಾಗಿತ್ತು. ಆದರೆ ಕಾಂಗ್ರೆಸ್ ಸರಕಾರ ಬಂದ ನಂತರ ಕಾನೂನುಬದ್ಧವಾಗಿ ವಿಶೇಷ ಸಾಮಾನ್ಯ ಸಭೆ ಕರೆದು ಎಲ್ಲರ ಒಪ್ಪಿಗೆ ಪಡೆದು ಪ್ರತ್ಯೇಕ ಒಕ್ಕೂಟ ಮಾಡಿದ್ದೇವೆ. ಇದು ನಮ್ಮದೇ ಸರಕಾರದ ಕೊಡುಗೆ ಎಂದು ವಾದಿಸುತ್ತಿದ್ದಾರೆ.

### ಬಿಜೆಪಿ ವಾದ

ರಾಜಕೀಯ ವಾಕ್ಸಮರಕ್ಕೆ ವೇದಿಕೆಯಾಗಿದ್ದ ಪ್ರತ್ಯೇಕ ಹಾಲು ಒಕ್ಕೂಟದ ಕ್ರೆಡಿಟ್ ಪಡೆಯಲು ದೊಡ್ಡ ವಾಕ್ಸಮರವೇ ನಡೆದಿತ್ತು. ಬಿಜೆಪಿ ಬೆಂಬಲಿತ ಸದಸ್ಯರು ಹಾಗೂ ಮುಖಂಡರು ಇದು ನಮ್ಮ ಸರಕಾರ ಆದೇಶದ ಮರುಸ್ಥಾಪನೆ, ಹೈಕೋರ್ಟ್ ತೀರ್ಪಿನಂತೆ ರದ್ದುಪಡಿಸಿದ್ದ ಒಕ್ಕೂಟವನ್ನು ಮತ್ತೆ ಮರುಸ್ಥಾಪಿಸಲಾಗುತ್ತಿದೆ. ಇದರಲ್ಲಿ ಕಾಂಗ್ರೆಸ್ ಸರಕಾರದ ಯಾವುದೇ ಶ್ರಮ ಇಲ್ಲ ಎಂಬ ಕ್ರೆಡಿಟ್ ಫೈಟ್ ಜೋರಾಗೇ ನಡೆದಿದೆ.

### ಎಷ್ಟು ನಿರ್ದೇಶಕ ಸ್ಥಾನ?

ಸದ್ಯ ಚಿಕ್ಕಬಳ್ಳಾಪುರ ಹಾಲು ಒಕ್ಕೂಟ ವ್ಯಾಪ್ತಿಯಲ್ಲಿ 13 ಕ್ಷೇತ್ರಗಳನ್ನು ಪುನರ್‌ವಿಂಗಡಣೆ ಮಾಡಿದ್ದು ಚಿಕ್ಕಬಳ್ಳಾಪುರ, ಶಿಡ್ಲಘಟ್ಟ, ಚಿಂತಾಮಣಿಗೆ ತಲಾ 2 ನಿರ್ದೇಶಕ ಸ್ಥಾನ, ಉಳಿದಂತೆ ಬಾಗೇಪಲ್ಲಿ, ಗುಡಿಬಂಡೆ, ಚೇಳೂರು, ಮಂಚೇನಹಳ್ಳಿ, ಗೌರಿಬಿದನೂರಿಗೆ ತಲಾ 1 ಸ್ಥಾನ ಹಾಗೂ 2 ಮಹಿಳಾ ನಿರ್ದೇಶಕ ಸ್ಥಾನ ಒಟ್ಟು 13, 5 ನಾಮ ನಿರ್ದೇಶನ ನಿರ್ದೇಶಕ ಸ್ಥಾನ ಸೇರಿದಂತೆ 18 ನಿರ್ದೇಶಕ ಸ್ಥಾನಗಳು ಇರಲಿವೆ.ಕ್ಷೇತ್ರಗಳ ಹೆಚ್ಚಳ ಹಾಗೂ ವಿಂಗಡಣೆಯಿಂದ ಕೆಲವು ಕ್ಷೇತ್ರಗಳ ಕಲಸುಮೇಲೋಗರವೂ ಆಗಿದೆ. ಹಿಂದಿನಿಂದಲೂ ಸ್ಪರ್ಧಿಸುತ್ತಿದ್ದ ಸ್ಪರ್ಧಿಗಳ ಸ್ಪರ್ಧೆಗೂ ನಾನಾ ಸವಾಲುಗಳು ಎದುರಾಗಿವೆ. ಹೀಗಾಗಿ ಎಲ್ಲಾ ಸ್ಪರ್ಧಾಕಾಂಕ್ಷಿಗಳ ಮನವೊಲಿಸಿ ಸಮರ್ಥರನ್ನು ಕಣಕ್ಕಿಳಿಸುವ ಸರ್ಕಸ್ ನಡೆಯುತ್ತಿದೆ. ಇದರೊಟ್ಟಿಗೆ ಪ್ರತ್ಯೇಕ ಒಕ್ಕೂಟ ಮಾಡಿದ ಲಾಭ ಪಡೆಯಲು ಉಭಯ ಪಕ್ಷಗಳ ಮುಖಂಡರು ನಾನಾ ತಂತ್ರಗಾರಿಕೆಯಲ್ಲಿ ತೊಡಗಿದ್ದಾರೆ.

---

# ಅಂಬೇಡ್ಕರ್ ಹೋರಾಟ ಸ್ಮರಿಸಿ ಮುನ್ನಡೆಯಿರಿ: ಬೆಟ್ಟಯ್ಯಕೋಟೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಎಚ್.ಡಿ.ಕೋಟೆ**

ಪಟ್ಟಣದ ಆಡಳಿತ ಭವನದ ಮುಂಭಾಗದಲ್ಲಿ ದಸಂಸ, ವಿವಿಧ ಪ್ರಗತಿ ಪರ ಸಂಘಟನೆ ಮುಖಂಡರು ಮನುಸ್ಮೃತಿ ಸುಟ್ಟು ಹಾಕುವ ಮೂಲಕ ಪ್ರತಿಭಟನೆ ನಡೆಸಿದರು. ಸಂವಿಧಾನ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ರಕ್ಷಣೆ ಕಾರಣಕ್ಕಾಗಿ ಅಂಬೇಡ್ಕರ್ ಮನಸ್ಮೃತಿ ಸುಟ್ಟು ಹಾಕಿದ್ದರು. ಇದೀಗ ಪ್ರತಿಯೊಬ್ಬರು ಮನುಸ್ಮೃತಿ ಸುಟ್ಟು ಹಾಕುವ ಮೂಲಕ ಬಾಬಾ ಸಾಹೇಬ್ ಅಂಬೇಡ್ಕರ್ ಹೋರಾಟ ಸ್ಮರಿಸಿ ಮುಂದುವರಿಯಬೇಕಿದೆ ಎಂದು ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕರಾದ ಬೆಟ್ಟಯ್ಯ ಕೋಟೆ ತಿಳಿಸಿದರು.

ಶ್ರೇಣೀಕೃತ ಜಾತಿ ವ್ಯವಸ್ಥೆಗೆ ಮುನ್ನಡಿ ಬರೆದು ಭಾರತವನ್ನು ಅಂಧಕಾರಕ್ಕೆ ತಳ್ಳಿದ್ದ ಮನುಸ್ಮೃತಿಯನ್ನು ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಸುಟ್ಟು ಹಾಕಿ ಇಂದಿಗೆ 98 ವರ್ಷ ಕಳೆದಿದೆ. ಸ್ವಾತಂತ್ರ ಭಾರತಕ್ಕೆ ಸಂವಿಧಾನ ರೂಪಿಸುವ ಸಂದರ್ಭದಲ್ಲಿ ಸಮಸಮಾಜದ ನಿರ್ಮಾಣದ ಕನಸು ಹೊತ್ತು, ಸಮಾನತೆ, ಸಹೋದರತೆ, ಭ್ರಾತೃತ್ವದ ಆಶಯದೊಂದಿಗೆ ಸಂವಿಧಾನವನ್ನು ರೂಪಿಸಿಕೊಂಡೆವು. ಈ ಸಂವಿಧಾನ ರಚನೆಗೆ ಬಾಬಾ ಸಾಹೇಬರ ಕೊಡುಗೆ ಅಪಾರ ಎಂದರು. ಸಮಾನತೆ ಸಾರಿದ ಬೌದ್ಧ ತತ್ವ ಪ್ರಣೀತ, ಪ್ರಜಾತಾಂತ್ರಿಕ ಸಂವಿಧಾನವನ್ನು ನಾವು ರೂಪಿಸಿಕೊಂಡಿದ್ದನ್ನು ಸಹಿಸಿಕೊಳ್ಳದ ಶಕ್ತಿ ಮತ್ತಷ್ಟು ಬಲಗೊಳ್ಳುತ್ತಿವೆ ಎಂದರು. ಮಹೇಶ್ ಮಲಾರ, ರಾಜಶೇಖರ್, ಜೇವಿಕ ಬಸವರಾಜು, ಕೃಷ್ಣ, ಗೋಪಾಲ, ಮಹೇಶ, ಸುರೇಶ, ದಾಸಯ್ಯ, ಸಿದ್ದರಾಜು, ಅಂಕಯ್ಯ, ಹೆಗ್ಗನೂರು ನಿಂಗರಾಜು, ಹೈರಿಗೆ ಶಿವರಾಜು, ಹಿಟ್ನಾ ರಾಜಣ್ಣ, ಶಿವಶಂಕರ್, ಕಾಳಸ್ವಾಮಿ ಇದ್ದರು.

---

# ಹಿನ್ನೋಟ: ಗೌರಿಬಿದನೂರು ತಾಲ್ಲೂಕಿನಲ್ಲಿ ನಡೆದ ಪ್ರಮುಖ ವಿದ್ಯಮಾನಗಳು

• **ಉದಯವಾಹಿನಿ ಗೌರಿಬಿದನೂರು**

ಡಾ.ಎಚ್.ನರಸಿಂಹಯ್ಯ ಎಚ್‌ಎನ್ ಪ್ರಾಧಿಕಾರ ಅಭಿವೃದ್ಧಿ ಪ್ರಾಧಿಕಾರ ಗೌರಿಬಿದನೂರು ತಾಲ್ಲೂಕಿನ ಜನರ ಬಹುದಿನಗಳ ಬೇಡಿಕೆ. ತಾಲ್ಲೂಕಿನ ಹೊಸೂರಿನವರಾದ ಶಿಕ್ಷಣ ತಜ್ಞ, ಗಾಂಧಿವಾದಿ ನರಸಿಂಹಯ್ಯ ಅವರ ಹೆಸರಿನಲ್ಲಿ ಅಭಿವೃದ್ಧಿ ಪ್ರಾಧಿಕಾರ ರಚಿಸಬೇಕು ಎನ್ನುವ ಆಗ್ರಹ ಹಲವು ವರ್ಷಗಳಿಂದ ಇತ್ತು. ಈ ಆಗ್ರಹ ಸರ್ಕಾರದಿಂದ ಸಾಕಾರವಾದ ವರ್ಷ 2025.ಫೆ.2ರಂದು ಎಚ್.ನರಸಿಂಹಯ್ಯ ಅವರ ಜನ್ಮ ಶತಮಾನೋತ್ಸವ. ಅವರ ಹುಟ್ಟೂರಾದ ಹೊಸೂರಿನಲ್ಲಿ ಜನ್ಮ ಶತಮಾನೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ವೈಜ್ಞಾನಿಕ ಚಿಂತನೆಗಳ ವಿದ್ಯಾರ್ಥಿಗಳಲ್ಲಿ ಮೂಡಿಸಲು ಸರ್ಕಾರವು ಡಾ. ಎಚ್ ಎನ್ ಪ್ರಾಧಿಕಾರ ರಚನೆಗೆ ಮಾ.29 ರಂದು ಮಸೂದೆ ಅಂಗೀಕರಿಸಿತು. ಏಪ್ರಿಲ್‌ನಲ್ಲಿ ಗೆಜೆಟ್ ನಲ್ಲಿ ಅಂಗೀಕರಿಸಿತು. ಮಾಜಿ ಸಚಿವ ಎನ್.ಎಚ್ ಶಿವಶಂಕರ ರೆಡ್ಡಿ ಪ್ರಾಧಿಕಾರದ ಮೊದಲ ಅಧ್ಯಕ್ಷರಾಗಿ ನೇಮಕವಾಗಿದ್ದಾರೆ.

ಹೀಗೆ ವರ್ಷದ 2ನೇ ತಿಂಗಳಲ್ಲಿಯೇ ಗೌರಿಬಿದನೂರು ತಾಲ್ಲೂಕಿಗೆ ಸರ್ಕಾರದಿಂದ ಮಹತ್ವದ ಘೋಷಣೆ ಹೊರಬಿದ್ದಿತು. ವರ್ಷದ ಆರಂಭದಲ್ಲಿಯೇ



ಕಪ್ಪು ಚುಕ್ಕಿ ಎನ್ನುವಂತೆ ತೊಂಡೇಬಾವಿ ಬಳಿಯ ಬೆಳಚಿಕ್ಕನಹಳ್ಳಿಯಲ್ಲಿ ಘಟನೆ ತಾಲ್ಲೂಕಿನಲ್ಲಿನ ಜಾತಿ ಸಂಘರ್ಷವನ್ನೂ ತೆರೆದಿಟ್ಟಿತು. ಜ.11ರಂದು ಬೆಳಚಿಕ್ಕನಹಳ್ಳಿಯಲ್ಲಿ ಪರಿಶಿಷ್ಟ ಜಾತಿ ಯುವಕನಿಗೆ ದೇವಸ್ಥಾನ ಪ್ರವೇಶ ನಿರಾಕರಿಸಲಾಯಿತು. ಗ್ರಾಮದ ಗೋಪಾಲಪ್ಪ, ವೈಕುಂಠ ಏಕಾದಶಿ ಪ್ರಯುಕ್ತ ಗ್ರಾಮದ ವೆಂಕಟರಮಣಸ್ವಾಮಿ ದೇವಾಲಯಕ್ಕೆ ಪೂಜೆಗೆಂದು ಹೋಗಿದ್ದರು. ದೇವಾಲಯದ ಬಾಗಿಲಿನಲ್ಲೇ ಕೆಲವು ಗ್ರಾಮಸ್ಥರು ಅವರನ್ನು ತಡೆದು ನೀನು ಮಾದಿಗ ಜಾತಿಗೆ ಸೇರಿದವ. ದೇವಾಲಯದ ಒಳಗೆ ಹೋಗಬಾರದು ಎಂದು ಅವಾಚ್ಯ ಶಬ್ದಗಳಿಂದ ಸಾರ್ವಜನಿಕವಾಗಿ ನಿಂದಿಸಿದ್ದರು. ಈ ಪ್ರಕರಣ ಜಿಲ್ಲೆಯಷ್ಟೇ ಅಲ್ಲ ರಾಜ್ಯ ಮಟ್ಟದಲ್ಲಿಯೂ ಸದ್ದು ಮಾಡಿತ್ತು. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳದ ವಿಚಾರ ಮಾರ್ಚ್‌ನಲ್ಲಿ ತೀವ್ರ ಸದ್ದು ಮಾಡಿತ್ತು. ಅದೇ ಹೊತ್ತಿನಲ್ಲಿ ಗೌರಿಬಿದನೂರು ತಾಲ್ಲೂಕಿನ ಎಂ. ಜಾಲಹಳ್ಳಿಯ ಮಂಜುನಾಥ್ ಮೈಕ್ರೋ ಫೈನಾನ್ಸ್‌ಗಳ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡಿದ್ದರು. ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್‌ಗಳ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡ ಮೊದಲ ಪ್ರಕರಣವಿದು.

**ಏ.23ರಂದು ಶೂಟೌಟ್:** ಮಂಚೇನ ಹಳ್ಳಿ ತಾಲ್ಲೂಕಿನ ಕನಗಾನಕೊಪ್ಪ ಗ್ರಾಮ ಸಮೀಪದ ಬೆಟ್ಟದಲ್ಲಿ ಕಲ್ಲುಗಣಿಗಾರಿಕೆ ಹಾಗೂ ಗಣಿಗಾರಿಕೆ ಲಾರಿಗಳ ಓಡಾಟಕ್ಕೆ ದಾರಿ ಮಾಡುವ ವಿಚಾರವಾಗಿ ಎರಡು ಗುಂಪುಗಳ ನಡುವೆ ನಡೆದ ಗಲಾಟೆಯಲ್ಲಿ ರೈತರೊಬ್ಬರ ಮೇಲೆ ಗುಂಡು ಹಾರಿಸಲಾಯಿತು.

ಸಕಲೇಶ್ ಎಂಬಾತ ಸ್ಥಳೀಯ ರೈತ ರವಿಕುಮಾರ್ ಮೇಲೆ ಗುಂಡು ಹಾರಿಸಿದ್ದರು. ಈ ವಿಚಾರ ಸಹ ರಾಜ್ಯ ಮಟ್ಟದಲ್ಲಿ ಸದ್ದು ಮಾಡಿತ್ತು. ಮಂಚೇನಹಳ್ಳಿ ಬಂದ್, ಗಣಿಗಾರಿಕೆ ನಡೆಸದಂತೆ ಆಗ್ರಹಿಸಿ ಜಿಲ್ಲಾಡಳಿತಕ್ಕೆ ಮನವಿ, ರಾಜಕೀಯ ನಾಯಕರ ಭೇಟಿ ಹೀಗೆ ನಾನಾ ವಿದ್ಯಮಾನಗಳು ಕನಗಾನಕೊಪ್ಪ ಶೂಟೌಟ್ ಪ್ರಕರಣದ ಸುತ್ತ ಜೋರಾಗಿ ನಡೆದವು.

---

# ಬಾಲ್ಯವಿವಾಹ, ಪೋಕ್ಸೊ ಕಾಯ್ದೆ ಅರಿವು ಕಾರ್ಯಕ್ರಮ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಚಿಂತಾಮಣಿ**

ತಾಲ್ಲೂಕಿನ ಕೈವಾರ ಅಂಬೇಡ್ಕರ್ ಅನುದಾನಿತ ಶಾಲೆಯಲ್ಲಿ ಇತ್ತೀಚೆಗೆ ಬಾಲ್ಯವಿವಾಹದ ದುಷ್ಪರಿಣಾಮಗಳು ಮತ್ತು ಪೋಕ್ಸೊ ಕಾಯ್ದೆ ಕುರಿತು ಮಕ್ಕಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಈ ಕಾರ್ಯಕ್ರಮ ನಡೆಯಿತು. ಮಕ್ಕಳ ಸಹಾಯವಾಣಿ ಜಿಲ್ಲಾ ಸಂಯೋಜಕ ವೆಂಕಟೇಶ್ ಮಾತನಾಡಿ, ಯುವಜನರು ವಿದ್ಯಾಭ್ಯಾಸದ ಕಾಲದಲ್ಲಿ ದಾರಿ ತಪ್ಪಿದರೆ ಭವಿಷ್ಯದಲ್ಲಿ ದುಃಖ ಎದುರಿಸಬೇಕಾಗುತ್ತದೆ ಎಂದು ಹೇಳಿದರು.

ಜಿಲ್ಲೆಯ ಕಾರಾಗೃಹದಲ್ಲಿ ಶೇ 70ರಷ್ಟು ಯುವಕರು ಪೋಕ್ಸೊ ಕಾಯ್ದೆ ಅಡಿ ಬಂಧಿತರಾಗಿ ಶಿಕ್ಷೆ ಅನುಭವಿಸುತ್ತಿದ್ದಾರೆ.

ಸಾಮಾಜಿಕ ಮಾಧ್ಯಮಗಳ ದುರುಪಯೋಗ ಹೆಚ್ಚಾಗುತ್ತಿದ್ದು, ಯುವಜನಾಂಗವು ಇನ್‌ಸ್ಟಾಗ್ರಾಂ, ಫೇಸ್ ಬುಕ್ ಸೇರಿದಂತೆ ಇನ್ನಿತರ ಸಾಮಾಜಿಕ ಮಾಧ್ಯಮಗಳಲ್ಲಿ ಪರಿಚಯವಾಗಿ ಅನೈತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ತಮ್ಮ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ವಿಷಾದ ವ್ಯಕ್ತಪಡಿಸಿದರು. ಹೆಣ್ಣು ಮಕ್ಕಳು ಬಹಳ ಜಾಗೃತಿಯಿಂದ ಇರಬೇಕು. ಬಣ್ಣದ ಮಾತು, ಗುಜರಿ ಶೋಕಿಗಳನ್ನು ನಂಬಿ ಮೋಸ ಹೋಗಬಾರದು. ತಂದೆ, ತಾಯಿ ನಿಮ್ಮ ಜೀವನವನ್ನು ರೂಪಿಸಲು ತುಂಬಾ ಕಷ್ಟ ಪಡುತ್ತಾರೆ. ಅವರಿಗೆ ಮೋಸ ಮಾಡಬಾರದು ಎಂದು ಸಲಹೆ ನೀಡಿದರು. ಮಹಿಳಾ ಸಬಲೀಕರಣ ಜಿಲ್ಲಾ ಘಟಕದ ಲೆಕ್ಕಧಿಕಾರಿ ಬೃಂದಾ, ಆಪ್ತ ಸಮಾಲೋಚಕಿ ನಂದಿನಿ, ವಕೀಲ ಶ್ರೀನಿವಾಸ್ ಸಂಸ್ಥೆಯ ಮುಖ್ಯಸ್ಥೆ ಎಸ್.ಎಮ್. ರೋಜ, ಮುಖ್ಯ ಶಿಕ್ಷಕ ಸುರೇಶ್,ಲೋಕೇಶಪ್ಪ, ರತ್ನ, ವಿವೇಕ್, ಧನುಷ್, ಶ್ರೀಧರ್ ಹಿರೇಮಠ, ವೆಂಕಟ್ ರತ್ನಮ್ಮ, ಮಂಜುಳಾ ಉಪಸ್ಥಿತರಿದ್ದರು.

> **ಬಾಲ್ಯವಿವಾಹ ಸಮಾಜದ ಒಂದು ಪಿಡುಗು. ಅದನ್ನು ಹೋಗಲಾಡಿಸಲು ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು. ನಿಮ್ಮ ಗೆಳೆಯ, ಗೆಳತಿ ಬಾಲ್ಯ ವಿವಾಹಕ್ಕೆ ಒಳಗಾಗುತ್ತಿದ್ದರೆ ಮಕ್ಕಳ ಸಹಾಯವಾಣಿ 1098ಕ್ಕೆ ಉಚಿತ ಕರೆ ಮಾಡಿ ದೂರು ಸಲ್ಲಿಸಬೇಕು. ಬಡತನ, ಅನಕ್ಷರತೆ, ಮೂಢನಂಬಿಕೆ, ಗೊಡ್ಡು ಸಂಪ್ರದಾಯಗಳು ಬಾಲ್ಯ ವಿವಾಹಕ್ಕೆ ಪ್ರಮುಖ ಕಾರಣ. ಎಲ್ಲರೂ ಶಿಕ್ಷಣ ಪಡೆಯುವುದರಿಂದ ಇಂತಹ ಅನಿಷ್ಟಗಳನ್ನು ತೊಲಗಿಸಬಹುದು ಎಂದರು.**
>
> ವಕೀಲ ವೈಜಕೂರ್ ರಮೇಶ್

---

# ಬಿಜಿಎಸ್ ಶಾಲೆಯಲ್ಲಿ ಮಾತೃ ಭೋಜನ

• **ಉದಯವಾಹಿನಿ ಕುಣಿಗಲ್**

ನಾಡಿನಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಾದಂತೆ ಸಂಸ್ಕಾರ ಕಡಿಮೆಯಾಗುತ್ತಿದೆ ಎಂದು ಬೆಂಗಳೂರು ಗ್ರಾಮಾಂತರ ಸಂಸದ ಡಾ.ಸಿ.ಎನ್. ಮಂಜುನಾಥ್ ಅಭಿಪ್ರಾಯಪಟ್ಟರು. ಪಟ್ಟಣದ ಬಿಜಿಎಸ್ ಶಾಲೆಯಲ್ಲಿ ಸಂಜೆ ನಡೆದ ಮಾತೃ ಭೋಜನ ಕಾರ್ಯಕ್ರಮದಲ್ಲಿ ಮಾತನಾಡಿದರು. ಸ್ವಾತಂತ್ರ್ಯ ಬಂದ ಸಮಯದಲ್ಲಿ ಸಾಕ್ಷರತಾ ಪ್ರಮಾಣ ಶೇ 20 ಇದ್ದು, ಪ್ರಸ್ತುತ ಶೇ 90 ಇದೆ. ಸರ್ಕಾರ, ಮಠಗಳು ಸಾಕ್ಷರತಾ ಪ್ರಮಾಣಕ್ಕೆ ಶ್ರಮಿಸಿದ್ದರೂ, ಸಂಸ್ಕಾರಯುಕ್ತ ಶಿಕ್ಷಣದ ಕೊರತೆಯಿಂದಾಗಿ ವಿದ್ಯಾವಂತರಿಂದಲೇ ದೇಶಕ್ಕೆ ಆಪತ್ತು ಎನ್ನುವ ಸ್ಥಿತಿ ನಿರ್ಮಾಣವಾಗಿದೆ. ಶೇ 65ರಷ್ಟು ಮಕ್ಕಳು ಆನ್‌ಲೈನ್, ಮೊಬೈಲ್ ಗೀಳಿಗೆ ಒಳಗಾಗಿದ್ದಾರೆ. ಪೋಷಕರು ಮೊಬೈಲ್ ಅನ್ನು ಅಗತ್ಯವಿದ್ದಾಗ ಮಾತ್ರ ಬಳಕೆ ಮಾಡಲು ಸಲಹೆ ನೀಡಿದರು.

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರು, ಅಯಾಗಳ, ಶೌಚಾಲಯಗಳ ನಿರ್ವಹಣೆಯ ಕೊರತೆ ಇದೆ. ಸರ್ಕಾರ ಶಾಶ್ವತ ಪರಿಹಾರ ನೀಡಬೇಕಿದೆ. ಬದಲಾದ ಜೀವನ ಶೈಲಿ, ಆಹಾರ ಪದ್ಧತಿಯಿಂದ ಶೇ 60 ಸಾವುಗಳು ಸಂಭವಿಸುತ್ತಿದ್ದು ಝುಂಕ್ ಫುಡ್


ಉದಯವಾಹಿನಿ ಚಿತ್ರ

ಅಪಾಯಕಾರಿ ಎಂದರು.

ಕಾರ್ಯಕ್ರಮದಲ್ಲಿ ಸಾವಿರಾರು ಪೋಷಕರು ತಮ್ಮ ಮಕ್ಕಳಿಗೆ ಭಕ್ಷ್ಯಗಳನ್ನು ತಂದು ಸಾಮೂಹಿಕವಾಗಿ ಬಡಿಸಿ ಸಂಭ್ರಮಿಸಿದರು. ವಿದ್ಯಾರ್ಥಿ ಯಶಸ್ ಜಾನಪದಕಲೆಗಳ ಬಗ್ಗೆ, ಕೃತ್ತಿಕಾ ಪರಿಸರ ಸಂರಕ್ಷಣೆ ಬಗ್ಗೆ ಮಾಹಿತಿ ನೀಡಿದರು. ತುಮಕೂರು ಶಾಖಾಮಠದ ಮಂಗಳನಾಥ ಸ್ವಾಮೀಜಿ, ಸರ್ತಿನಾಥ ಸ್ವಾಮೀಜಿ, ಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲುದ ಮೆಡಿಸಿನ್ ವಿಭಾಗದ ಪ್ರಾಧ್ಯಾಪಕ ಡಾ.ರವಿ. ಡಿ.ನಾಗರಾಜಯ್ಯ, ಆಡಳಿತಾಧಿಕಾರಿ ಶಿವರಾಮರೆಡ್ಡಿ, ಮಧೂಸೂಧನ್, ಸಿಪಿಐ ಮಾದ್ಯಾ ನಾಯಕ್, ಪುರಸಭೆ ಮಾಜಿ ಅಧ್ಯಕ್ಷ ಕೆ.ಎಲ್.ಹರೀಶ್, ಪ್ರಾಂಶುಪಾಲ ವೆಂಕಟಮುನಿರೆಡ್ಡಿ, ಮುಖ್ಯ ಶಿಕ್ಷಕ ಕುಮಾರ್ ಹಾಜರಿದ್ದರು.

---

# ಡಿ.ಕೆ.ಶಿವಕುಮಾರ್‌ರನ್ನು ಮುಖ್ಯಮಂತ್ರಿಯನ್ನಾಗಿ ಮಾಡುವಂತೆ ಕುಂಚಿಟಿಗರ ಸಂಘ ಒತ್ತಾಯ

• **ಉದಯವಾಹಿನಿ ಶಿರಾ**

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ನರೇಶ್ ಗೌಡ ಅವರನ್ನು ನೇಮಕ ಮಾಡುವಂತೆ ಯುವ ಕಾಂಗ್ರೆಸ್ ಅಧ್ಯಕ್ಷರು ಸಾಮಾಜಿಕ ಜಾಲತಾಣಗಳಲ್ಲಿ ಮಾಡಿರುವ ಒತ್ತಾಯ ತಾಲ್ಲೂಕಿನ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಶಾಸಕ ಟಿ.ಬಿ.ಜಯಚಂದ್ರ ಅವರನ್ನು ಸಚಿವರನ್ನಾಗಿ ಘಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡುವಂತೆ ಕುಂಚಿಟಿಗರ ಸಂಘ ಹಾಗೂ ವಿವಿಧ ಸಂಘಟನೆಗಳು ನಡೆಸಿದ ಪಂಜಿನ ಮೆರವಣಿಗೆಯಲ್ಲಿ ಯುವ ಕಾಂಗ್ರೆಸ್ ನಗರ ಅಧ್ಯಕ್ಷ ಅಂಜನ್ ಕುಮಾರ್, ಗ್ರಾಮಾಂತರ ಅಧ್ಯಕ್ಷ ಹೇಮಂತ್ ಗೌಡ ಹಾಗೂ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಮಣಿಕಂಠ ಅವರು ನೀಡಿರುವ ಹೇಳಿಕೆಗಳು ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರಲ್ಲಿ ಕಸಿವಿಸಿ ಮೂಡಿಸಿದೆ. ಪಂಜಿನ ಮೆರವಣಿಗೆ ಜಯಚಂದ್ರ ಅವರನ್ನು ಸಚಿವರನ್ನಾಗಿ ಮಾಡಲು ನಡೆಸಲಾಯಿತೋ ಅಥವಾ ನರೇಶ್ ಗೌಡ ಅವರನ್ನು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರನ್ನಾಗಿ ಮಾಡಲು ಹೈಕಮಾಂಡ್ ಮೇಲೆ ಒತ್ತಡ ತರಲು ನಡೆಸಿದರೆ ಎನ್ನುವ ಪ್ರಶ್ನೆ ಕಾಂಗ್ರೆಸ್ ಕಾರ್ಯಕರ್ತರನ್ನು ಕಾಡುವಂತಾಗಿದೆ.

ಬ್ಲಾಕ್ ಕಾಂಗ್ರೆಸ್ ನಗರ ಅಧ್ಯಕ್ಷರಾಗಿ ಪಿ.ಆರ್.ಮಂಜುನಾಥ್ ಹಾಗೂ ಗ್ರಾಮಾಂತರ ಅಧ್ಯಕ್ಷರಾಗಿ ಬರಗೂರು ನಟರಾಜು ಅವರಿದ್ದು ಈಗ ಅವರನ್ನು ಬದಲಾಯಿಸುವ ಯಾವುದೇ ಲಕ್ಷಣಗಳು ಇಲ್ಲದಿದ್ದರೂ ನರೇಶ್ ಗೌಡ ಅವರನ್ನು ಅಧ್ಯಕ್ಷರಾಗಿ ನೇಮಕ ಮಾಡುವಂತೆ ಯುವ ಕಾಂಗ್ರೆಸ್ ಅಧ್ಯಕ್ಷರು ಮಾಡಿರುವ ಒತ್ತಾಯ ಕೆಲವರ ಆಕ್ರೋಶಕ್ಕೆ ಕಾರಣವಾಗಿದೆ. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಬದಲಾವಣೆ ಪಕ್ಷದ ಅಂತರಿಕ ವಿಚಾರ ಅದನ್ನು ಪಕ್ಷದ ವೇದಿಕೆಯಲ್ಲಿ ಹಿರಿಯ ನಾಯಕರು ಚರ್ಚೆ ಮಾಡುತ್ತಾರೆ. ಜೊತೆಗೆ ಪಕ್ಷಕ್ಕೆ ಅನುಕೂಲವಾಗುವಂತೆ ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯುವ ಕೆಲಸವನ್ನು ಪಕ್ಷದ ಹೈಕಮಾಂಡ್ ಮಾಡುವುದು. ಅದನ್ನು ಬಿಟ್ಟು ಯುವ ಕಾಂಗ್ರೆಸ್ ಅಧ್ಯಕ್ಷರು ತಮ್ಮ ವೈಯಕ್ತಿಕ ಲಾಭಕ್ಕಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹೇಳಿಕೆಗಳನ್ನು ನೀಡುವ ಮೂಲಕ ಪಕ್ಷದ ವರ್ಚಸ್ಸು ಕುಂದಿಸುತ್ತಿದ್ದಾರೆ ಎನ್ನುವ ದೂರು ತಾಲ್ಲೂಕಿನ ಕಾಂಗ್ರೆಸ್ ವಲಯದಲ್ಲಿ ಕೇಳಿಬಂದಿದೆ.

ಯುವ ಕಾಂಗ್ರೆಸ್ ಅಧ್ಯಕ್ಷರು ಪಕ್ಷವನ್ನು ಸಂಘಟಿಸುವ ಬದಲು ಹಿರಿಯ ನಾಯಕರನ್ನು ಬದಲಿಸಿ ಯುವ ನಾಯಕ ನರೇಶ್ ಗೌಡಗೆ ಅಧ್ಯಕ್ಷ ಸ್ಥಾನ ಕೇಳುವ ಮೂಲಕ ಪಕ್ಷದಲ್ಲಿ ಗೊಂದಲ ಮೂಡಿಸುತ್ತಿದ್ದಾರೆ.

50 ವರ್ಷಗಳ ರಾಜಕೀಯ ಅನುಭವವಿರುವ ಶಾಸಕ ಟಿ.ಬಿ.ಜಯಚಂದ್ರ ಅವರು ಸಹ ಚುನಾವಣೆ ಸಮಯದಲ್ಲಿ ಪಕ್ಷಕ್ಕಾಗಿ ದುಡಿದ ಹಿರಿಯ ಮತ್ತು ಪ್ರಾಮಾಣಿಕ ಕಾರ್ಯಕರ್ತರನ್ನು ಕಡೆಗಣಿಸಿರುವುದು ನೋವಿನ ಸಂಗತಿ ಎಂದು ಹೆಸರು ಹೇಳಲು ಇಚ್ಚಿಸದ ಕಾಂಗ್ರೆಸ್ ಹಿರಿಯ ಮುಖಂಡರೊಬ್ಬರು ನೋವು ತೋಡಿಕೊಂಡರು.

---

# ಮಿನಿ ನ್ಯೂಸ್

## ರೈಲು ನಿಲ್ದಾಣ ನವೀಕರಣ ಕಾರ್ಯ ಪರಿಶೀಲಿಸಿದ ಸಚಿವ ಸೋಮಣ್ಣ

• **ಉದಯವಾಹಿನಿ ರಾಮನಗರ**

ಕೇಂದ್ರ ರೈಲ್ವೆ ಖಾತೆಯ ರಾಜ್ಯ ಸಚಿವ ವಿ. ಸೋಮಣ್ಣ ಅವರು ಪಟ್ಟಣದ ರೈಲು ನಿಲ್ದಾಣಕ್ಕೆ ಬೆಳಿಗ್ಗೆ ಭೇಟಿ ನೀಡಿದರು. ನಿಲ್ದಾಣದಲ್ಲಿ ನಡೆಯುತ್ತಿರುವ ನವೀಕರಣ ಕಾಮಗಾರಿಯನ್ನು ಪರಿಶೀಲಿಸಿದರು. ನಿಲ್ದಾಣದ ಪ್ಲಾಟ್ ಫಾರಂ ವಿಸ್ತರಣೆ ಸೇರಿದಂತೆ ವಿವಿಧ ಕಾಮಗಾರಿಯನ್ನು ಪರಿಶೀಲನೆ ನಡೆಸಿದ ಸೋಮಣ್ಣ, ಅಧಿಕಾರಿಗಳಿಂದ ಪ್ರಗತಿಯ ಮಾಹಿತಿ ಪಡೆದರು. ಪ್ಲಾಟ್ ಫಾರಂನಲ್ಲಿ ನಡೆದುಕೊಂಡು ಹೋಗಿ ಪ್ರಯಾಣಿಕರಿಂದ ರೈಲ್ವೆ ಸೇವೆ ಕುರಿತು ಅಭಿಪ್ರಾಯ ಸಂಗ್ರಹಿಸಿದರು. ಈ ವೇಳೆ ಪ್ರಯಾಣಿಕರು, ಬಿಡದಿ ರೈಲು ನಿಲ್ದಾಣದಲ್ಲಿ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯಾಗಬೇಕು. ಪಟ್ಟಣದಿಂದ ಬಾನಂದೂರಿಗೆ ಹೋಗಲು ನಿಲ್ದಾಣದಲ್ಲಿ ಕೆಳ ಸೇತುವೆ ನಿರ್ಮಿಸಬೇಕು. ಕೈಗಾರಿಕಾ ಪ್ರದೇಶವಾಗಿರುವ ಪಟ್ಟಣಕ್ಕೆ ನಿತ್ಯ ಸಾವಿರಾರು ಜನ ರೈಲಿನಲ್ಲಿ ಬರುತ್ತಾರೆ. ಹಾಗಾಗಿ, ಇಲ್ಲಿ ಪ್ರಮುಖ ರೈಲುಗಳ ನಿಲುಗಡೆ ಮಾಡಬೇಕು ಎಂದು ಒತ್ತಾಯಿಸಿದರು. ಅದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಈ ಕುರಿತು ಅಧಿಕಾರಿಗಳ ಜೊತೆ ಚರ್ಚಿಸಲಾಗುವುದು ಎಂದು ಭರವಸೆ ನೀಡಿದರು. ಇದೇ ವೇಳೆ ಸಚಿವರಿಗೆ ಮನವಿ ಕೊಟ್ಟ ಶಾಸಕ ಎಚ್. ಸಿ. ಬಾಲಕೃಷ್ಣ, ವಂಡರ್ ಲಾಗೆ ಹೋಗುವ ಹೆಜ್ಜಾಲ ರೈಲು ಮಾರ್ಗದ ಮೇಲೇತುವೆಯು ತುಂಬಾ ಕಿರಿದಾಗಿದ್ದು, ಒಂದೇ ಸಲ ಎರಡು ವಾಹನಗಳು ಸಂಚರಿಸಲು ಸಾಧ್ಯವಿಲ್ಲ. ಈ ಮೇಲೇತುವೆಯನ್ನು ಅಗಲ ಮಾಡಬೇಕು ಎಂದು ಒತ್ತಾಯಿಸಿದರು. ಅದಕ್ಕೆ ಸಚಿವರು, ಈ ಕುರಿತು ಸಂಬಂಧಪಟ್ಟವರ ಜೊತೆ ಮಾತನಾಡಿ ಕ್ರಮ ಕೈಗೊಳ್ಳಲಾಗುವುದು ಎಂದರು.

## ಮೊಬೈಲ್ ನಂಬರ್ ಹ್ಯಾಕ್ ಮಾಡಿ ರೂ.1.50 ಲಕ್ಷ ವರ್ಗಾವಣೆ

• **ಉದಯವಾಹಿನಿ ಕನಕಪುರ**

ಸೈಬರ್ ವಂಚಕರು ಮೊಬೈಲ್ ನಂಬರ್ ಹ್ಯಾಕ್ ಮಾಡಿ ವ್ಯಕ್ತಿಯೊಬ್ಬರ ಖಾತೆಯಿಂದ ರೂ.1.50 ಲಕ್ಷ ವರ್ಗಾವಣೆ ಮಾಡಿಕೊಂಡಿರುವ ಘಟನೆ ಸಾತನೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸಾತನೂರು ಹೋಬಳಿ ಕಂಚನಹಳ್ಳಿ ಗ್ರಾಮದ ಗಂಗಾಧರ್ ಹಣ ಕಳೆದುಕೊಂಡ ವ್ಯಕ್ತಿ. ಡಿ.23 ರಂದು ಗಂಗಾಧರ್ ಅವರ ವಾಟ್ಸ್ ಆ್ಯಪ್‌ಗೆ ವಂಚಕರು ಆರ್‌ಟಿಒ ಇ-ಚಲನ್ ಅಪ್ ಎಂಬ ನಕಲಿ ಲಿಂಕ್ ಕಳಿಹಿಸಿದ್ದಾರೆ. ಗಂಗಾಧರ್ ಅದನ್ನು ಕ್ಲಿಕ್ ಮಾಡಿದ ತಕ್ಷಣ ಅವರ ಮೊಬೈಲ್ ಸಂಖ್ಯೆ ಹ್ಯಾಕ್ ಆಗಿ ಅವರ ಮೊಬೈಲ್‌ಗೆ ಬರುವ ಎಲ್ಲಾ ಕರೆ, ಸಂದೇಶಗಳು ಸೈಬರ್ ವಂಚಕರ ನಂಬರಿಗೆ ಫಾರ್ವಡ್‌ರ ಆಗಿವೆ. ನಂತರ ಅವರ ಖಾತೆಯಿಂದ ಹಂತ, ಹಂತವಾಗಿ ರೂ.1.50 ಲಕ್ಷವನ್ನು ವಂಚಕರು ವರ್ಗಾವಣೆ ಮಾಡಿಕೊಂಡಿದ್ದಾರೆ. ಈ ಸಂಬಂಧ ರಾಮನಗರ ಸೈಬರ್ ಕ್ರೈಂಗೆ ದೂರು ನೀಡಿದ್ದು, ಸೈಬರ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಿಜೆಪಿಯಿಂದ ಮತ್ತೊಮ್ಮೆ ಬಾಪೂ ಹತ್ಯೆ: ನರೇಗಾ ಹೆಸರು ಬದಲಾವಣೆಗೆ ರಾಮಲಿಂಗಾರೆಡ್ಡಿ

• **ಉದಯವಾಹಿನಿ ಮಾಗಡಿ**

ಪಟ್ಟಣದ ಎನ್‌ಇಎಸ್ ಸರ್ಕಲ್‌ನಲ್ಲಿ ಮಹಾತ್ಮ ಗಾಂಧಿ ನೂತನ ಪ್ರತಿಮೆಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅನಾವರಣಗೊಳಿಸಿದರು.ಮಹಾತ್ಮ ಗಾಂಧಿ ಅವರ ಹೆಸರಿನಲ್ಲಿದ್ದ ನರೇಗಾ ಯೋಜನೆ ಹೆಸರನ್ನು ಬದಲಾಯಿಸುವ ಮೂಲಕ ಬಿಜೆಪಿಯವರು ಮತ್ತೊಮ್ಮೆ ಬಾಪೂ ಕೊಲೆ ಮಾಡಿದ್ದಾರೆ ಎಂದು ಅವರು ಟೀಕಿಸಿದರು. ಬಾಪೂ ಹತ್ಯೆಗೆ ಆರು ಬಾರಿ ಪ್ರಯತ್ನಿಸಿದ್ದ ಸಂಘ ಪರಿವಾರದ ಸದಸ್ಯ ನಾಡೂರಾಮ ಗೋಡ್ರೆ, ಏಳನೇ ಬಾರಿಗೆ ಅದರಲ್ಲಿ ಯಶಸ್ವಿಯಾದ. ಈಗ ಬಿಜೆಪಿಯವರು ನರೇಗಾ ಹೆಸರು ಬದಲಾವಣೆ ಮೂಲಕ ಮತ್ತೊಮ್ಮೆ ಗಾಂಧೀಜಿ ಅವರನ್ನು ಹತ್ಯೆ ಮಾಡಿದ್ದಾರೆ ಎಂದರು.

## ವ್ಯಸನಮುಕ್ತರಾಗಲು ಅಯ್ಯಪ್ಪ ಭಕ್ತರಾಗಿ: ಶಿವಾಚಾರ್ಯ ಸ್ವಾಮೀಜಿ

• **ಉದಯವಾಹಿನಿ ತುಮಕೂರು**

ಅಯ್ಯಪ್ಪಸ್ವಾಮಿ ಭಕ್ತರಾದವರು ವ್ಯಸನ ಮುಕ್ತರಾಗಬೇಕು ಎಂದು ಹಿರೇಮಠಾಧ್ಯಕ್ಷ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಸಲಹೆ ನೀಡಿದರು.ನಗರದ ಕೆ.ಆರ್.ಬಡಾವಣೆ ಬಿದಿರುಮಳೆ ತೋಟದ ರಸ್ತೆಯಲ್ಲಿರುವ ಮಣಿಕಂಠ ಸ್ವಾಮಿ ಚಾರಿಟೆಬಲ್ ಟ್ರಸ್ಟ್‌ನ ಅಯ್ಯಪ್ಪಸ್ವಾಮಿ ದೇವಾಲಯದ 27ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಮಾತನಾಡಿದರು. ನಮ್ಮ ಸಂಸ್ಕೃತಿಯಲ್ಲಿ ಅಯ್ಯಪ್ಪ ಸ್ವಾಮಿ ಭಕ್ತರು ಸೇರಿದಂತೆ ಪ್ರತಿಯೊಬ್ಬರೂ ತಂದೆ-ತಾಯಿ, ಗುರು-ಹಿರಿಯರನ್ನು ಗೌರವದಿಂದ ಕಾಣಬೇಕು. ಯಾವುದೇ ಕಾರಣಕ್ಕೂ ಹೆತ್ತವರನ್ನು ಗೋಳಾಡಿಸದೆ ನೋಡಿಕೊಳ್ಳಬೇಕು. ಅಯ್ಯಪ್ಪಸ್ವಾಮಿ ದೀಕ್ಷೆ ಪಡೆದ ಅವಧಿಯಲ್ಲಿ ರೂಢಿಸಿಕೊಳ್ಳುವ ಆಚಾರ, ವಿಚಾರಗಳನ್ನು ಬದುಕಿನುದ್ದಕ್ಕೂ ನಿರಂತರವಾಗಿ ಪಾಲಿಸಬೇಕು. ಎಂದಿಗೂ ದಾರಿ ತಪ್ಪಬಾರದು ಎಂದು ಹೇಳಿದರು.

---

# ಚೆಂಡು ಹೂ ಕಾರ್ಖಾನೆ ವಿರುದ್ಧ ಸಿಡಿದೆದ್ದ ಗ್ರಾಮಸ್ಥರು: ಪ್ಯಾಕ್ಟರಿ ಸ್ಥಗಿತಕ್ಕೆ ಒತ್ತಾಯ

## ಎಸ್.ಟಿ. ಮಹದೇವಸ್ವಾಮಿ ಈ ಹಿಂದೆಯೇ ಕಾರ್ಖಾನೆ ಸ್ಥಾಪನೆಗೆ ಬಾರಿ ವಿರೋಧ ವ್ಯಕ್ತವಾಗಿ ಉಗ್ರ ಪ್ರತಿಭಟನೆ

• **ಉದಯವಾಹಿನಿ ಗುಂಡ್ಲುಪೇಟೆ**

ತಾಲ್ಲೂಕಿನ ಕಗ್ಗಳದಹುಂಡಿ ಸಮೀಪ ಸ್ಥಳೀಯ ರೈತರ ಬಾರಿ ವಿರೋಧದ ನಡುವೆಯೂ ಕಾರ್ಯಪ್ರವೃತ್ತವಾಗಿರುವ ಚೆಂಡು ಹೂ ಕಾರ್ಖಾನೆಯಿಂದ ಕೆಟ್ಟ ದುರ್ವಾಸನೆ ಹೊರಬೀಳುತ್ತಿದ್ದು ಸುತ್ತಮುತ್ತಲ ಗ್ರಾಮಸ್ಥರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಆದುದರಿಂದ ಈ ಕೂಡಲೇ ಸಂಸ್ಕರಣ ಘಟಕವನ್ನ ಮುಚ್ಚಿಸಲು ಜಿಲ್ಲಾಡಳಿತ ಮುಂದಾಗಬೇಕು ಇಲ್ಲವಾದಲ್ಲಿ ಬೇರೆಡೆ ಜನನಿಬಿಡ ಪ್ರದೇಶದಿಂದ ಹೊರಗೆ ಸ್ಥಳಾಂತರ ಮಾಡಬೇಕು ಎಂದು ಸಾಮೂಹಿಕ ನಾಯಕತ್ವ ರೈತ ಸಂಘದ ಪದಾಧಿಕಾರಿಗಳು ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಎಸ್.ಟಿ. ಮಹದೇವಸ್ವಾಮಿ ಈ ಹಿಂದೆಯೇ ಕಾರ್ಖಾನೆ ಸ್ಥಾಪನೆಗೆ ಬಾರಿ ವಿರೋಧ ವ್ಯಕ್ತವಾಗಿ ಉಗ್ರ ಪ್ರತಿಭಟನೆಯನ್ನ ನಡೆಸಲಾಗಿ ಅಂದು ಅನೇಕ ರೈತ


ಉದಯವಾಹಿನಿ ಚಿತ್ರ

ಹೋರಾಟಗಾರರು ಗ್ರಾಮಸ್ಥರು ಪೊಲೀಸರ ಬಂದನಕ್ಕೊಳಗಾಗಿದ್ದರು, ಸ್ಥಳೀಯರ ಪ್ರಬಲ ವಿರೋಧದ ನಡುವೆಯೂ ಸರ್ಕಾರ ಹಾಗೂ ಪ್ರಭಾವಿಗಳ ಸಹಕಾರದಿಂದ ಕಾರ್ಖಾನೆ ಶುರುವಾದ ಹಿನ್ನೆಲೆ ಇಂದು ನಮಗೆ ಅನಾರೋಗ್ಯದ ಭೀತಿ ಎದುರಾಗಿದೆ, ಮನುಷ್ಯರಿಗಲ್ಲದೆ ಜಾನುವಾರುಗಳಿಗೂ ಸಹ ಕುಡಿಯಲು ಶುದ್ದ ನೀರು ಸಿಗದೆ ಪರದಾಡುವಂತಾಗಿದೆ ಎಂದು ಬೇಸರ ಹೊರಹಾಕಿದರು.

ಕಾರ್ಖಾನೆ ಹೊರಸೂಸುವ ಕೆಟ್ಟ ದುರ್ವಾಸನೆಯಿಂದ ಸ್ಥಳೀಯರು ಬಳಲುವಂತಾಗಿದೆ, ಪ್ಯಾಕ್ಟರಿಯ ಆಸುಪಾಸಿನಲ್ಲಿರುವ ಗ್ರಾಮದವರಾದ ನಾವು ಅನೇಕ ಬಾರಿ ತಾಲ್ಲೂಕು ಹಾಗೂ ಜಿಲ್ಲಾಡಳಿತದ ಗಮನಕ್ಕೆ ತರುವ ಮೂಲಕ ಕೆಟ್ಟ ವಾಸನೆ ವಾತಾವರಣದಿಂದ ಮುಕ್ತಿ ನೀಡುವಂತೆ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ,

ಕಳೆದ ವಾರವಷ್ಟೇ ಪ್ಯಾಕ್ಟರಿಯಿಂದ ಚಾಮರಾಜನಗರ ಜಿಲ್ಲಾಧಿಕಾರಿಗಳ ಕಚೇರಿವರೆಗೆ ದ್ವಿಚಕ್ರ ವಾಹನ ಯಾತ್ರೆ ಹೋಗುವ ಮೂಲಕ ಮನವಿ ಸಲ್ಲಿಸಿದ್ದೆವು ಹಾಗೂವಿನಂತಿ ಪತ್ರ ಸ್ವೀಕರಿಸಿದ ಜಿಲ್ಲಾಧಿಕಾರಿಗಳು ಕ್ರಮದ ಭರವಸೆ ನೀಡಿದ್ದರು ಹಾಗೆಯೇ ಮಾಲಿನ್ಯ ನಿಯಂತ್ರಣ ಅಧಿಕಾರಿಗಳು ಪರಿಶೀಲನೆ ನಡೆಸುವ ಭರವಸೆ ನೀಡಿದ್ದರೂ ಸಹ ಯಾವುದೇ ಪ್ರಯೋಜನವಾಗಿಲ್ಲ ಎಂದರು.

### ನಾಲ್ಕು ಗ್ರಾಮಪಂಚಾಯತಿಗಳಿಗೆ ಮುತ್ತಿಗೆಗೆ ತೀರ್ಮಾನ

ಚೆಂಡು ಹೂ ಕಾರ್ಖಾನೆಗೆ ಹೊಂದಿಕೊಂಡಂತಿರುವ ತೆರಕಣಾಂಬಿ, ಕೆಲಸೂರು, ಶಿಂಡನಪುರ, ಕೊಡಸೋಗೆ ಗ್ರಾಮಪಂಚಾಯತಿ ಆಡಳಿತ ಮಂಡಳಿ ಅದ್ವಾನದ ವಿರುದ್ದ ದನಿ ಎತ್ತದೆ ಮೌನವಾಗಿರುವುದು ವಿಷಾದಕರ ಸಂಗತಿಯಾಗಿದೆ, ಜನಸಾಮಾನ್ಯರ ಹಿತವನ್ನ ಪರಿಗಣನೆಗೆ ತೆಗೆದುಕೊಳ್ಳದ ಗಾಢ ನಿದ್ರೆಗೆ ಜಾರಿರುವ ಪಂಚಾಯತಿಗಳಿಗೆ ಮುತ್ತಿಗೆ ಹಾಕುವ ಮೂಲಕ ಬೀಗ ಜಡಿಯಲಾಗುವುದು ಎಂದು ಎಚ್ಚರಿಸಿದರು. ಕಾರ್ಖಾನೆಯ ದುರ್ವಾಸನೆಯಿಂದ ಕೆಲವೇ ದಿನಗಳಲ್ಲಿ ಇಡೀ ತಾಲೂಕಿನ ಜನತೆ ರೋಗರುಜಿನಗಳಿಗೆ ತುತ್ತಾಗುವ ಕಾಲ ಸನ್ನಿತವಾಗತೊಡಗಿದೆ, ಜನಸಾಮಾನ್ಯರ ಹಿತಕಾಯುವ ಬದ್ಧತೆ ಸರ್ಕಾರಕ್ಕೆ ಹಾಗೂ ಜಿಲ್ಲಾಡಳಿತಕ್ಕೆ ಇದ್ದಲ್ಲಿ ಕೂಡಲೇ ಪ್ಯಾಕ್ಟರಿಯನ್ನ ಬಂದ್ ಮಾಡಬೇಕು ಅಥವಾ ಬೇರೆಡೆಗೆ ಸ್ಥಳಾಂತರಿಸಬೇಕು ಇಲ್ಲವಾದಲ್ಲಿ ಹೋರಾಟ ತೀವ್ರ ಸ್ವರೂಪ ಪಡೆದುಕೊಳ್ಳಲಿದೆ ಎಂದು ಎಚ್ಚರಿಕೆ ನೀಡಿದರು.

## ಒಳ್ಳೆಯ ಸ್ನೇಹಿತ ನಿಜವಾದ ಔಷಧ



ಉದಯವಾಹಿನಿ ಚಿತ್ರ

• ಉದಯವಾಹಿನಿ ಶಿವಮೊಗ್ಗ

ಒತ್ತಡ ನಿವಾರಣೆಗೆ ಒಳ್ಳೆಯ ಸ್ನೇಹಿತರೆ ನಿಜವಾದ ಔಷಧ ಎಂದು ವಿಧಾನ ಪರಿಷತ್ ಸದಸ್ಯ ಡಾ. ಧನಂಜಯ ಸರ್ಜಿ ಹೇಳಿದರು. ಇಲ್ಲಿನ ಸ್ವಾಮಿ ವಿವೇಕಾನಂದ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘ ಆಯೋಜಿಸಿದ್ದ ಎಂಸಿಸಿ ಕಪ್ ಸೀಸನ್-3 ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿದರು.

ಹಸಿವಾಗ್ತಿಲ್ಲ, ನಿದ್ದೆ ಬತ್ತಿಲ್ಲ, ಜೀರ್ಣ ಆಗ್ತಿಲ್ಲ... ಹೀಗೆ ಪ್ರತಿಯೊಂದಕ್ಕೂ ಮಾತ್ರೆ ಕೊಡಿ ಎಂದು ವೈದ್ಯರನ್ನು ಎಡತಾಕುವವರ ಸಂಖ್ಯೆ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದೆ. ಸ್ನೇಹಿತರು, ಕುಟುಂಬದ ಸದಸ್ಯರೊಂದಿಗೆ ಒಳ್ಳೆಯ ಸಮಯ ಕಳೆಯುವುದೇ ಇಂತಹ ಸಮಸ್ಯೆಗಳಿಗೆ ದಿವೌಷಧ. ಪ್ರತಿಯೊಂದಕ್ಕೂ ಔಷಧಗಳನ್ನು ಅವಲಂಬಿಸುವುದು ಸೂಕ್ತವಲ್ಲ ಎಂದು ಕಿವಿಮಾತು ಹೇಳಿದರು.

ಇತ್ತೀಚೆಗೆ ಹೃದಯಾಘಾತ ಹೆಚ್ಚಾಗುತ್ತಿದೆ, ಚಿಕ್ಕ ವಯಸ್ಸಿನವರು ಉಸಿರು ಚೆಲ್ಲುತ್ತಿದ್ದಾರೆ. ಆದ ಕಾರಣ ವಾಕಿಂಗ್, ಧ್ಯಾನದತ್ತ ಗಮನ ಹರಿಸಬೇಕು. ನಿತ್ಯ ವಾಕಿಂಗ್ ಮಾಡಬೇಕು. ಬೆಳಿಗ್ಗೆ ಎದ್ದ ಬಳಿಕ ಒಂದು ತಾಸು ಆಗುವವರೆಗೂ, ಮಲಗುವ ಒಂದು ತಾಸು ಮೊದಲು, ಊಟ ಮಾಡುವಾಗ ಮೊಬೈಲ್ ಫೋನ್ ನೋಡಬಾರದು ಎಂದರು. ನಮ್ಮ ಆಲೋಚನೆಗಳು ಸದಾ ಉತ್ತುಂಗದಲ್ಲಿರಬೇಕು. ಒಳ್ಳೆಯ ಆಲೋಚನೆಗಳು ದೇಶ ಕಟ್ಟಲು ಪೂರಕ. ನಮ್ಮ ಹೆಜ್ಜೆಗಳು ಸದಾ ಗೆಲುವಿನೆಡೆಗೆ ಇರಬೇಕು ಎಂದು ಶಾಸಕ ಎಸ್.ಎನ್. ಚನ್ನಬಸಪ್ಪ ಹೇಳಿದರು.

ಕ್ರೀಡೆಗಳು ಜೀವನದ ಪಾಠ ಕಲಿಸುತ್ತವೆ. ಇಂದಿನ ದಿನಗಳಲ್ಲಿ ಪಠ್ಯದಷ್ಟೇ ಪಠ್ಯೇತರ ಚಟುವಟಿಕೆಗಳು ಮುಖ್ಯ. ಈ ನಿಟ್ಟಿನಲ್ಲಿ ಗಮನ ಹರಿಸಬೇಕು ಜಿಲ್ಲಾ ಯುವ ಸಬಲೀಕರಣ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ರೇಖ್ಯಾ ನಾಯ್ಕ ತಿಳಿಸಿದರು.

### ಸಂಪುಟ ಸಭೆ ಅನುಮೋದಿಸುವವರೆಗೂ ಅನಿರ್ದಿಷ್ಟಾವಧಿ ಹೋರಾಟದಿಂದ ಹಿಂದೆ ಸರಿಯುವುದಿಲ್ಲ

# 100ಕ್ಕೆ ಕಾಲಿಟ್ಟ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಹೋರಾಟ

• ಉದಯವಾಹಿನಿ ವಿಜಯಪುರ

ವಿಜಯಪುರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವುದಾಗಿ ಅಧಿಕೃತವಾಗಿ ಘೋಷಣೆ ಮಾಡಿ, ಸಚಿವ ಸಂಪುಟ ಸಭೆ ಅನುಮೋದಿಸುವವರೆಗೂ ಅನಿರ್ದಿಷ್ಟಾವಧಿ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಹೋರಾಟ ಸಮಿತಿ ಸ್ಪಷ್ಟಪಡಿಸಿದೆ.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಹೋರಾಟ ಸಮಿತಿ ಸದಸ್ಯರಾದ ವಿ.ಸಿ.ನಾಗಠಾಣ, ಅನಿಲ ಹೊಸಮನಿ, ವಿಜಯಪುರದಲ್ಲಿ ಉದ್ದೇಶಿತ ಖಾಸಗಿ ಸಹಭಾಗಿತ್ವ (ಪಿಪಿಪಿ) ಕೈಬಿಟ್ಟು, ಸಂಪೂರ್ಣ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಲು ಮುಂದಾಳತ್ವವನ್ನು ನಾನೇ ವಹಿಸಿಕೊಳ್ಳುತ್ತೇನೆ. ಮುಖ್ಯಮಂತ್ರಿ ಬಳಿಗೆ ಮತ್ತೊಮ್ಮೆ ನಿಯೋಗ ಕೊಂಡೊಯ್ಯುತ್ತೇನೆ ಎಂದಿರುವ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲರ ಹೇಳಿಕೆ ಸ್ವಾಗತಿಸುತ್ತೇವೆ ಮತ್ತು ಅಭಿನಂದಿಸುತ್ತೇವೆ ಎಂದು ಹೇಳಿದರು.

**ಚರ್ಚಿಸಿ, ಅನುಮೋದನೆ ಕೊಡಿಸಲಿ**

ಸಚಿವ ಎಂ.ಬಿ.ಪಾಟೀಲರ ಮೇಲೆ ಸಂಪೂರ್ಣ ವಿಶ್ವಾಸ ಇರುವುದರಿಂದ ಹೋರಾಟಗಾರರು ಮತ್ತೊಮ್ಮೆ ಮುಖ್ಯಮಂತ್ರಿ ಬಳಿಗೆ ನಿಯೋಗ ಹೋಗುವ ಅಗತ್ಯವಿಲ್ಲ. ಜಿಲ್ಲೆಯ ಇಬ್ಬರು ಸಚಿವರು, ಇನ್ನುಳಿದ ಶಾಸಕರ ಬೆಂಬಲದೊಂದಿಗೆ ಸಿಎಂ ಮನವೊಲಿಸಿ ಮುಂದಿನ ಒಂದು ಅಥವಾ ಎರಡನೇ ಸಚಿವ ಸಂಪುಟದಲ್ಲಿ ವಿಜಯಪುರಕ್ಕೆ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ವಿಷಯವನ್ನು ಚರ್ಚಿಸಿ, ಅನುಮೋದನೆ ಕೊಡಿಸಲಿ' ಎಂದು ಮನವಿ ಮಾಡಿದರು.

ಜನವರಿ 9ರಂದು ಮುಖ್ಯಮಂತ್ರಿಯವರು ವಿಜಯಪುರಕ್ಕೆ ಬರುವುದರೊಳಗೆ ಸರ್ಕಾರ ವೈದ್ಯಕೀಯ ಕಾಲೇಜು ಸ್ಥಾಪನೆ ವಿಷಯ ಅಧಿಕೃತವಾಗಿ ಘೋಷಣೆಯಾಗಬೇಕು. ಇಲ್ಲವಾದರೆ ಹೋರಾಟವನ್ನು ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಹೋರಾಟವು ಡಿ.26ಕ್ಕೆ 100 ದಿನ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ, ಸಚಿವ ಶಿವಾನಂದ ಪಾಟೀಲರ ಮನೆ ಎದುರು ಧರಣಿ ನಡೆಸಲು ಈಗಾಗಲೇ ನಿರ್ಧರಿಸಲಾಗಿತ್ತು. ಆದರೆ, ಎಂ.ಬಿ.ಪಾಟೀಲರು ಪಿಪಿಪಿ ಮುಗಿದ ಅಧ್ಯಾಯ, ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಯ ಜವಾಬ್ದಾರಿ ವಹಿಸಿಕೊಳ್ಳುವುದಾಗಿ ಘೋಷಣೆ ಮಾಡಿರುವುದರಿಂದ ಅವರ ಮಾತಿಗೆ ಬೆಲೆ ಕೊಟ್ಟು, ಸಚಿವರ ಮನೆ ಎದುರು ಧರಣಿಯನ್ನು ತಾತ್ಕಾಲಿಕವಾಗಿ ಕೈಬಿಟ್ಟಿದ್ದೇವೆ. ಒಂದು ವೇಳೆ ನಮ್ಮ ಬೇಡಿಕೆಗೆ ಸ್ಪಂದನೆ ಸಿಗದಿದ್ದರೇ ಸಚಿವರ ಮನೆ ಎದುರು ಧರಣಿ ನಡೆಸುವುದು ನಿಶ್ಚಿತ ಎಂದರು.

ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ ನೀಡುವ ಜೊತೆಗೆ ಶೀಘ್ರವಾಗಿ ಕಾಲೇಜು ಸ್ಥಾಪನೆಗೆ ಅನುದಾನ ಬಿಡುಗಡೆ ಮಾಡಬೇಕು, ಅಗತ್ಯ ಕ್ರಮಕೈಗೊಳ್ಳಬೇಕು. ಕಾಂಗ್ರೆಸ್ ಸರ್ಕಾರದ ಅವಧಿಯೊಳಗೆ ಕಾಲೇಜು ಕಾರ್ಯಾರಂಭ ಮಾಡಬೇಕು ಎಂದು ಆಗ್ರಹಿಸಿದರು.



ಉದಯವಾಹಿನಿ ಚಿತ್ರ

> ಪಿಪಿಪಿ ಬಿಜೆಪಿ ಕೂಸಿರಬಹುದು. ಆದರೆ ಕಾಂಗ್ರೆಸ್ ಸರ್ಕಾರ ಆ ಕೂಸನ್ನು ಎತ್ತಿ ಆಡಿಸುತ್ತಿರುವುದು ಏಕೆ? ರಾಹುಲ್ ಗಾಂಧಿ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಇಡೀ ಕಾಂಗ್ರೆಸಿಗರು ಖಾಸಗೀಕರಣದ ವಿರುದ್ಧ ಧ್ವನಿ ಎತ್ತಿರುವಾಗ ರಾಜ್ಯ ಸರ್ಕಾರ ಪಿಪಿಪಿ ಪರ ಏಕೆ?
>
> -ಅನಿಲ ಹೊಸಮನಿ ಸದಸ್ಯ, ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನಾ ಹೋರಾಟ ಸಮಿತಿ

ಹೋರಾಟದ ವೇದಿಕೆಯು ಪಕ್ಷಾತೀತ, ಜಾತ್ಯತೀತವಾಗಿದೆ. ಕಾಂಗ್ರೆಸ್, ಬಿಜೆಪಿ, ಜೆಡಿಎಸ್, ಎಎಪಿ, ಸಿಪಿಎಂ, ಸಿಪಿಐ ಸೇರಿದಂತೆ ಹಲವು ವಿದ್ಯಾರ್ಥಿ ಸಂಘಟನೆಗಳು, ಮಹಿಳಾ ಸಂಘಟನೆಗಳು, ದಲಿತಪರ ಸಂಘಟನೆಗಳು, ರೈತ ಸಂಘಟನೆ, ಕನ್ನಡಪರ ಸಂಘಟನೆಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಸಂಘ, ಸಂಸ್ಥೆಗಳ ಮುಖಂಡರು ಹೋರಾಟದಲ್ಲಿ ಪಾಲ್ಗೊಂಡು ಬೆಂಬಲಿಸಿದ್ದಾರೆ. ಈ ಹೋರಾಟ ಯಾವ ಪಕ್ಷ, ಸರ್ಕಾರ ಅಥವಾ ವ್ಯಕ್ತಿ ವಿರುದ್ಧವಲ್ಲ. ವೇದಿಕೆಯಲ್ಲಿ ಮಾತನಾಡಿದ ಕೆಲವರು ರಾಜಕೀಯ ಆರೋಪ ಮಾಡಿರಬಹುದು, ಅದಕ್ಕೂ ಹೋರಾಟಕ್ಕೂ ಸಂಬಂಧವಿಲ್ಲ. ಇದರಲ್ಲಿ ಯಾರೂ ರಾಜಕೀಯ ಮಾಡಬಾರದು ಎಂದರು.

**-ಮಹಿಳೆಯರಿಂದ ಅಹೋರಾತ್ರಿ ಧರಣಿ**

**ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಲು ಆಗ್ರಹಿಸಿ ಹತ್ತಾರು ಮಹಿಳೆಯರು ಮೈಕೊರೆಯುವ ಚಳಿಯಲ್ಲಿ ಅಹೋರಾತ್ರಿ ಧರಣಿ ನಡೆಸುವ ಮೂಲಕ ಗಮನ ಸೆಳೆದರು. ಮೈಕೊರೆಯುವ ಚಳಿಯಲ್ಲಿ ಜನರು ಮನೆಯಿಂದ ಹೊರಬರಲು ಅಂಜುವ ಸ್ಥಿತಿಯಲ್ಲಿ ಅದರಲ್ಲೂ ರಾತ್ರಿ ವೇಳೆ ಲಲಿತಾ ಬಿಜ್ಜರಗಿ ನೇತೃತ್ವದಲ್ಲಿ ಮಹಿಳೆಯರು ರಾತ್ರಿಯಿಡೀ ಹೋರಾಟ ಮಾಡಿರುವುದು ಮೆಚ್ಚುಗೆಗೆ ಕಾರಣವಾಯಿತು. ತಡರಾತ್ರಿವರೆಗೂ ಕ್ರಾಂತಿಗೀತೆಗಳನ್ನು ಹಾಡುತ್ತಾ ಘೋಷಣೆಗಳನ್ನು ಕೂಗುತ್ತಾ ಧರಣಿ ನಡೆಸಿದರು. ಹೋರಾಟ ಸ್ಥಳದಲ್ಲೇ ಬೆಂಕಿ ಕಾಯಿಸಿ ಚಳಿಯಿಂದ ರಕ್ಷಣೆ ಪಡೆದರು.**

## ಮನೆಯಲ್ಲಿಯೇ ಕುಳಿತು ಇ-ಖಾತಾವನ್ನು ಫಾರಂ, ನಂಬರ್ : 3 ಪಡೆದುಕೊಳ್ಳಿ: ಸಾಬಣ್ಣ ಕಟ್ಟಿಕಾರ್, ಪು, ಮುಖ್ಯಾಧಿಕಾರಿ

• ಉದಯ ವಾಹಿನಿ ಕಾರಟಗಿ

ಪುರಸಭೆ ವ್ಯಾಪ್ತಿಯ ಎಲ್ಲಾ ಆಸ್ತಿ ಮಾಲೀಕರು ಹಾಗೂ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ಸರ್ಕಾರದ ನಿರ್ದೇಶನದಂತೆ ಖಾತೆ ನಮೂನೆ-3 (ಫಾರಂ ನೋ.3) ಪಡೆಯುವ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. ಇನ್ನು ಮುಂದೆ ಮನೆಯಲ್ಲಿಯೇ ಕುಳಿತು ನಿಮ್ಮ ಬೆರಳ ತುದಿಯಲ್ಲಿ ಫಾರಂ ನಂಬರ-3 ಗಾಗಿ ಅರ್ಜಿ ಸಲ್ಲಿಸಬಹುದು. ಖುದ್ದಾಗಿ ಕಛೇರಿಗೆ ಅಲೆದಾಡುವ ಸಮಸ್ಯೆಯೇ ಇಲ್ಲ.ಈ ಸಂಬಂಧ ಕಾರಟಗಿ ಪುರಸಭೆ ವ್ಯಾಪ್ತಿಯಲ್ಲಿನ ಎಲ್ಲಾ ಆಸ್ತಿಗಳ ವಿವರಗಳು ಹಾಗೂ ದಾಖಲೆಗಳನ್ನು ಸರ್ಕಾರದ ಅಧಿಕೃತ ವೆಬ್‌ಸೈಟ್ https: //eaasthi.karnataka.gov.in ನಲ್ಲಿ ಅಪ್‌ಲೋಡ್ ಮಾಡಿ ಸಾರ್ವಜನಿಕರಿಗೆ ಪರಿಶೀಲನೆಗಾಗಿ ಮುಕ್ತಗೊಳಿಸಲಾಗಿದೆ.

ಸಾರ್ವಜನಿಕರು ತಮ್ಮ ತಮ್ಮ ಆಸ್ತಿ ವಿವರಗಳನ್ನು ವೆಬ್‌ಸೈಟ್‌ನಲ್ಲಿ ಆಸ್ತಿ ಮಾಲೀಕರ ಹೆಸರಿನ ಆಧಾರದ ಮೇಲೆ, ಖಾತೆ ಸಂಖ್ಯೆ (ಖಾತಾ ನಂಬರ್) ಆಧಾರದ ಮೇಲೆ ಅಥವಾ ಪಿಐಡಿ ಸಂಖ್ಯೆ (ಪಿಡ್ ನಂಬರ್) ಆಧಾರದ ಮೇಲೆ ಸುಲಭವಾಗಿ ಹುಡುಕಿ ಪರಿಶೀಲಿಸಬಹುದಾಗಿದೆ.





ಉದಯವಾಹಿನಿ ಚಿತ್ರ

ವೆಬ್‌ಸೈಟ್‌ನಲ್ಲಿ ತೋರಿಸಿರುವ ಆಸ್ತಿ ವಿವರಗಳು ಹಾಗೂ ನೋಂದಣಿ ಮಾಹಿತಿ ಸರಿಯಾಗಿದ್ದಲ್ಲಿ ಸಾರ್ವಜನಿಕರು ಖಾತೆ ನಮೂನೆ-3 (ಫಾರಂ ನೋ.3)ಗೆ ಅರ್ಜಿ ಸಲ್ಲಿಸಬಹುದಾಗಿದೆ. ಯಾವುದೇ ಮಾಹಿತಿ ತಪ್ಪಾಗಿದ್ದಲ್ಲಿ ಅಥವಾ ತಿದ್ದುಪಡಿ ಅಗತ್ಯವಿದ್ದಲ್ಲಿ, ಸಂಬಂಧಿಸಿದ ದಾಖಲೆಗಳನ್ನು ತಿದ್ದುಪಡಿ ಮಾಡಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

**ನಮೂನೆ-3 ಗಾಗಿ ಅಪ್ಲೋಡ ಮಾಡಬೇಕಾದ ದಾಖಲೆಗಳು :** 1) ಮಾಲೀಕರ ಭಾವಚಿತ್ರ 2) ಚಾಲ್ತಿ ಸಾಲಿನ ಆಸ್ತಿತೆರಿಗೆ ಎಸ್.ಎ.ಎಸ್. ಚಲನ್ ಸಂಖ್ಯೆ 3) ಆಸ್ತಿ ಸ್ವತ್ತಿನ ಹಕ್ಕುಪತ್ರ/ಕ್ರಯ/ನೋಂದಾಯಿತ ಪತ್ರ 4) ವಿದ್ಯುತ್ ಆರ್.ಆರ್. ಸಂಖ್ಯೆ (ಖಾಲಿ ನಿವೇಶನಕ್ಕೆ ಅಗತ್ಯವಿಲ್ಲ) 5) ಸ್ವತ್ತಿನ ಛಾಯಾಚಿತ್ರ 6) ಇ.ಸಿ. ನಮೂನೆ15/16, 7) ಆಧಾರ ಕಾರ್ಡ ಪ್ರತಿ 8) ಮುಟೇಶನ್ ಪ್ರತಿ 09) ಸರ್ವೆ ನಕ್ಷೆ 10) ಎನ್.ಎ. ಕಾಪಿ 11) ಪ್ರಾಧಿಕಾರದ ಆದೇಶ ಮತ್ತು ನಕ್ಷೆ, ಸ್ವತ್ತಿಗೆ ಸಂಬಂಧಿಸಿದ ಇನ್ನಿತರೆ ಪೂರಕ ಅಗತ್ಯ ದಾಖಲೆಗಳು.


ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಕಾರಟಗಿ ಪುರಸಭೆಯನ್ನು ಸಂಪರ್ಕಿಸಬಹುದಾಗಿದೆ. ದೂರವಾಣಿ ಸಂಖ್ಯೆ: 08539-274232 72595 8595 ಪುರಸಭಾ ಮುಖ್ಯ ಅಧಿಕಾರಿ,ಪುರಸಭಾ ಅಧ್ಯಕ್ಷರು ಕಾರಟಗಿ.

## ದೇಶದ ಪ್ರಗತಿಗೆ ಭದ್ರ ಬುನಾದಿ ಹಾಕಿದ ಮೇಧಾವಿ

• ಉದಯವಾಹಿನಿ ಹಾಸನ

ಪಕ್ಷಕ್ಕಿಂತ ದೇಶ ಮುಖ್ಯ, ವ್ಯಕ್ತಿಗಿಂತ ಪಕ್ಷ ಮುಖ್ಯ ಎನ್ನುತ್ತ ನಿಸ್ವಾರ್ಥ, ಪಕ್ಷಾತೀತವಾಗಿ ಅಜಾತಶತ್ರು ಅಟಲ್ ಬಿಹಾರಿ ವಾಜಪೇಯಿ ಅವರು ದೇಶದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅವರ ಸೇವೆ ಅವಿಸ್ಮರಣೀಯ ಎಂದು ಬಿಜೆಪಿ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ ಹೇಳಿದರು. ನಗರದ ಆರ್.ಸಿ. ರಸ್ತೆಯ ಬಿಜೆಪಿ ಪಕ್ಷದ ಕಚೇರಿಯಲ್ಲಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 101ನೇ ಜನ್ಮ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಜನಸಂಘದ ಮೂಲಕ ರಾಜಕೀಯಕ್ಕೆ ಪದಾರ್ಪಣೆ ಮಾಡಿದ ಅವರು, ಜನತಾ ಪಕ್ಷದ ಮೂಲಕ ಕ್ರಾಂತಿ ಮಾಡಿದರು. ಪ್ರಧಾನಿ ಹುದ್ದೆಯನ್ನು ಅಲಂಕರಿಸಿದ ಬಳಿಕ ದೇಶಕ್ಕೆ ಹಲವಾರು ಯೋಜನೆಗಳನ್ನು ಜಾರಿಗೆ ಮಾಡಿದರು. ಅವರ ನಿಸ್ವಾರ್ಥ ಸೇವೆ ಇಂದಿಗೂ ಆದರ್ಶವಾಗಿದೆ ಎಂದರು. ವಿಕಸಿತ ಭಾರತ ಎಂಬ ಪರಿಕಲ್ಪನೆಯ ಯೋಜನೆಯನ್ನು ಇಂದು ಪ್ರಧಾನಿ ಮೋದಿಯವರು ಮುನ್ನಡೆಸಿಕೊಂಡು ಬರುತ್ತಿದ್ದಾರೆ. ವಾಜಪೇಯಿ ಅವರ ಅಧಿಕಾರ ಅವಧಿಯಲ್ಲಿ ಮಾಡಿದ ಸಾಧನೆ ಬಗ್ಗೆ ಇಂದಿನ ಬಿಜೆಪಿ ಕಾರ್ಯಕರ್ತರಲ್ಲಿ ಜಾಗೃತಿ ಮೂಡಿಸಬೇಕು. ಅವರ ಆಡಳಿತ ಪ್ರಭಾವ ಇಂದಿಗೂ ಸ್ಮರಣೀಯವಾದದ್ದು. ದೇಶದ ಉತ್ತಮ ಭವಿಷ್ಯ ಹಾಗೂ ಶಕ್ತಿಯುತವಾಗಿ ಬೆಳೆಯಲು ಅವರು ಹಾಕಿಕೊಟ್ಟ ಬುನಾದಿ ಭದ್ರವಾಗಿದೆ ಎಂದರು. ಪಕ್ಷಕ್ಕಾಗಿ ದುಡಿದ ಹಿರಿಯರಾದ ರಮೇಶ್ ಹಾಗೂ ಪ್ರೇಮ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು.



ಉದಯವಾಹಿನಿ ಚಿತ್ರ

## ಜಿಲ್ಲೆಯಲ್ಲಿ ಅಬಕಾರಿ ಸನ್ನದು ಹರಾಜು ಆರಂಭ

• ಉದಯವಾಹಿನಿ ಬಾಗಲಕೋಟೆ

ಜಿಲ್ಲೆ ವ್ಯಾಪ್ತಿಯಲ್ಲಿ ಹಂಚಿಕೆಯಾಗದ ಮತ್ತು ಸ್ಥಗಿತಗೊಂಡಿರುವ ಎಂಟು ಮದ್ಯದಂಗಡಿ ಸನ್ನದುಗಳ ಹರಾಜು ಪ್ರಕ್ರಿಯೆಗೆ ಅಬಕಾರಿ ಇಲಾಖೆ ಚಾಲನೆ ನೀಡಿದೆ ಎಂದು ಬೆಳಗಾವಿ ವಿಭಾಗದ ಜಂಟಿ ಆಯುಕ್ತ ಫಕೀರಪ್ಪ ಚಲವಾದಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸನ್ನದುಗಳನ್ನು ಪಾರದರ್ಶಕ ಇ-ಹರಾಜು ಮೂಲಕ ಹಂಚಿಕೆ ಮಾಡಲಾಗುತ್ತಿದೆ. ಬಾದಾಮಿ, ಹುನಗುಂದದಲ್ಲಿ ಎರಡು, ಬಾಗಲಕೋಟೆ, ಬೀಳಗಿ, ಜಮಖಂಡಿ, ಮುಧೋಳದಲ್ಲಿ ತಲಾ ಒಂದು ಸನ್ನದುಗಳಿವೆ. 7 ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದರೆ, ಒಂದು ಎಸ್‌ಟಿಗೆ ಮೀಸಲಾಗಿದೆ ಎಂದರು. ಯಾವುದೇ ವ್ಯಕ್ತಿ, ಏಕವ್ಯಕ್ತಿ ಮಾಲೀಕತ್ವದ ಸಂಸ್ಥೆ, ಟ್ರಸ್ಟ್, ಸೊಸೈಟಿ, ಪಾಲುದಾರಿಕೆ ಸಂಸ್ಥೆ. ಸೀಮಿತ ಪಾಲುದಾರಿಕೆ ಸಂಸ್ಥೆಗಳು ಇ-ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಇ-ಹರಾಜು ಪ್ರಕ್ರಿಯೆಯನ್ನು ಕೇಂದ್ರ ಸರ್ಕಾರದ ಎಂಎಸ್‌ಟಿಸಿ ಲಿಮಿಟೆಡ್‌ನ ಇ-ಪೋರ್ಟಲ್‌ನಲ್ಲಿ ನಡೆಸಲಾಗುತ್ತದೆ.

ಹರಾಜಿನಲ್ಲಿ ಭಾಗವಹಿಸಲು ಬಯಸುವವರು ನೋಂದಾಯಿಸಿಕೊಳ್ಳಬೇಕು ಎಂದು ಹೇಳಿದರು. ಪ್ರತಿ ನೋಂದಣಿಗೆ ರೂ.1,000 ಶುಲ್ಕ ನಿಗದಿಪಡಿಸಲಾಗಿದೆ. ಪ್ರತಿ ಅರ್ಜಿಗೆ ರೂ.50 ಸಾವಿರ ಶುಲ್ಕವನ್ನು ಪ್ರತ್ಯೇಕವಾಗಿ ಪಾವತಿ ಮಾಡಬೇಕು. ಈ ಹಣವನ್ನು ವಾಪಸ್ ಮಾಡಲಾಗುವುದಿಲ್ಲ. ಜತೆಗೆ ಪ್ರತಿ ಸನ್ನದಿಗೆ ಸಲ್ಲಿಸುವ ಅರ್ಜಿಯ ಜತೆಗೆ ಮೂಲ ಬೆಲೆಯ ಶೇ 2ರಷ್ಟು ಇಎಂಡಿ ಇರಿಸಬೇಕಾಗುತ್ತದೆ ಎಂದರು.

ಹರಾಜು ಬಿಡ್ಡಿಂಗ್‌ನಲ್ಲಿ ಸರ್ವರ್ ಡೌನ್ ಆದರೆ, ಮತ್ತೆ ಬಿಡ್ ಸಲ್ಲಿಸಲು ಅವಕಾಶ ನೀಡಲಾಗುವುದು. ಸರ್ವರ್ ತೊಂದರೆಯಾಗದಂತೆ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಮಾರ್ಚ್ 2025ರಿಂದ ಐದು ವರ್ಷಗಳ ಅವಧಿಗೆ ನೀಡಲಾಗುತ್ತದೆ ಎಂದು ಹೇಳಿದರು. ಅಬಕಾರಿ ಇಲಾಖೆ ಪ್ರಭಾರಿ ಉಪಆಯುಕ್ತ ತಿಪ್ಪೇಸ್ವಾಮಿ, ಸೂಪರಿಟೆಂಡೆಂಟ್ ಹನುಮಂತಪ್ಪ ಭಜಂತ್ರಿ ಇದ್ದರು.

## ಶರಣ ಸಾಹಿತ್ಯ ಪರಿಷತ್ : ದತ್ತಿ ಉಪನ್ಯಾಸ ಬದುಕು ಬದಲಾವಣೆಗೆ ವಚನಗಳ ಪಾಲನೆಯಿಂದ ಸಾಧ್ಯ : ಎಂ. ಎ ಮಿರಗಿ ಕರೆ

• ಉದಯವಾಹಿನಿ ಬಸವನಬಾಗೇವಾಡಿ

ತಾಲ್ಲೂಕಾ ಶರಣ ಸಾಹಿತ್ಯ ಪರಿಷತ್ ವತಿಯಿಂದ ಲಿಂ.ಮುರಗೆವ್ವ ಎಂ ಅಳ್ಳಗಿ ಹಾಗೂ ಸೋಮೇಶ್ವರಿ ಚೌಧರಿ ಸ್ಮರಣಾರ್ಥ ಶುಕ್ರವಾರ ತಾಲ್ಲೂಕಿನ ಮಸಬಿನಾಳದ ಸ.ಕ. ಹೆ. ಮ.ಹಿ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಲಾಗಿತ್ತು.

ನಿ. ಉಪ ಪ್ರಾಚಾರ್ಯ ಎಸ್. ಎಸ್ ಝಳಕಿ ಉದ್ಘಾಟನಾ ಪರ ಮಾತನಾಡಿ, ಕಳೆದ 39 ವರ್ಷಗಳಿಂದ ಸುತ್ತೂರು ದೇಶೀಕೇಂದ್ರ ಸ್ವಾಮೀಜಿಗಳು ಶರಣ ಸಾಹಿತ್ಯ ಪ್ರಸಾರ ಹಾಗೂ ಬಡ ಮಕ್ಕಳ ವಿದ್ಯಾರ್ಜನೆಗೆ ಬಹಳಷ್ಟು ಮಹತ್ವ ನೀಡುತ್ತಿದ್ದಾರೆ. ಸಮ ಸಮಾಜದ ತಳಹದಿಯಲ್ಲಿ ಧಾರ್ಮಿಕ ಸುಧಾರಣೆಗೆ ಬಸವಾದಿ ಶರಣರು ಮುಂದಾದರು. ಇಷ್ಟೊಂದು ಶರಣರು ಜಗತ್ತಿನಲ್ಲಿಯೇ ಇಲ್ಲ. ಸಾಮಾನ್ಯ ಜನರಿಗೆ ತಿಳಿಯುವ ಹಾಗೇ ವಚನ ಸಾಹಿತ್ಯ ರಚಿಸಿದ್ದಾರೆ.

ಆಂತರಿಕ ಗುಣ ಬೆಳೆಸಲು ಶಿಕ್ಷಕರು ವಚನ ಸಾಹಿತ್ಯವನ್ನು ಮಕ್ಕಳಿಗೆ ತಿಳಿಸಿ ಹೇಳಬೇಕು ಎಂದರು. ಅಧ್ಯಕತೆ ವಹಿಸಿದ್ದ ಶಸಾಪ ತಾಲ್ಲೂಕಾ ಅಧ್ಯಕ್ಷ ವೀರಣ್ಣ. ಬಿ ಮರ್ತುರ ಮಾತನಾಡಿ, ಬಸವಾದಿ ಶರಣರು ಸಮಾಜದ ಬದಲಾವಣೆಗೆ ಶ್ರಮಿಸಿದ್ದಾರೆ. ಮಕ್ಕಳಲ್ಲಿ ಮಾನವೀಯ ಮೌಲ್ಯ ಬಿತ್ತರಿಸುವಲ್ಲಿ ಶರಣ ಸಾಹಿತ್ಯ ಪರಿಷತ್ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಸಮಾಜಕ್ಕಾಗಿ ಉತ್ತಮ ವಿಚಾರ ಹಾಗೂ ದಾನ ಮಾಡುವಂತೆ ಕರೆ ನೀಡಿದರು. ಕಾರ್ಯದರ್ಶಿ ಆರ್. ಜಿ ಅಳ್ಳಗಿ ಮಾತನಾಡಿದರು. ಎಚ್. ಬಿ ಸಾತಿಹಾಳ ಸ್ವಾಗತಿಸಿದರು. ವಿಜಯಲಕ್ಷ್ಮಿ ಅಭ್ಯಾಳಮಠ ನಿರೂಪಿಸಿದರು. ಈ ಸಂದರ್ಭದಲ್ಲಿ ಎಚ್. ಎಸ್. ಬಿರಾದಾರ, ಎಸ್. ಆಯ್.ಮನಗೂಳಿ,ವ್ಹಿ. ಕೆ ಕಲ್ಯಾಣಶೆಟ್ಟಿ, ಈರಣ್ಣ ಅಳ್ಳಗಿ, ಚನ್ನಪ್ಪ ಅಳ್ಳಗಿ, ವಿರೂಪಾಕ್ಷಪ್ಪ ಭೂತರೆಡ್ಡಿ, ಶೋಭಾ ಶಿವಯೋಗಿ, ಬಿಕೆ ಪತ್ತಾರ, ಆರ್. ಎಸ್ ಲಿಂಗಶೆಟ್ಟಿ ಸೇರಿದಂತೆ ಅನೇಕ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.



ಉದಯವಾಹಿನಿ ಚಿತ್ರ

> ಕುಟುಂಬದ ಸಂಸ್ಕಾರ ಮಕ್ಕಳಿಗೆ ಬರುವುದು. ಶರಣ ಸಾಹಿತ್ಯ ಶ್ರೀಮಂತಿಕೆಯನ್ನು ನಾಡಿನ ತುಂಬೆಲ್ಲ ಪ್ರಸರಿಸುವಲ್ಲಿ ಪರಿಷತ್ ಮುಂದಾಗಿದೆ. ಶರಣರ ಅನುಭವಗಳೇ ನಮಗೆಲ್ಲ ದಾರಿದೀಪ ಆಗಬೇಕಾಗಿದೆ. ವಚನಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ. ಶರಣರ ಸತ್ಯವಾದ ಮಾತುಗಳೇ ವಚನಗಳಾಗಿವೆ. 12 ನೇ ಶತಮಾನದಲ್ಲಿ ಸಮಾಜವನ್ನು ತಿದ್ದಲೆಂದೇ ಶರಣರು ಉದಯಿಸಿದರು. ಶರಣರ ನೆನಹುನಲ್ಲಿ ಜೀವನ ಸಾಗಿಸೋಣ. ಬದುಕು ಬದಲಾವಣೆಗೆ ವಚನಗಳ ಪಾಲನೆಯಿಂದ ಸಾಧ್ಯ. -ಎಂ. ಎ ಮಿರಗಿ, ಮುಖ್ಯಗುರು

## ಪರವಾನಗಿ ಇಲ್ಲದೇ ವಾಹನ ಚಾಲನೆ ಅಪರಾಧ: ನ್ಯಾ.ಕೆ.ಟಿ.ರಘುನಾಥ ಗೌಡ

• ಉದಯವಾಹಿನಿ ನರಸಿಂಹರಾಜಪುರ

ವಾಹನ ಚಾಲನಾ ಪರವಾನಗಿ ಹಾಗೂ ವಿಮೆ ಇಲ್ಲದೆ ವಾಹನ ಚಾಲನೆ ಮಾಡುವುದು ಅಪರಾಧ ಎಂದು ಜೆಎಂಎಫ್‌ಸಿಯ ಹಿರಿಯ ಸಿವಿಲ್ ನ್ಯಾಯಾಧೀಶ ಕೆ.ಟಿ.ರಘುನಾಥ ಗೌಡ ಹೇಳಿದರು.

ತಾಲ್ಲೂಕಿನ ಬಿ.ಎಚ್.ಕೈಮರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಸರ್ಕಾರಿ ಅಭಿಯೋಜನಾ ಇಲಾಖೆ ಆಶ್ರಯದಲ್ಲಿ ನಡೆದ ರಾಷ್ಟ್ರೀಯ ಗ್ರಾಹಕರ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಹೆಲ್ಮೆಟ್ ಇಲ್ಲದೆ ದ್ವಿಚಕ್ರ ವಾಹನ ಓಡಿಸಬಾರದು. ಬ್ಯಾಂಕ್ ಖಾತೆಯ ಚೆಕ್‌ಬುಕ್ ಕಳೆದು ಹೋದರೆ, ಬ್ಯಾಂಕಿನ ಚೆಕ್‌ಗಳಲ್ಲಿ ಮೋಸ ನಡೆದರೆ ಸಿವಿಲ್ ನ್ಯಾಯಾಲಯಕ್ಕೆ ದೂರು ಸಲ್ಲಿಸಬಹುದು ಎಂದರು. ವಕೀಲ ಎಂ.ದೇವೇಂದ್ರ ಉಪನ್ಯಾಸ ನೀಡಿ, ದಿನನಿತ್ಯ ಜೀವನದಲ್ಲಿ ವ್ಯಕ್ತಿಯು ಯಾವುದೇ ವಸ್ತುಗಳನ್ನು ಖರೀದಿಸಿದಾಗ ಮತ್ತು ಪಡೆದಾಗ ಅವರು ಗ್ರಾಹಕರಾಗುತ್ತಾರೆ. ಗ್ರಾಹಕರ ಸಂರಕ್ಷಣಾ ಕಾಯ್ದೆ ಪ್ರಕಾರ ಎಲ್ಲಾ ಗ್ರಾಹಕರಿಗೂ ಸೇವಾ ನ್ಯೂನತೆ ಅಥವಾ ವಸ್ತುಗಳಲ್ಲಿ ದೋಷ, ಅನ್ಯಾಯ, ಮೋಸ, ಸುಳ್ಳು ಕಂಡು ಬಂದಲ್ಲಿ ಜಿಲ್ಲಾ ಗ್ರಾಹಕ ಸಮಿತಿಗೆ ದೂರು ಸಲ್ಲಿಸಬಹುದು. ಅಲ್ಲಿ ಸೂಕ್ತ ನ್ಯಾಯ ಸಿಗದಿದ್ದರೆ ರಾಜ್ಯ ಗ್ರಾಹಕ ಪರಿಹಾರ ಸಮಿತಿಗೂ ದೂರು ನೀಡಬಹುದು. ಕೊನೆಗೆ ಸರ್ವೋಚ್ಚ ನ್ಯಾಯಾಲಯದ ಮುಖಾಂತರ ತಮಗೆ ಆದ ಅನ್ಯಾಯಗಳ ಬಗ್ಗೆ ದೂರು ಸಲ್ಲಿಸಿ ನ್ಯಾಯ ಪಡೆದುಕೊಳ್ಳಬಹುದು ಎಂದರು.

ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಜಯಪ್ರಕಾಶ್, ಗ್ರಾಹಕರ ಸಂರಕ್ಷಣಾ ಕಾಯ್ದೆ, ಗ್ರಾಹಕರು ಮೋಸ ಹೋದಾಗ ಅನುಸರಿಸಬೇಕಾದ ಕಾನೂನು ಅಂಶಗಳನ್ನು ವಿವರಿಸಿದರು. ಸಹಾಯಕ ಸರ್ಕಾರಿ ವಕೀಲ ಜಿ.ಬಿ.ನೇಕಾರ್ ಪೋಕ್ಸೋ ಕಾಯ್ದೆ, ಸೈಬರ್ ಅಪರಾಧದ ಬಗ್ಗೆ ವಿವರಿಸಿದರು. ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಚೇರಿ ಅಧೀಕ್ಷಕ ಕಿರಣ್ ಬೇಂದ್ರೆ, ತರಬೇತಿ ಅಧಿಕಾರಿ ರವಿರಾಜ್ ಹೆಗ್ಡೆ, ವಾಣಿ ಹಾಜರಿದ್ದರು.



ಉದಯವಾಹಿನಿ ಚಿತ್ರ

> ಗ್ರಾಹಕ ರಕ್ಷಣಾ ಕಾಯ್ದೆಯು ರಾಷ್ಟ್ರೀಯ ಗ್ರಾಹಕರ ಪರಿಹಾರ ಅಧಿನಿಯಮವು 1986ರ ಡಿಸೆಂಬರ್ 24 ರಂದು ಜಾರಿಯಾಗಿದೆ. ಈಗ ತ್ವರಿತ ಗತಿಯಲ್ಲಿ ಗ್ರಾಹಕರಿಗೆ ಪರಿಹಾರ ಸಿಗಲಿದೆ.
>
> -ಆರ್.ಎಸ್. ಜೀತು, ತಾಲ್ಲೂಕು ಕಾನೂನು ಸೇವಾ ಸಮಿತಿ ಸದಸ್ಯ ಕಾರ್ಯದರ್ಶಿ

# ನೊಂದವರಿಗೂ ನ್ಯಾಯ ಭಾರತೀಯ ನ್ಯಾಯ ಸಂಹಿತೆ ಆಶಯ: ನ್ಯಾಯಾಧೀಶ

### ನ್ಯಾಯದಾನದ ವೇಳೆ ಅನ್ಯಾಯ ನ್ಯಾಯವನ್ನು ಹಿಮ್ಮೆಟ್ಟಿಸಿದರೆ ಅದರ ಪಾಪಸಭಾ ಸದನರಾದ ನ್ಯಾಯಾಧೀಶರಿಗೂ ಬರುತ್ತದೆ

• ಉದಯವಾಹಿನಿ ಶಿವಮೊಗ್ಗ

ಇಂಡಿಯನ್ ಪಿನಲ್ ಕೋಡ್ (ಐಪಿಸಿ-ಸಿಆರ್‌ಪಿಸಿ) ಬದಲಾಗಿ ಕೇಂದ್ರ ಸರ್ಕಾರ ಈಗ ರೂಪಿಸಿರುವ ಭಾರತೀಯ ನ್ಯಾಯ ಸಂಹಿತೆಯಲ್ಲಿ (ಬಿಎನ್‌ಎಸ್) ನೊಂದವರಿಗೂ ನ್ಯಾಯ ಎಂಬ ಪರಿಕಲ್ಪನೆ ಹೊಸದಾಗಿ ಮಾಡಿದ್ದಾರೆ. ಇದಕ್ಕೆ 'ರಾಜಾ ಪ್ರಕೃತಿ ರಂಜನಾಥ್' ಎಂಬ ಧ್ಯೆಯದಡಿ ಸ್ಮೃತಿಯ ಆಧಾರವಿದೆ ಎಂದು ಹೈಕೋರ್ಟ್ ನ್ಯಾಯಾಧೀಶ ವಿ. ಶ್ರೀಶಾನಂದ ಹೇಳಿದರು.

ಇಲ್ಲಿನ ಶ್ರೀಗಂಧ ಸಂಸ್ಥೆ ಹಾಗೂ ಜಿಲ್ಲಾ ವಕೀಲರ ಸಂಘದಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರಾಚೀನ ಭಾರತದ ನ್ಯಾಯಾಂಗ ವ್ಯವಸ್ಥೆ ವಿಷಯದ ಬಗ್ಗೆ ಉಪನ್ಯಾಸ ನೀಡಿದರು. ಭಾರತೀಯರನ್ನು ಗುಲಾಮರನ್ನಾಗಿ ಇಟ್ಟುಕೊಂಡು ಬೆದರಿಸಿ ರಾಜ್ಯಭಾರ ಮಾಡಲು ಐಪಿಸಿ ಹಾಗೂ ಸಿಆರ್‌ಪಿಸಿಯನ್ನು ಬ್ರಿಟಿಷರು ರೂಪಿಸಿದ್ದರು. ಅಲ್ಲಿ ಅಪರಾಧ ಕೃತ್ಯ ನಡೆದಾಗ ಅಪರಾಧಿಗೆ ಶಿಕ್ಷೆ ಕಲ್ಪಿಸುವತ್ತ ಮಾತ್ರ ಗಮನ ಕೊಟ್ಟಿದ್ದರು. ನೊಂದವರನ್ನು ಮರೆತು ಬಿಡಲಾಗುತ್ತಿತ್ತು. ದುಡಿಯುತ್ತಿದ್ದ ಗಂಡ ಕೊಲೆ ಆಗಿ ತೀರಿ ಹೋದರೆ ಆತನನ್ನು ನಂಬಿದ್ದ ಪತ್ನಿ ಹಾಗೂ ಮಕ್ಕಳ ರಕ್ಷಣೆ ಐಪಿಸಿ ಹಾಗೂ ಸಿಆರ್‌ಪಿಸಿಯಲ್ಲಿ ಆದ್ಯತೆ ಆಗಿರಲಿಲ್ಲ. ಮನೆಯ ಯಜಮಾನ ಸತ್ತರೆ ಮಕ್ಕಳು ಅನಾಥರಾಗಿ, ಪತ್ನಿ ವಿಧವೆಯಾಗುತ್ತಿದ್ದಳು. ಅವರಿಗೆ ರಕ್ಷಣೆ ಕಲ್ಪಿಸುವುದು ಬ್ರಿಟಿಷರಿಗೆ ಬೇಕಿರಲಿಲ್ಲ. ಸಾಯಲಿ ಬಿಡು ಎಂಬ ಧೋರಣೆ ಅವರಲ್ಲಿತ್ತು. ಅದು ಐಪಿಸಿ, ಸಿಆರ್‌ಪಿಸಿ ಕೋಡ್‌ನಲ್ಲಿ ವ್ಯಕ್ತವಾಗಿತ್ತು. ಅದನ್ನೇ ಇಲ್ಲಿಯವರೆಗೂ ಇಟ್ಟುಕೊಂಡು ಬಂದಿದ್ದೆವು ಎಂದರು.



ಉದಯವಾಹಿನಿ ಚಿತ್ರ

ಸಂಸ್ಕೃತ ವಾಕ್ಯ, ರಾಜಾ ಪ್ರಕೃತಿ ರಂಜನಾಥ್ ಅಂದರೆ ಪ್ರಜೆಗಳನ್ನು ಸಂತೋಷವಾಗಿ ಶಾಂತಿ-ಸುವ್ಯವಸ್ಥೆಯಿಂದ ಕಾಪಾಡಬೇಕಿರುವುದೇ ರಾಜಧರ್ಮ. ಸ್ಮೃತಿಯಲ್ಲಿನ ಅದರ ಆಶಯದಂತೆಯೇ ಬಿಎನ್‌ಎಸ್ ಅಡಿ ನೊಂದವರಿಗೆ ಪರಿಹಾರ ಕಲ್ಪಿಸಿ ರಕ್ಷಣೆ ನೀಡಲು ಅವಕಾಶ ಮಾಡಿ ಕೊಡಲಾಗಿದೆ ಎಂದು ಹೇಳಿದರು.

**ನ್ಯಾಯಾಂಗ ವ್ಯವಸ್ಥೆ ವಿಷಯದ ಬಗ್ಗೆ ಉಪನ್ಯಾಸ**

ನ್ಯಾಯಾಂಗ ವ್ಯವಸ್ಥೆಯಲ್ಲಿ ವಿಳಂಬ, ಅಪ್ರಾಮಾಣಿಕ ಹಾಗೂ ಜನರ ಆಶಯಕ್ಕೆ ವಿರುದ್ಧವಾದ ತೀರ್ಪುಗಳು ಬರಬಹುದು. ಅದಕ್ಕೆ ನ್ಯಾಯಾಧೀಶರು ಒಬ್ಬರೇ ಕಾರಣಕರ್ತರಲ್ಲ. ಅದಕ್ಕೆ ಸಮಾಜ ಒಪ್ಪಿರುವ ಮೌಲ್ಯಗಳೂ ಕಾರಣವಾಗುತ್ತವೆ. ಅನ್ಯಾಯದ ವಿರುದ್ಧ ಹೋರಾಡದವರು ಅದನ್ನು ಕೋರ್ಟಿನ ಕಟಕಟೆಗೆ ತಂದು ತಾರ್ಕಿಕ ಅಂತ್ಯ ಕಾಣಿಸದವರು ಮಹಾಭಾರತದಲ್ಲಿ ಭೀಷ್ಮ, ದ್ರೋಣರಂತಾಗುತ್ತಾರೆ. ಅದು ಸರಿಯಲ್ಲ ಎಂದು ಕಿವಿಮಾತು ಹೇಳಿದರು.

ಈ ದೇಶದ ಮೇಲೆ ಸಾಂಸ್ಕೃತಿಕ ಯುದ್ಧ ನಡೆಯುತ್ತಿದೆ. ದೇಶದ ಪ್ರಗತಿಯ ನಾಗಲೋಟವನ್ನು ಹಿಡಿದಿಟ್ಟುಕೊಳ್ಳಲು ನಮ್ಮ ಊಟ, ನೋಟ, ತಿಂಡಿ, ಜೀವನ ಶೈಲಿ, ನಡೆದುಕೊಳ್ಳುವ ರೀತಿ ಹೀಗೆ ಪ್ರತಿಯೊಂದರಲ್ಲಿ ಅನ್ಯ ದೇಶದವರು ಸಾಂಸ್ಕೃತಿಕ ಯುದ್ಧ ಮಾಡುತ್ತಿದ್ದಾರೆ. ಅದರ ಪರಿಣಾಮ ಸತ್ಯವೇ ನಮ್ಮ ತಾಯಿ ತಂದೆ ಎಂದು ಹೇಳಿಕೊಳ್ಳುವ ಗೋವಿನ ಹಾಡು ಬೇಕಾಗಿಲ್ಲ ಎಂಬ ಕಾಲದಲ್ಲಿ ಇಂದು ಇದ್ದೇವೆ. ಸತ್ಯ ಸತ್ತಿಲ್ಲ. ಅಲ್ಲಿಯೇ ಇದೆ. ಆದರೆ ಈ ಸಾಂಸ್ಕೃತಿಕ ಯುದ್ಧವನ್ನು ಗೆಲ್ಲಲು ಹಾಗೂ ಸತ್ಯವನ್ನು ಪೋಷಿಸಲು ನಮ್ಮ ಮಕ್ಕಳಲ್ಲಿ ಅಂತಃಕರಣ ಜಾಗೃತಿಯ ಜೊತೆಗೆ ಸರಿ-ತಪ್ಪಿನ ಮೌಲ್ಯಗಳ ಅರಿವು ಮೂಡಿಸಬೇಕಿದೆ ಎಂದು ಸಲಹೆ ನೀಡಿದರು. ಸಮಾರಂಭದಲ್ಲಿ ಹಿರಿಯ ವೈದ್ಯ ಡಾ.ಪಿ.ನಾರಾಯಣ್ ಹಾಗೂ ಯೋಗಾಚಾರ್ಯ ಸಿ.ವಿ.ರುದ್ರಾರಾಧ್ಯ ಅವರನ್ನು ವಿ. ಶ್ರೀಶಾನಂದ ಸನ್ಮಾನಿಸಿದರು.

ಶ್ರೀಶಾನಂದ ಅವರ ಪತ್ನಿ ರಜನಿ, ಜಿಲ್ಲಾ ನ್ಯಾಯಾಧೀಶ ಮಂಜುನಾಥ, ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ಎಸ್.ಸಂತೋಷ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಾಘವೇಂದ್ರ ಸ್ವಾಮಿ, ಶ್ರೀಗಂಧ ಸಂಸ್ಥೆ ಅಧ್ಯಕ್ಷ ಕೆ.ಎಸ್.ಈಶ್ವರಪ್ಪ, ಸಂಚಾಲಕ ಉಮೇಶ್ ಆರಾಧ್ಯ, ಕೆ.ಈ.ಕಾಂತೇಶ್ ಸಮಾರಂಭದಲ್ಲಿ ಭಾಗಿಯಾಗಿದ್ದರು.

> ನ್ಯಾಯದಾನದ ವೇಳೆ ಅನ್ಯಾಯ ನ್ಯಾಯವನ್ನು ಹಿಮ್ಮೆಟ್ಟಿಸಿದರೆ ಅದರ ಪಾಪಸಭಾ ಸದನರಾದ ನ್ಯಾಯಾಧೀಶರಿಗೂ ಬರುತ್ತದೆ. ಹೀಗಾಗಿ ಪ್ರತಿ ವಿಚಾರಣೆಯಲ್ಲೂ ನ್ಯಾಯ ಸತ್ಯ ಎತ್ತಿಹಿಡಿದು ನೊಂದವರ ಕಣ್ಣೀರು ಒರೆಸಿದರೆ ಆ ನ್ಯಾಯಾಧೀಶ ಭಗವಂತನ ಪ್ರೀತಿಗೆ ಪಾತ್ರರಾಗುತ್ತಾರೆ.
>
> -ವಿ. ಶ್ರೀಶಾನಂದ, ಹೈಕೋರ್ಟ್ ನ್ಯಾಯಾಧೀಶ

## ಮಿನಿ ನ್ಯೂಸ್

### ದ್ವೇಷ ಭಾಷಣ ತಡೆ ಕಾಯ್ದೆ ಜಾರಿಗೊಳಿಸದಂತೆ ಮನವಿ

• ಉದಯವಾಹಿನಿ ಔರಾದ್

ರಾಜ್ಯ ಸರ್ಕಾರ ಅನುಷ್ಠಾನಕ್ಕೆ ತರುತ್ತಿರುವ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ವಿಧೇಯಕ 2025 ಅನ್ನು ಯಾವುದೇ ಕಾರಣಕ್ಕೆ ಜಾರಿಗೊಳಿಸಬಾರದು ಎಂದು ಆಗ್ರಹಿಸಿ ಶಾಸಕ ಪ್ರಭು ಚವ್ಹಾಣ ಅವರ ನೇತೃತ್ವದಲ್ಲಿ ಬಿಜೆಪಿ ಜಿಲ್ಲಾ ರೈತ ಮೋರ್ಚಾ ತಹಶೀಲ್ದಾರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದೆ. ಈ ಮಸೂದೆ ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಉಲ್ಲಂಘನೆಯಾಗಿದೆ. ಇದು ಸರ್ಕಾರದ ವಿರುದ್ಧ ಮಾತನಾಡುವವರ ಬಾಯಿ ಮುಚ್ಚಿಸುವ ತಂತ್ರವಾಗಿದ್ದು, ಸಂವಿಧಾನ ನೀಡಿದ ಸ್ವಾತಂತ್ರ್ಯವನ್ನು ಕಾಂಗ್ರೆಸ್ ಸರ್ಕಾರ ಕಿತ್ತುಕೊಳ್ಳುತ್ತಿದೆ. ಪ್ರಜಾಪ್ರಭುತ್ವದ ಕತ್ತು ಹಿಸುಕುವ ಯತ್ನವೂ ಇದಾಗಿದೆ ಸಂವಿಧಾನ ವಿರುದ್ಧವಾಗಿರುವ ಈ ಕಾಯ್ದೆ ಜಾರಿಗೊಳಿಸಿದರೆ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಶಿವರಾಜ ಅಲ್ಮಾಜೆ, ಧೊಂಡಿಬಾ ನರೋಟೆ, ವಸಂತ ಬಿರಾದಾರ, ರಾಮಶೆಟ್ಟಿ ಪನ್ನಾಳೆ, ಶರಣಪ್ಪ ಪಾಟೀಲ ಇಟಗ್ಯಾಳ, ಖಂಡೋಬಾ ಕಂಗ್ಟೆ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ದ್ವೇಷ ಭಾಷಣ ವಿರೋಧಿ ಕಾನೂನು ಅಂಗೀಕಾರ: ಫರಾಜ್ ಸ್ವಾಗತ

• ಉದಯವಾಹಿನಿ ಕಲಬುರಗಿ

ಹೊಸ ದ್ವೇಷ ಭಾಷಣ ವಿರೋಧಿ ಕಾನೂನು ಅಂಗೀಕರಿಸುವುದನ್ನು ಕೆಪಿಸಿಸಿ ಸದಸ್ಯ ಫರಾಜ್-ಉಲ್-ಇಸ್ಲಾಂ ಸ್ವಾಗತಿಸಿದ್ದು, ಈ ಶಾಸನವು ಸಾಮಾಜಿಕ ಸಾಮರಸ್ಯವನ್ನು ಕಾಪಾಡಿಕೊಳ್ಳುವ ಮತ್ತು ಸಮಾಜದಲ್ಲಿ ದ್ವೇಷವನ್ನು ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ದ್ವೇಷ ಭಾಷಣದಲ್ಲಿ ತೊಡಗಿರುವ ಯಾವುದೇ ವ್ಯಕ್ತಿ ಅಥವಾ ಗುಂಪು ಕಾನೂನಿಗೆ ಭಯಪಡಬೇಕು, ಆದರೆ ಅಂತಹ ಕೃತ್ಯಗಳಲ್ಲಿ ತೊಡಗದವರು ಚಿಂತಿಸಬೇಕಾಗಿಲ್ಲ ಎಂದು ಹೇಳಿದರು. ಬಿಜೆಪಿ ಕಾನೂನನ್ನು ಏಕೆ ವಿರೋಧಿಸುತ್ತಿದೆ ಎಂದು ಅವರು ಪ್ರಶ್ನಿಸಿದರು.

ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತಿಮಾ ಅವರು ಈ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರವನ್ನು ಸಲ್ಲಿಸಿ, ಸಮಾಜದಲ್ಲಿ ಶಾಂತಿಯನ್ನು ಹಾಳು ಮಾಡುತ್ತಿರುವವರ ವಿರುದ್ಧ ಬಲವಾದ ಕ್ರಮ ಕೈಗೊಳ್ಳಲು ದ್ವೇಷ ಭಾಷಣದ ಕುರಿತು ಹೊಸ ಮಸೂದೆಯನ್ನು ತರುವಂತೆ ಒತ್ತಾಯಿಸಿದ್ದಾರೆ ಎಂದು ಫರಾಜ್-ಉಲ್-ಇಸ್ಲಾಂ ಬಹಿರಂಗಪಡಿಸಿದ್ದಾರೆ.ಕಾನೂನನ್ನು ಉಲ್ಲಂಘಿಸುವ ಯಾರಾದರೂ ಕಾನೂನು ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದ ಅವರು, ಕಾನೂನು ಎಲ್ಲರಿಗೂ ಸಮಾನವಾಗಿ ಅನ್ವಯಿಸುತ್ತದೆಎಂದರು.

### ಕಾನೂನು ಕ್ರಮಕ್ಕೆ ಒತ್ತಾಯ

• ಉದಯವಾಹಿನಿ ಲಕ್ಷ್ಮೇಶ್ವರ

ಪಟ್ಟಣದ ಶಿಗ್ಲಿ ನಾಕಾದಲ್ಲಿ ಕಳೆದ ತಿಂಗಳು ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸುವಂತೆ ಆಗ್ರಹಿಸಿ ಸಮಗ್ರ ರೈತ ಸಂಘಟನೆಗಳು ಹೋರಾಟ ನಡೆಸಿದ ಸಂದರ್ಭದಲ್ಲಿ ಅಂಬೇಡ್ಕರ್ ಮತ್ತು ಮಹಾತ್ಮ ಗಾಂಧಿಜೀಯವರ ಭಾವಚಿತ್ರಗಳಿಗೆ ಅವಮಾನ ಮಾಡಿರುವುದನ್ನು ಡಿಎಸ್‌ಎಸ್ ಉಗ್ರವಾಗಿ ಖಂಡಿಸುತ್ತದೆ ಎಂದು ಮುಖಂಡರಾದ ಸುರೇಶ ನಂದೆಣ್ಣವರ ಕೊಟ್ರೆಪ್ಪ ವರದಿ ಫಕ್ಕೀರೇಶ ಮ್ಯಾಟನವರ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಹೋರಾಟ ಸಂದರ್ಭದಲ್ಲಿ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮ ಗಾಂಧಿಜೀ ಮತ್ತು ಸಂವಿಧಾನ ಕೊಟ್ಟ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರ ಇಟ್ಟು ಹೋರಾಟ ನಡೆಸಿದರು ಹೋರಾಟದ ಸಂದರ್ಭದಲ್ಲಿ ಮನುಕುಲದ ಉದ್ಧಾರಕ್ಕ ಬಾಬಾಸಾಹೇಬ್ ಅಂಬೇಡ್ಕರ್ ಹಾಗೂ ಗಾಂಧಿಜೀ ಅವರ ಭಾವಚಿತ್ರಗಳಿಗೆ ಅವಮಾನ ಮಾಡಿದ್ದು ಖಂಡನೀಯ.

ಅವರ ಮೇಲೆ ನವೆಂಬರ್ 7 ರಂದು ಅಸ್ಪೃಶ್ಯತಾ ಕಾಯ್ದೆ ಅನ್ವಯ ಕಾನೂನು ಕ್ರಮ ಜರುಗಿಸುವಂತೆ ಒತ್ತಾಯಸಲಾಗಿತ್ತು ಪೊಲೀಸರು ಕೇವಲ ಎಫ್‌ಐಆರ್ ದಾಖಲಿಸಿಕೊಂಡಿದ್ದು ಇದುರುವರೆಗೂ ಅವರನ್ನು ಬಂಧಿಸುವದಾಗಲಿ ಅಥವಾ ಕಾನೂನು ಕ್ರಮ ಜರುಗಿಸುವದನ್ನು ಮಾಡದೆ ಕಾಲ ಹರಣ ಮಾಡುತ್ತಿದ್ದಾರೆ ಇದನ್ನು ಡಿಎಸ್‌ಎಸ್ ಸಹಿಸುವುದಿಲ್ಲ ಒಂದು ವಾರದೊಳಗಾಗಿ ಕಠಿಣ ಕ್ರಮ ಕೈಗೊಳ್ಳದಿದ್ದರೆ ಪ್ರತಿಭಟನೆ ಕೈಗೊಳ್ಳುವುದಾಗಿ ಎಚ್ಚರಿಸಿದರು.

### ಹಿಟ್ ಆಂಡ್ ರನ್: ರಿಕ್ಷಾ ಚಾಲಕನ ವಶ

• ಉದಯವಾಹಿನಿ ಬಂಟ್ವಾಳ

ಸ್ಕೂಟರ್ ಒಂದಕ್ಕೆ ಡಿಕ್ಕಿ ಹೊಡೆದು ಪರಾರಿಯಾಗಿದ್ದ ರಿಕ್ಷಾವನ್ನು ಬಂಟ್ವಾಳ ಟ್ರಾಫಿಕ್ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.ರಾಮಲ್ ಕಟ್ಟೆ ನಿವಾಸಿ ಉಸ್ಮಾನ್ ಎಂಬವರ ಸ್ಕೂಟರ್‌ಗೆ ಅಪರಿಚಿತ ರಿಕ್ಷಾ ಡಿಕ್ಕಿ ಹೊಡೆದು ಬಳಿಕ ಪರಾರಿಯಾಗಿತ್ತು. ಗಂಭೀರವಾಗಿ ಗಾಯಗೊಂಡಿದ್ದ ಉಸ್ಮಾನ್ ಅವರನ್ನು ಮಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿತ್ತಾದರೂ ಚಿಕಿತ್ಸೆ ಫಲಕಾರಿಯಾಗದೆ ಅವರು ಮೃತಪಟ್ಟಿದ್ದರು. ಆದರೆ ಎರಡು ಹಿಟ್ ರನ್ ಆಗಿದ್ದ ರಿಕ್ಷಾ ಪತ್ತೆಯಾಗಿರಲಿಲ್ಲ. ರಿಕ್ಷಾ ಡಿಕ್ಕಿಯಾಗಿ ಪರಾರಿಯಾಗಿ ರುವುದನ್ನು ಅಲ್ಲಿನ ಸ್ಥಳೀಯರು ನೋಡಿದ್ದಲ್ಲದೆ, ಸಿ.ಸಿ.ಕ್ಯಾಮೆರಾದಲ್ಲಿ ಕೂಡ ಸೆರೆಯಾಗಿತ್ತು. ಸಿ.ಸಿ.ಕ್ಯಾಮೆರಾದ ಸಾಕ್ಷ್ಯವನ್ನು ಆಧರಿಸಿ ಬೆನ್ನು ಹತ್ತಿದ ಟ್ರಾಫಿಕ್ ಪೊಲೀಸರು ಮಂಗಳೂರಿನಲ್ಲಿ ರಿಕ್ಷಾವನ್ನು ಪತ್ತೆ ಹಚ್ಚಿ ವಶಕ್ಕೆ ಪಡೆದುಕೊಂಡರು. ಸಜೀಪ ನಿವಾಸಿ ಕುಮರೇಶ್ ಅವರನ್ನು ಪೊಲೀಸರು ಪತ್ತೆ ಹಚ್ಚಿ ರಿಕ್ಷಾವನ್ನು ವಶಪಡಿಸಿಕೊಂಡಿದ್ದಾರೆ.

### ಯುಪಿಎಸ್‌ಸಿ ಪರೀಕ್ಷೆಯಲ್ಲಿ ಕನ್ನಡ ಬದಲು ಅನ್ಯ ಭಾಷೆ ಆಯ್ಕೆ: ಕಳವಳ

• ಉದಯವಾಹಿನಿ ದಾವಣಗೆರೆ

ಕೇಂದ್ರ ಲೋಕಸೇವಾ ಆಯೋಗದ ಪರೀಕ್ಷಾರ್ಥಿಗಳು ಮುಖ್ಯ ಪರೀಕ್ಷೆಯಲ್ಲಿ ಕನ್ನಡದ ಬದಲು ಹಿಂದಿ, ಸಂಸ್ಕೃತದಂತಹ ಅನ್ಯಭಾಷೆಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಇನ್‌ಸೈಟ್ ಐಎಎಸ್ ಸಂಸ್ಥೆಯ ಸಂಸ್ಥಾಪಕ ಜಿ.ಬಿ. ವಿನಯ್ ಕುಮಾರ್ ಕಳವಳ ವ್ಯಕ್ತಪಡಿಸಿದರು.

ಇಲ್ಲಿನ ಕುವೆಂಪು ಕನ್ನಡ ಭವನದಲ್ಲಿ ಕರ್ನಾಟಕ ಯುವರಕ್ಷಣಾ ವೇದಿಕೆಯ ಜಿಲ್ಲಾ ಘಟಕ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕದ ಸಹಯೋಗದೊಂದಿಗೆ ಆಯೋಜಿಸಿದ್ದ ಸಮಾರಂಭದಲ್ಲಿ ಕರ್ನಾಟಕ ಸೇವಾ ರತ್ನ ಬೆಳ್ಳಿ ಪದಕ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು.

ಐಎಎಸ್ ಪರೀಕ್ಷೆಯ ಆಕಾಂಕ್ಷಿಗಳು ಇಂಗ್ಲಿಷ್ ಜೊತೆಗೆ ಮಾತೃಭಾಷೆ ಆಯ್ಕೆ ಮಾಡಿಕೊಳ್ಳಬೇಕು. ಕನ್ನಡ ನಾಡಿನಲ್ಲಿ ಹುಟ್ಟಿ ಬೆಳೆದವರು ಕನ್ನಡ ಬಿಟ್ಟು ಬೇರೆ ಭಾಷೆಗಳನ್ನು ಆಯ್ಕೆ ಮಾಡಿಕೊಳ್ಳುತ್ತಿರುವುದನ್ನು ಗಮನಿಸಿದರೆ ಭವಿಷ್ಯದಲ್ಲಿ ಕನ್ನಡಕ್ಕೆ ಯಾವ ರೀತಿಯ ಕುತ್ತು ಎದುರಾಗಲಿದೆ ಎಂಬುದನ್ನು ಊಹಿಸಲು ಆಗದು ಎಂದರು.

ಈಶಾನ್ಯ ನೈಜೀರಿಯಾದಲ್ಲಿ ಕ್ರೈಸ್ತರನ್ನು ಗುರಿಯಾಗಿಸಿಕೊಂಡು ಹತ್ಯೆ ಮಾಡುತ್ತಿರುವ ಐಸಿಸ್ ಭಯೋತ್ಪಾದಕರು

# ಐಸಿಸ್ ಉಗ್ರರ ಮೇಲೆ ಮಾರಕ ದಾಳಿಗೆ ಟ್ರಂಪ್ ಆದೇಶ

**ವಾಷಿಂಗ್ಟನ್:** ಅಮೆರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಈಶಾನ್ಯ ನೈಜೀರಿಯಾದಲ್ಲಿ ಇಸ್ಲಾಮಿಕ್ ಸ್ಟೇಟ್ ಭಯೋತ್ಪಾದಕರ ವಿರುದ್ಧ ಶಕ್ತಿಶಾಲಿ ಮತ್ತು ಮಾರಕ ದಾಳಿ ನಡೆಸಲು ಆದೇಶಿಸಿರುವುದಾಗಿ ತಿಳಿಸಿದ್ದಾರೆ. ಈ ಗುಂಪು ಆ ಪ್ರದೇಶದಲ್ಲಿ ಕ್ರೈಸ್ತರನ್ನು ಗುರಿಯಾಗಿಸಿಕೊಂಡು ಹತ್ಯೆ ಮಾಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ. 2025ರಲ್ಲಿ ನೈಜಿರಿಯಾದಲ್ಲಿ ಅಂದಾಜು 7,000 ಕ್ರೈಸ್ತರನ್ನು ಐಸಿಸ್ ಉಗ್ರರು ಕೊಂದಿದ್ದಾರೆಂಬ ವರದಿಗಳ ಆಧಾರದಲ್ಲಿ ಟ್ರಂಪ್ ಈ ನಿರ್ಧಾರ ಕೈಗೊಂಡಿದ್ದಾರೆ.

ದಾಳಿಯ ಬಗ್ಗೆ ತಮ್ಮ 'ಟ್ರೂತ್ ಸೋಶಿಯಲ್' ಖಾತೆಯಲ್ಲಿ ಬರೆದುಕೊಂಡಿರುವ ಟ್ರಂಪ್ ಅವರು, ಅಮೆರಿಕದ ಕಮಾಂಡರ್-ಇನ್-ಚೀಫ್ ಆಗಿರುವ ನನ್ನ ನಿರ್ದೇಶನದ ಮೇರೆಗೆ ಈ ದಾಳಿ ನಡೆಸಲಾಗಿದೆ ಎಂದು ಟ್ರಂಪ್ ಹೇಳಿಕೊಂಡಿದ್ದಾರೆ. ಐಸಿಸ್ ಉಗ್ರರನ್ನು ಭಯೋತ್ಪಾದಕ ತ್ಯಾಜ್ಯ ಎಂದು ಕರೆದಿದ್ದಾರೆ. ಈ ಗುಂಪು ವರ್ಷಗಟ್ಟಲೆ, ಶತಮಾನಗಟ್ಟಲೆ ಕಾಣದ ಮಟ್ಟದಲ್ಲಿ, ಪ್ರಾಥಮಿಕವಾಗಿ ಅಮಾಯಕ ಕ್ರೈಸ್ತರನ್ನು ಗುರಿಯಾಗಿಸಿಕೊಂಡು ಕ್ರೂರವಾಗಿ ಹತ್ಯೆ ಮಾಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

- ನೈಜೀರಿಯಾದಲ್ಲಿರುವ ಐಸಿಸ್ ಉಗ್ರರ ವಿರುದ್ಧ ದಾಳಿಗೆ ಅಮೆರಿಕ ಆದೇಶ.
- ಅಲ್ಲಿನ ಕ್ರೈಸ್ತರ ಮೇಲೆ ಸತತ ದಾಳಿಗಳಿಂದ ಸಿಟ್ಟಿಗೆದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್.
- 2025ರ ಕ್ರಿಸ್ಮಸ್ ದಿನದಂದೇ ಉಗ್ರರ ವಿರುದ್ಧ ವೈಮಾನಿಕ ದಾಳಿ ನಡೆಸುವಂತೆ ಆದೇಶ.



ಕ್ರೈಸ್ತರ ಹತ್ಯೆಯನ್ನು ನಿಲ್ಲಿಸದಿದ್ದರೆ, ನರಕವನ್ನು ಎದುರಿಸಬೇಕಾಗುತ್ತದೆ ಎಂದು ನಾನು ಈ ಭಯೋತ್ಪಾದಕರಿಗೆ ಈ ಹಿಂದೆಯೇ ಎಚ್ಚರಿಕೆ ನೀಡಿದ್ದೆ. ಆದರೂ ಕ್ರಿಸ್‌ಮಸ್ ದಿನದ ರಾತ್ರಿ ಆ ಭಯೋತ್ಪಾದಕರು ಕ್ರೈಸ್ತರನ್ನು ಕೊಂದಿದ್ದಾರೆ.. ಹಾಗಾಗಿಯೇ ಅವರ ವಿರುದ್ಧ ದಾಳಿಗೆ ಆದೇಶಿಸಿದ್ದೇನೆ. ಯುದ್ಧ ಇಲಾಖೆಯು ಅನೇಕ ಪರಿಪೂರ್ಣ ದಾಳಿಗಳನ್ನು ನಡೆಸಿದೆ. ಇಂಥ ತ್ವರಿತ ಕೆಲಸಗಳನ್ನು ಕೇವಲ ಅಮೆರಿಕ ಮಾತ್ರ ಮಾಡಬಲ್ಲದು ಎಂದು ಅವರು ತಮ್ಮ ನಡೆಯನ್ನು ಸಮರ್ಥಿಸಿಕೊಂಡಿದ್ದಾರೆ. ಇದೇ ವೇಳೆ, ತಮ್ಮ ನಾಯಕತ್ವದಲ್ಲಿ, ಅಮೆರಿಕವು ಉಗ್ರಗಾಮಿ ಇಸ್ಲಾಮಿಕ್ ಭಯೋತ್ಪಾದನೆ ಬೆಳೆಯಲು ಬಿಡುವುದಿಲ್ಲ ಎಂದು ಹೇಳಿದ್ದಾರೆ.



ಕ್ರಿಸ್ಮಸ್ ದಿನದಂದೇ ವೈಮಾನಿಕ ದಾಳಿ

ಇತ್ತೀಚಿನ ತಿಂಗಳುಗಳಲ್ಲಿ, ಟ್ರಂಪ್ ಅವರು ನೈಜೀರಿಯಾದಲ್ಲಿ ಕ್ರೈಸ್ತರ ಪರಿಸ್ಥಿತಿಯ ಬಗ್ಗೆ ಪದೇ ಪದೇ ಮಾತನಾಡುತ್ತಿದ್ದಾರೆ. ನೈಜೀರಿಯಾದಿಂದ ಉಗ್ರರು ಅಮೆರಿಕಕ್ಕೆ ಕಾಲಿಡುವುದನ್ನು ತಪ್ಪಿಸಲು ಇತ್ತೀಚೆಗಷ್ಟೇ ಬಿಡುಗಡೆ ಮಾಡಲಾಗಿರುವ ಟ್ರಾವೆಲ್ ಬ್ಯಾನ್ ಲಿಸ್ಟ್‌ನಲ್ಲಿ ನೈಜಿರಿಯಾ ಪ್ರಜೆಗಳಿಗೆ ಭಾಗಶಃ ನಿಷೇಧ ಹೇರಲಾಗಿದೆ.

ನವೆಂಬರ್‌ನಲ್ಲಿ, ಅವರು ತಮ್ಮ ರಕ್ಷಣಾ ಸಚಿವರಿಗೆ, ನೈಜಿರಿಯಾದಲ್ಲಿ ಕ್ರೈಸ್ತರ ಮೇಲೆ ನಡೆಸಲಾಗುತ್ತಿರುವ ದೌರ್ಜನ್ಯಗಳ ವಿರುದ್ಧ ಅಗತ್ಯ ಸಂದರ್ಭಗಳಲ್ಲಿ ಸೂಕ್ತ ಕ್ರಮಗಳನ್ನು ಜರುಗಿಸಲು ಸನ್ನದ್ಧರಾಗಿರುವಂತೆ ಸೂಚಿಸಿದ್ದರು. ಆಫ್ರಿಕಾದ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ದೇಶಗಳಲ್ಲೊಂದಾದ ನೈಜೀರಿಯಾದಲ್ಲಿ ಕ್ರಿಶ್ಚಿಯನ್ ಜನಸಂಖ್ಯೆಯನ್ನು ರಕ್ಷಿಸಲು ಅಮೆರಿಕವು ಬಂದೂಕುಗಳನ್ನು ಬಳಸಲಿದೆ ಎಂದು ಸಿಎನ್‌ಎನ್ ಸುದ್ದಿಸಂಸ್ಥೆ ವರದಿ ಮಾಡಿದೆ.

## ನೈಜಿರಿಯಾದಲ್ಲಿ ರಾಷ್ಟ್ರವ್ಯಾಪಿ ಭದ್ರತಾ ತುರ್ತು ಪರಿಸ್ಥಿತಿ ಘೋಷಣೆ

**ನೈಜೀರಿಯಾದಲ್ಲಿ ಅಪಹರಣ ಪ್ರಕರಣಗಳು ಮಿತಿಮೀರಿರುವ ಹಿನ್ನೆಲೆಯಲ್ಲಿ, ಅಧ್ಯಕ್ಷ ಬೋಲಾ ಟಿನುಬು ಅವರು ದೇಶಾದ್ಯಂತ ಭದ್ರತಾ ತುರ್ತು ಪರಿಸ್ಥಿತಿಯನ್ನು ಘೋಷಿಸಿದ್ದಾರೆ. ಇತ್ತೀಚಿನ ದಿನಗಳಲ್ಲಿ ನೂರಾರು ಜನರನ್ನು ಗುರಿಯಾಗಿಸಿ ನಡೆಯುತ್ತಿರುವ ಅಪಹರಣಗಳನ್ನು ತಡೆಯಲು ಸಶಸ್ತ್ರ ಪಡೆಗಳ ಬಲವರ್ಧನೆಗೆ ಮತ್ತು ಹೆಚ್ಚುವರಿ ಪೊಲೀಸರ ನಿಯೋಜನೆಗೆ ಅವರು ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ. ಕಳೆದ ಕೇವಲ ಒಂದು ವರ್ಷದಲ್ಲೇ ಸುಮಾರು 4,000ಕ್ಕೂ ಹೆಚ್ಚು ಜನರು ಅಪಹರಣಕ್ಕೊಳಗಾಗಿರುವುದು ಆತಂಕಕಾರಿ ವಿಷಯವಾಗಿದ್ದು, ದಶಕಗಳಿಂದ ದೇಶವನ್ನು ಕಾಡುತ್ತಿರುವ ಭದ್ರತಾ ಲೋಪಗಳನ್ನು ಸರಿಪಡಿಸಲು ಸರ್ಕಾರ ಈಗ ಯುದ್ಧೋಪಾದಿಯಲ್ಲಿ ಕ್ರಮ ಕೈಗೊಳ್ಳುತ್ತಿದೆ.**

## 40 ಕೋಟಿ ರೂ.ಮೌಲ್ಯದ ಡ್ರಗ್ಸ್ ವಶ

**ಇಂಫಾಲ:** ಅಸ್ಸಾಂ ರೈಫಲ್ಸ್ ಮತ್ತು ಮಣಿಪುರ ಪೊಲೀಸರು ಜಿರಿಬಮ್ ಜಿಲ್ಲೆಯಿಂದ ಸುಮಾರು 40 ಕೋಟಿ ರೂ. ಮೌಲ್ಯದ ನಿಷೇಧಿತ ಯಾಬಾ ಮಾತ್ರೆಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಅರೆಸೈನಿಕ ಪಡೆ ಹೇಳಿಕೆಯಲ್ಲಿ ತಿಳಿಸಿದೆ. ಈ ಸಂಬಂಧ ಒಬ್ಬ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಅದು ತಿಳಿಸಿದೆ.

ಥಾಯ್ ಭಾಷೆಯಲ್ಲಿ ಕ್ರೇಜಿ ಮೆಡಿಸಿನ್ ಎಂದು ಕರೆಯಲ್ಪಡುವ ಯಾಬಾ ಟ್ಯಾಬ್ಲೆಟ್, ಮೆಥಾಂಫೆಟಮೈನ್ ಮತ್ತು ಕೆಫೀನ್ ಮಿಶ್ರಣವನ್ನು ಹೊಂದಿರುವ ಹೆಚ್ಚು ವ್ಯಸನಕಾರಿ ಔಷಧವಾಗಿದೆ. ಇದು ಕೇಂದ್ರ ನರಮಂಡಲವನ್ನು ಉತ್ತೇಜಿಸುತ್ತದೆ, ಇದು ತೀವ್ರ ಆರೋಗ್ಯ ಅಪಾಯಗಳನ್ನುಂಟುಮಾಡುತ್ತದೆ.

ಡಿಸೆಂಬರ್ 24 ರಂದು ಜಿರಿಬಮ್‌ನಲ್ಲಿ ನಡೆಸಿದ ಜಂಟಿ ಕಾರ್ಯಾಚರಣೆಯ ಸಮಯದಲ್ಲಿ, ಸುಮಾರು 40 ಕೋಟಿ ರೂ. ಮೌಲ್ಯದ 1,60,000 ಯಾಬಾ ಮಾತ್ರೆಗಳನ್ನು ವಶಪಡಿಸಿಕೊಳ್ಳಲಾಯಿತು ಮತ್ತು ಒಬ್ಬ ವ್ಯಕ್ತಿಯನ್ನು ಬಂಧಿಸಲಾಯಿತು ಎಂದು ಅಸ್ಸಾಂ ರೈಫಲ್ಸ್ ಹೇಳಿಕೆ ತಿಳಿಸಿದೆ.

ವಶಪಡಿಸಿಕೊಂಡ ಕಳ್ಳಸಾಗಣೆ ವಸ್ತುವನ್ನು, ಬಂಧಿತ ವ್ಯಕ್ತಿಯೊಂದಿಗೆ, ಹೆಚ್ಚಿನ ತನಿಖೆಗಾಗಿ ಜಿರಿಬಮ್ ಪೊಲೀಸರಿಗೆ ಹಸ್ತಾಂತರಿಸಲಾಯಿತು,



ಇದು ಮಾದಕವಸ್ತು ಕಳ್ಳಸಾಗಣೆ ನಿಗ್ರಹಿಸುವ ಮತ್ತು ಸಮಾಜವನ್ನು ರಕ್ಷಿಸುವ ಬದ್ಧತೆಯನ್ನು ಬಲಪಡಿಸುತ್ತದೆ ಎಂದು ಅದು ಹೇಳಿದೆ.

ಪ್ರತ್ಯೇಕ ಕಾರ್ಯಾಚರಣೆಯಲ್ಲಿ, ಭದ್ರತಾ ಪಡೆಗಳು ನಿಷೇಧಿತ ಸಂಘಟನೆಯ ಸಕ್ರಿಯ ಕೇಡರ್ ಸೇರಿದಂತೆ ಇಬ್ಬರನ್ನು ಬಂಧಿಸಿವೆ ಮತ್ತು ಇಂಫಾಲ್ ಪಶ್ಚಿಮ ಜಿಲ್ಲೆಯಲ್ಲಿ ಮದ್ದುಗುಂಡುಗಳು ಮತ್ತು ಸ್ಫೋಟಕಗಳನ್ನು ವಶಪಡಿಸಿಕೊಂಡಿವೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿಷೇಧಿತ ಕಾಂಗ್ಲೇ ಯಾವೋಲ್ ಕನ್ನಾ ಲುಪ್‌ನ 44 ವರ್ಷದ ಕೇಡರ್ ಅನ್ನು ಕೀಶಾಂಪತ್ ಲೀಮಾಜಮ್ ಲೀಕೈ ಪ್ರದೇಶದ ಬಾಡಿಗೆ ಮನೆಯಿಂದ ಬಂಧಿಸಲಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮದ್ದುಗುಂಡುಗಳು ಮತ್ತು ಸ್ಫೋಟಕಗಳನ್ನು ಹಸ್ತಾಂತರಿಸಲಾದ ಉಗ್ರಗಾಮಿಯ ಸಹಚರನನ್ನು ಅವನ ನಿವಾಸದಿಂದ ಬಂಧಿಸಲಾಗಿದೆ ಎಂದು ಅವರು ಹೇಳಿದರು.

ಎರಡು ವರ್ಷಗಳ ಹಿಂದೆ ಜನಾಂಗೀಯ ಹಿಂಸಾಚಾರ ಭುಗಿಲೆದ್ದಾಗಿನಿಂದ ಮಣಿಪುರದಲ್ಲಿ ಶೋಧ ಕಾರ್ಯಾಚರಣೆಗಳನ್ನು ನಡೆಸಲಾಗುತ್ತಿದೆ. ಮೇ 2023 ರಿಂದ ಮೈತೈಸ್ ಮತ್ತು ಕುಕಿ-ಜೋ ಗುಂಪುಗಳ ನಡುವಿನ ಜನಾಂಗೀಯ ಹಿಂಸಾಚಾರದಲ್ಲಿ 260 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಮತ್ತು ಸಾವಿರಾರು ಜನರು ನಿರಾಶ್ರಿತರಾಗಿದ್ದಾರೆ.

## 2001ರಲ್ಲಿ ಪಾಕ್ ಬಗ್ಗೆ ಕಳವಳ ಹೊರಹಾಕಿದ್ದ ಪುಟಿನ್

**ವಾಷಿಂಗ್ಟನ್:** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು 2001 ರಲ್ಲಿ ಅಮೆರಿಕ ಅಧ್ಯಕ್ಷ ಜಾರ್ಜ್ ಡಬ್ಲ್ಯು ಬುಷ್ ಅವರೊಂದಿಗಿನ ಸಂಭಾಷಣೆಯ ಸಮಯದಲ್ಲಿ ಪಾಕಿಸ್ತಾನದ ಬಗ್ಗೆ 'ಕಳವಳ' ವ್ಯಕ್ತಪಡಿಸಿದ್ದರು ಮತ್ತು ಇಸ್ಲಾಮಾಬಾದ್ ಅನ್ನು ''ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರುವ ಜುಂಟಾ'' ಎಂದು ಕರೆದಿದ್ದರು ಎಂದು ರಾಷ್ಟ್ರೀಯ ಭದ್ರತಾ ಪತ್ರಾಗಾರ ಈ ವಾರ ಬಹಿರಂಗಪಡಿಸಿದ ದಾಖಲೆಗಳು ತಿಳಿಸಿವೆ.

2001 ರ ಜೂನ್ 16ರಂದು ಸ್ಲೊವೇನಿಯಾದ ಬ್ರೋ ಕ್ಯಾಸಲ್ ನಲ್ಲಿ ಬುಷ್ ಅವರೊಂದಿಗಿನ ವೈಯಕ್ತಿಕ ಭೇಟಿಯ ಸಂದರ್ಭದಲ್ಲಿ ಪುಟಿನ್ ಈ ಹೇಳಿಕೆ ನೀಡಿದ್ದರು. ಪ್ರಸರಣ ರಹಿತ ಒಪ್ಪಂದ, ಇರಾನ್, ಉತ್ತರ ಕೊರಿಯಾ ಮತ್ತು ಉತ್ತರ ಅಟ್ಲಾಂಟಿಕ್ ಒಪ್ಪಂದ ಸಂಸ್ಥೆ (ನ್ಯಾಟೋ) ವಿಸ್ತರಣೆ ಸೇರಿದಂತೆ ಉಭಯ ನಾಯಕರು ತಮ್ಮ ಸಂಭಾಷಣೆಯ ಸಮಯದಲ್ಲಿ ಅನೇಕ ವಿಷಯಗಳು ಮತ್ತು ವಿಷಯಗಳ ಬಗ್ಗೆ ಚರ್ಚಿಸಿದ್ದರು ಎಂದು ಬಹಿರಂಗಪಡಿಸಿದ ದಾಖಲೆಗಳು ಹೇಳುತ್ತವೆ. ತಮ್ಮ ಸಂಭಾಷಣೆಯ ಸಮಯದಲ್ಲಿ, ಪುಟಿನ್ ಅಂದಿನ ಅಮೆರಿಕ ಅಧ್ಯಕ್ಷರಿಗೆ ಪಾಕಿಸ್ತಾನವು ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿದೆ ಮತ್ತು ಪ್ರಜಾಪ್ರಭುತ್ವವನ್ನು ಹೊಂದಿಲ್ಲ, ಆದರೆ ಇನ್ನೂ ಪಶ್ಚಿಮವು ಅದರ ಬಗ್ಗೆ ಕಾಳಜಿ ವಹಿಸುವುದಿಲ್ಲ ಎಂದು ಹೇಳಿದರು. ಇದಕ್ಕೆ ಉತ್ತರಿಸಿದ ಬುಷ್, ಅಮೆರಿಕ-ರಷ್ಯಾ ಘರ್ಷಣೆಯು ಬೆದರಿಕೆಯಲ್ಲ ಎಂದು ಪುಟಿನ್ ಗೆ ಹೇಳಿದರು, ರಷ್ಯಾದ ಅಧ್ಯಕ್ಷರು ವಾಷಿಂಗ್ಟನ್ ಅನ್ನು ಎಂದಿಗೂ ಬೆದರಿಕೆ ಎಂದು ಪರಿಗಣಿಸಿಲ್ಲ ಎಂದು ಉತ್ತರಿಸಿದರು. ನಾನು ಪಾಕಿಸ್ತಾನದ ಬಗ್ಗೆ ಕಳವಳ ಹೊಂದಿದ್ದೇನೆ ಎಂದು ಪುಟಿನ್ ಹೇಳಿದ್ದರು. ಇದು ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರುವ ಜುಂಟಾ ಮಾತ್ರ. ಇದು ಪ್ರಜಾಪ್ರಭುತ್ವವಲ್ಲ, ಆದರೂ ಪಶ್ಚಿಮವು ಅದರ ಬಗ್ಗೆ ಯಾವುದೇ ಟೀಕೆ ಮಾಡುವುದಿಲ್ಲ. ಅದರ ಬಗ್ಗೆ ಮಾತನಾಡಬೇಕು ಎಂದು ಹೇಳಿದ್ದರು.



## ದೇಶದಲ್ಲಿ ಮದ್ಯ ಮಾರಾಟ ಏರಿಕೆ

**ನವದೆಹಲಿ:** ಕ್ರಿಸ್‌ಮಸ್ ಮತ್ತು ಹೊಸ ವರ್ಷದ ವಾರದಲ್ಲಿ ಭಾರತದಲ್ಲಿ ಮದ್ಯ ಮಾರಾಟವು ದಾಖಲೆಯ ಮಟ್ಟವನ್ನು ತಲುಪುತ್ತದೆ. ಈ ಅವಧಿಯಲ್ಲಿ ವಿವಿಧ ರಾಜ್ಯಗಳಲ್ಲಿ ಸಾವಿರಾರು ಕೋಟಿ ರೂಪಾಯಿಗಳ ಆದಾಯವು ಉತ್ಪತ್ತಿಯಾಗುತ್ತದೆ, ಇದು ಮದ್ಯ ಉದ್ಯಮಕ್ಕೆ ಮಾತ್ರವಲ್ಲದೆ ರಾಜ್ಯ ಸರ್ಕಾರಗಳಿಗೂ ಆದಾಯದಲ್ಲಿ ಗಮನಾರ್ಹ ಹೆಚ್ಚಳಕ್ಕೆ ಕಾರಣವಾಗಿದೆ.

ಬಾರ್‌ಗಳು, ಪಬ್‌ಗಳು, ಹೋಟೆಲ್‌ಗಳು, ಕ್ಲಬ್‌ಗಳು ಮತ್ತು ಸರ್ಕಾರಿ ಮದ್ಯದಂಗಡಿಗಳಲ್ಲಿ ಜನರ ಉದ್ದನೆಯ ಸರತಿ ಸಾಲುಗಳು ಈ ವಾರ ಮದ್ಯ ಉದ್ಯಮಕ್ಕೆ ಅಸಾಧಾರಣ ಪ್ರಾಮುಖ್ಯತೆಯನ್ನು ಸೂಚಿಸುತ್ತವೆ. ಲಭ್ಯವಿರುವ ಸರ್ಕಾರಿ ಮತ್ತು ಕೈಗಾರಿಕಾ ದತ್ತಾಂಶಗಳ ಪ್ರಕಾರ, ಕ್ರಿಸ್‌ಮಸ್‌ನಿಂದ ಹೊಸ ವರ್ಷದವರೆಗಿನ ಸರಿಸುಮಾರು ಏಳು ದಿನಗಳಲ್ಲಿ ಭಾರತದಲ್ಲಿ ಮದ್ಯ ಮಾರಾಟವು ಸಾಮಾನ್ಯ ದಿನಗಳಿಗೆ ಹೋಲಿಸಿದರೆ ಎರಡರಿಂದ ಮೂರು ಪಟ್ಟು ಹೆಚ್ಚಾಗುತ್ತದೆ. ಕೆಲವೇ ಪ್ರಮುಖ ರಾಜ್ಯಗಳಲ್ಲಿ, ಮಾರಾಟವು ಸಾವಿರಾರು ಕೋಟಿ ರೂಪಾಯಿಗಳನ್ನು ತಲುಪಬಹುದು. ಉತ್ತರ ಭಾರತದಿಂದ ದಕ್ಷಿಣ ಮತ್ತು ಪೂರ್ವ ರಾಜ್ಯಗಳವರೆಗೆ, ಪ್ರತಿಯೊಂದು ಪ್ರದೇಶವು ಮದ್ಯ ಸೇವನೆಯಲ್ಲಿ ತೀವ್ರ ಏರಿಕೆಯನ್ನು ಕಾಣುತ್ತಿದೆ. ಉತ್ತರ ಪ್ರದೇಶದ ಪ್ರಮುಖ ನಗರ ಪ್ರದೇಶಗಳಾದ ನೋಯ್ಡಾ ಮತ್ತು ಗಾಜಿಯಾಬಾದ್‌ನಲ್ಲಿ, ಹೊಸ ವರ್ಷದ ದಿನದಂದು ಸರಿಸುಮಾರು 300,000 ರಿಂದ 400,000 ಲೀಟರ್ ಮದ್ಯ ಮಾರಾಟವಾಗುತ್ತದೆ, ಇದರಿಂದಾಗಿ ವ್ಯವಹಾರದ ಮೌಲ್ಯ ಸುಮಾರು 140 ಮಿಲಿಯನ್‌ಗೆ ತಲುಪುತ್ತದೆ. ರಾಜಧಾನಿ ದೆಹಲಿಯಲ್ಲಿ ಪರಿಸ್ಥಿತಿ ಇನ್ನೂ ಗಮನಾರ್ಹವಾಗಿದ್ದು, ಡಿಸೆಂಬರ್ ಕೊನೆಯ ವಾರದಲ್ಲಿ 10 ಮಿಲಿಯನ್‌ಗಿಂತಲೂ ಹೆಚ್ಚು ಬಾಟಲಿ ಮದ್ಯ ಮಾರಾಟವಾಗಿದೆ.

## ಯುಕೆನಲ್ಲಿ ಕುಳಿತು ಯುಪಿ ಸರ್ಕಾರದಿಂದ ಸಂಬಳ ಪಡೆಯುತ್ತಿದ್ದ ಮದರಸಾ ಶಿಕ್ಷಕನ ವಿರುದ್ಧ ಇಡಿ ಕೇಸ್

**ನವದೆಹಲಿ:** ಜಾರಿ ನಿರ್ದೇಶನಾಲಯವು ಉತ್ತರ ಪ್ರದೇಶ ಮೂಲದ ಮಾಜಿ ಮುದರಸಾ ಶಿಕ್ಷಕ ಮೌಲಾನಾ ಷಂಸುಲ್ ಹುದಾ ಖಾನ್ ಎಂಬಾತನ ವಿರುದ್ಧ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಯಡಿ ಪ್ರಕರಣ ದಾಖಲಿಸಿದೆ.

**ಯಾರು ಈ ಷಂಸುಲ್ ಹುದಾಖಾನ್ ? :** ಈತ ಮೂಲತಃ ಉತ್ತರ ಪ್ರದೇಶದ ಅಝುಂಗಢದ ಇಸ್ಲಾಮಿಕ್ ಬೋಧಕನಾಗಿದ್ದು 1984 ರಲ್ಲಿ ಸರ್ಕಾರಿ ಅನುದಾನಿತ ಮದರಸಾದಲ್ಲಿ ಸಹಾಯಕ ಶಿಕ್ಷಕನಾಗಿ ನೇಮಕಗೊಂಡಿದ್ದ. ಉತ್ತರ ಪ್ರದೇಶ ಭಯೋತ್ಪಾದನಾ ನಿಗ್ರಹದಳ ಶಂಕಿತ ಅಕ್ರಮ ಹಣ ವರ್ಗಾವಣೆ, ವಿದೇಶದಿಂದ ಹಣ ಪಡೆಯುವಿಕೆ ಮತ್ತು ಜನಾಂಗೀಯ ಕಾರ್ಯಜಾಲದ ಬಗ್ಗೆ ಎಫ್ಐಆರ್ ದಾಖಲಿಸಿದ ಬಳಿಕ ಜಾರಿ ನಿರ್ದೇಶನಾಲಯವು (ಇ.ಡಿ) ಪಿಎಂಎಲ್‌ಎ ಅಡಿ ಪ್ರಕರಣ ದಾಖಲಿಸಿದೆ.

2013 ರಲ್ಲಿ ಬ್ರಿಟಿಷ್ ಪೌರತ್ವ ಪಡೆದಿದ್ದರೂ ಮತ್ತು ಯುಕೆನಲ್ಲಿ ನೆಲೆಸಿದ್ದರೂ ಖಾನ್ 2017ರವರೆಗೆ ಕೆಲಸ ಮಾಡದೆ ಸರ್ಕಾರದಿಂದ ವೇತನ ಮತ್ತು ಪಿಂಚಣಿ ಪಡೆಯುವುದನ್ನು ಮುಂದುವರೆಸಿದ್ದ ಎಂದು ಆರೋಪಿಸಲಾಗಿದೆ.



**ಈತ ತನ್ನ ಸರ್ಕಾರೇತರ ಸಂಸ್ಥೆ ಮತ್ತು ವೈಯಕ್ತಿಕ ಖಾತೆಗಳ ಮೂಲಕ ವಿವಿಧ ಮದರಸಾಗಳಿಗೆ ಹಣ ಪೂರೈಸುತ್ತಿದ್ದ ಎನ್ನಲಾಗಿದೆ. ಈ ವ್ಯಕ್ತಿ ಮೂಲಭೂತವಾದಿ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿರುವ ಶಂಕೆಯ ಮೇರೆಗೆ ತನಿಖೆ ನಡೆಸಲಾಗುತ್ತಿದೆ.ಈ ಮೌಲ್ವಿ ಪಾಕಿಸ್ತಾನ ಮೂಲದ ಸಂಘಟನೆಯೊಂದರ ಜೊತೆಗೆ ಸಂಪರ್ಕ ಹೊಂದಿದ್ದಾನೆ. -ಇ.ಡಿ.**

ಈತ ಭಾರತದಲ್ಲಿ ಹಲವಾರು ಬ್ಯಾಂಕ್ ಖಾತೆಗಳನ್ನು ಹೊಂದಿದ್ದು ಹಲವಾರು ಕೋಟಿ ರೂ.ಗಳಷ್ಟು ದೇಣಿಗೆ ಪಡೆದು ಅದನ್ನು ಸುಮಾರು 30 ಕೋಟಿ ರೂ. ಮೌಲ್ಯದ ಚರ ಆಸ್ತಿ ಗಳಿಕೆಗೆ ಬಳಸಿದ್ದ ಎಂದು ಇ.ಡಿ ಆರೋಪಿಸಿದೆ.


ಪಿಎಂಎಲ್‌ಎ ಪ್ರಕರಣ ಮಾತ್ರವಲ್ಲದೆ, ವಂಚನೆ, ನಕಲು ಮಾಡುವಿಕೆ, ಪೌರತ್ವದ ಸ್ಥಾನಮಾನ ಉಲ್ಲಂಘನೆ ಸೇರಿದಂತೆ ಫೆಮಾ ಕಾನೂನು ಅಡಿಯೂ ಪ್ರಕರಣ ದಾಖಲಿಸಲಾಗಿದೆ. ಉತ್ತರ ಪ್ರದೇಶ ಸರ್ಕಾರವು ಅನಿಯಮಿತ ವೇತನ ಪಾವತಿ ಮಾಡಿರುವುದಕ್ಕಾಗಿ ಕೆಲವು ಸರ್ಕಾರಿ ಅಧಿಕಾರಿಗಳ ಅಮಾನತು ಸೇರಿದಂತೆ ಆಡಳಿತಾತಕ ಕ್ರಮ ಕೈಗೊಂಡಿದೆ.

## ಹಿಂದೂ ಹತ್ಯೆ : ಮುಹಮ್ಮದ್ ಯೂನಸ್ ಖಂಡನೆ

**ಢಾಕಾ:** ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ರಾಜ್‌ಬರಿ ಜಿಲ್ಲೆಯಲ್ಲಿ ಹಿಂದೂ ಯುವಕ ಅಮೃತ್ ಮೊಂಡಲ್ ಅಲಿಯಾಸ್ ಸಾಮ್ರಾಟ್ ಹತ್ಯೆಯನ್ನು ಖಂಡಿಸಿದೆ. ಆದರೆ ಈ ಹತ್ಯೆಯು ಕೋಮು ಹಿಂಸಾಚಾರಕ್ಕೆ ಸಂಬಂಧಿಸಿದೆ ಎಂಬುದನ್ನು ನಿರಾಕರಿಸಿದೆ. ಯುವ ನಾಯಕ ಎಂದು ಪರಿಗಣಿಸಲ್ಪಟ್ಟಿದ್ದ ಮೊಂಡಲ್ ಅವರನ್ನು ರಾತ್ರಿ ಪಂಗ್ಶಾ ಉಪಜಿಲ್ಲೆಯ ಹುಸೇಂಡಂಗಾ ಹಳೆ ಮಾರುಕಟ್ಟೆಯಲ್ಲಿ ಹಲ್ಲೆ ನಡೆಸಿ ಹತ್ಯೆ ಮಾಡಲಾಗಿದೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಬಾಂಗ್ಲಾದೇಶ ಸರ್ಕಾರವು ಈ ಘಟನೆಯ ಕೋಮು ಆಯಾಮವನ್ನು ನಿರಾಕರಿಸಿದೆ. ಆದರೆ 2023 ರಲ್ಲಿ ಅವರ ವಿರುದ್ಧ ದಾಖಲಾದ ಕೊಲೆ ಮತ್ತು ಸುಲಿಗೆ ಪ್ರಕರಣಗಳು ಸೇರಿದಂತೆ ಅನೇಕ ಗಂಭೀರ ಕ್ರಿಮಿನಲ್ ಪ್ರಕರಣಗಳಲ್ಲಿ ಮೊಂಡಲ್ ಆರೋಪಿಯಾಗಿದ್ದಾನೆ ಎಂದು ಗಮನಸೆಳೆದಿದೆ. ಆ ಪ್ರಕರಣಗಳಿಗೆ ಸಂಬಂಧಿಸಿದಂತೆ ಅವರ ವಿರುದ್ಧ ಬಂಧನ ವಾರಂಟ್ ಹೊರಡಿಸಲಾಗಿದೆ ಎಂದು ಅದು ಹೇಳಿದೆ.

ಪೊಲೀಸ್ ಮಾಹಿತಿ ಮತ್ತು ಪ್ರಾಥಮಿಕ ತನಿಖೆಯ ಪ್ರಕಾರ, ಈ ಘಟನೆಯು ಕೋಮು ಹಿಂಸಾಚಾರಕ್ಕೆ ಯಾವುದೇ ರೀತಿಯಲ್ಲಿ ಸಂಬಂಧಿಸಿಲ್ಲ ಎಂಬುದು ಸ್ಪಷ್ಟವಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಬದಲಿಗೆ, ಇದು ಸುಲಿಗೆ ಮತ್ತು ಅಪರಾಧ ಚಟುವಟಿಕೆಗಳಿಂದ ಉದ್ಭವಿಸಿದ ಹಿಂಸಾತ್ಮಕ ಪರಿಸ್ಥಿತಿಯಿಂದ ಉದ್ಭವಿಸಿದೆ. ಮೃತ ವ್ಯಕ್ತಿ ಅಮೃತ್ ಮೊಂಡಲ್ ಅಲಿಯಾಸ್ ಸಾಮ್ರಾಟ್ ಸುಲಿಗೆ ಹಣ ಸಂಗ್ರಹಿಸುವ ಉದ್ದೇಶದಿಂದ ಈ ಪ್ರದೇಶಕ್ಕೆ ಪ್ರವೇಶಿಸಿದ ಪಟ್ಟಿಯ ಉನ್ನತ ಅಪರಾಧಿಯಾಗಿದ್ದಾನೆ.



ಒಂದು ಹಂತದಲ್ಲಿ, ಆಕ್ರೋಶಗೊಂಡ ಸ್ಥಳೀಯ ನಿವಾಸಿಗಳೊಂದಿಗೆ ಘರ್ಷಣೆಯಲ್ಲಿ ಅವರು ಪ್ರಾಣ ಕಳೆದುಕೊಂಡರು.

**ಧರ್ಮನಿಂದನೆ ಆರೋಪದ ಮೇಲೆ ಥಳಿಸಿ ಹತ್ಯೆ**

32 ವರ್ಷದ ಶರೀಫ್ ಉಸ್ಮಾನ್ ಹಾದಿ ಹತ್ಯೆಯ ನಂತರ ದೇಶದಲ್ಲಿ ಉಂಟಾದ ಅಶಾಂತಿಯ ನಂತರ ಬಾಂಗ್ಲಾದೇಶದಲ್ಲಿ ನಡೆದ ಅಶಾಂತಿಯ ನಂತರ 29 ವರ್ಷದ ಮೊಂಡಲ್ ಥಳಿತಕ್ಕೆ ಒಳಗಾದ ಎರಡನೇ ಹಿಂದೂ ಯುವಕರಾಗಿದ್ದಾರೆ. ಇದಕ್ಕೂ ಮುನ್ನ ಮೈಮೆನ್ ಸಿಂಗ್ ನ ಬಟ್ಟೆ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ದೀಪು ಚಂದ್ರ ದಾಸ್ ಅವರನ್ನು ಧರ್ಮನಿಂದನೆ ಆರೋಪದ ಮೇಲೆ ಥಳಿಸಿ ಹತ್ಯೆ ಮಾಡಲಾಗಿತ್ತು. ಆದರೆ, ದಾಸ್ ಅವರನ್ನು ಸುಳ್ಳು ಆರೋಪ ಮಾಡಲಾಗಿದೆ ಎಂದು ಹೇಳಲಾಗಿದೆ. ಏತನ್ಮಧ್ಯೆ, ಹಾದಿ ಹತ್ಯೆಯ ನಂತರ ಬಾಂಗ್ಲಾದೇಶದಾದ್ಯಂತ ಮತ್ತೊಮ್ಮೆ ಹಿಂಸಾಚಾರ ಹರಡಿದೆ. ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಸರ್ಕಾರವನ್ನು ಉರುಳಿಸುವಲ್ಲಿ ಪ್ರತಿಭಟನೆಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಇಂಕಿಲಾಬ್ ಮೊಂಚೊದ ಸಹ-ಸಂಸ್ಥಾಪಕ ಮತ್ತು ವಕ್ತಾರರಾಗಿದ್ದ ಹಾದಿ, ಫೆಬ್ರವರಿ 12 ರಂದು ನಡೆಯಲಿರುವ ಸಂಸತ್ ಚುನಾವಣೆಯಲ್ಲಿ ಸ್ಪರ್ಧಿಸಲು ಯೋಜಿಸಿದ್ದ. ಈ ತಿಂಗಳ ಆರಂಭದಲ್ಲಿ ಢಾಕಾದಲ್ಲಿ ಪ್ರಚಾರ ಮಾಡುತ್ತಿದ್ದಾಗ ಅವರ ತಲೆಗೆ ಗುಂಡು ಹಾರಿಸಲಾಗಿತ್ತು. ಅವರನ್ನು ಸಿಂಗಾಪುರಕ್ಕೆ ಸ್ಥಳಾಂತರಿಸಲಾಯಿತು. ಅಲ್ಲಿ ಅವರು ಗಾಯಗಳಿಗೆ ಬಲಿಯಾದರು. ಪೊಲೀಸರು ಈಗ ಮುಖ್ಯ ಶಂಕಿತನ ಸಹಚರನನ್ನು ಬಂಧಿಸಿದ್ದು, ಇತರರನ್ನು ಬಂಧಿಸಲು ತನಿಖೆ ನಡೆಯುತ್ತಿದೆ.

## ಮಿನಿ ನ್ಯೂಸ್

### ಮಗಳೇ ಎದುರು ಪತ್ನಿಗೆ ಬೆಂಕಿ ಹಚ್ಚಿ ಹತ್ಯೆ

**ಹೈದರಾಬಾದ್:** ಹೈದರಾಬಾದ್‌ನ ನಲ್ಲಕುಂಟ ಪ್ರದೇಶದಲ್ಲಿ ವ್ಯಕ್ತಿಯೊಬ್ಬ ತನ್ನ ಹೆಂಡತಿಯನ್ನು ಮಕ್ಕಳ ಮುಂದೆಯೇ ಬೆಂಕಿ ಹಚ್ಚಿ ಕೊಂದಿದ್ದಾನೆ. ಅದೇ ಬೆಂಕಿಗೆ ಮಗಳನ್ನು ತಳ್ಳಿ ಪರಾರಿಯಾಗಿದ್ದಾನೆ. ವೆಂಕಟೇಶ್ ಎಂಬ ವ್ಯಕ್ತಿ ತನ್ನ ಪತ್ನಿ ತ್ರಿವೇಣಿಗೆ ವಿವಾಹೇತರ ಸಂಬಂಧವಿದೆ ಎಂದು ಶಂಕಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಮಕ್ಕಳ ಮುಂದೆಯೇ ತ್ರಿವೇಣಿ ಮೇಲೆ ಹಲ್ಲೆ ನಡೆಸಿ, ನಂತರ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ. ಮಗಳು ತನ್ನ ತಾಯಿಯನ್ನು ಉಳಿಸಲು ಪ್ರಯತ್ನಿಸಿದಾಗ, ಮಗಳನ್ನು ಬೆಂಕಿಗೆ ತಳ್ಳಿ ಮನೆಯಿಂದ ಪರಾರಿಯಾಗಿದ್ದಾನೆ ಎನ್ನಲಾಗಿದೆ.

ಕಿರುಚಾಟ ಕೇಳಿ ನೆರೆಹೊರೆಯವರು ಅವರ ಮನೆಗೆ ಧಾವಿಸಿದರು. ಆ ಹೊತ್ತಿಗೆ, ತ್ರಿವೇಣಿ ತೀವ್ರ ಸುಟ್ಟಗಾಯಗಳಿಂದ ಸಾವನ್ನಪ್ಪಿದ್ದಳು. ಗಾಯಗೊಂಡ ಆಕೆಯ ಮಗಳನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.ವೆಂಕಟೇಶ್ ಮತ್ತು ತ್ರಿವೇಣಿ ಪ್ರೀತಿಸಿ ಮದುವೆಯಾಗಿದ್ದರು. ಅವರಿಗೆ ಇಬ್ಬರು ಮಕ್ಕಳಿದ್ದರು ಒಬ್ಬ ಮಗಳು ಮತ್ತು ಒಬ್ಬ ಮಗ. ವೆಂಕಟೇಶ್ ತನ್ನ ಹೆಂಡತಿಯ ಮೇಲೆ ಅನುಮಾನ ವ್ಯಕ್ತಪಡಿಸುತ್ತಿದ್ದನು ಮತ್ತು ಆಗಾಗ್ಗೆ ಅವಳನ್ನು ಕಿರುಕುಳ ಮಾಡುತ್ತಿದ್ದನು. ನಿರಂತರ ಕಿರುಕುಳವನ್ನು ಸಹಿಸಲಾಗದೆ, ತ್ರಿವೇಣಿ ಇತ್ತೀಚೆಗೆ ತನ್ನ ಹೆತ್ತವರ ಮನೆಗೆ ಹೋಗಿದ್ದಳು. ವೆಂಕಟೇಶ್ ತನ್ನ ಹೆಂಡತಿಯ ಮನವೊಲಿಸಿ ಕರೆತಂದಿದ್ದ ಎನ್ನಲಾಗಿದೆ.ಪೊಲೀಸರು ಪ್ರಕರಣ ದಾಖಲಿಸಿಕೊಂಡು ಪರಾರಿಯಾಗಿರುವ ವೆಂಕಟೇಶ್‌ನನ್ನು ಬಂಧಿಸಲು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದಾರೆ.

### ಟೊರೊಂಟೊ ವಿವಿ ಬಳಿ 20 ವರ್ಷದ ಭಾರತೀಯ ವಿದ್ಯಾರ್ಥಿಗೆ ಗುಂಡಿಕ್ಕಿ ಹತ್ಯೆ

**ಒಟ್ಟಾವೋ:** ಟೊರೊಂಟೊ ವಿಶ್ವವಿದ್ಯಾಲಯದ ಸ್ಕಾರ್ಬರೋ ಕ್ಯಾಂಪಸ್ ಬಳಿ 20 ವರ್ಷದ ಭಾರತೀಯ ವಿದ್ಯಾರ್ಥಿ ಮೇಲೆ ವ್ಯಕ್ತಿಯೊಬ್ಬ ಗುಂಡು ಹಾರಿಸಿ ಹತ್ಯೆ ಮಾಡಿರುವ ಘಟನೆ ನಡೆದಿದೆ. ಸಾರ್ವಜನಿಕರ ನೆರವಿನಿಂದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಡಾಕ್ಟರೇಟ್ ವಿದ್ಯಾರ್ಥಿ ಶಿವಾಂಕ್ ಅವಸ್ಥಿ ಮೃತಪಟ್ಟ ಯುವಕ. ಈ ವರ್ಷ ಟೊರೊಂಟೊದಲ್ಲಿ ನಡೆದ 41ನೇ ಕೊಲೆ ಪ್ರಕರಣ ಇದಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಶಿವಂಕ್ ಅವಸ್ಥಿ ದುರಂತ ಸಾವಿನ ಬಗ್ಗೆ ಭಾರತ ತೀವ್ರ ದುಃಖ ವ್ಯಕ್ತಪಡಿಸಿದೆ. ಟೊರೊಂಟೊದಲ್ಲಿರುವ ಭಾರತೀಯ ಕಾನ್ಸುಲೇಟ್ ಜನರಲ್, ಮೃತ ಯುವಕನ ಕುಟುಂಬಕ್ಕೆ ಅಗತ್ಯ ನೆರವು ನೀಡುವುದಾಗಿ ತಿಳಿಸಿದೆ.

### ಕೇರಳ ರಾಜಧಾನಿಗೆ ಬಿಜೆಪಿ ಮೇಯರ್

**ತಿರುವನಂತಪುರಂ:** ಐತಿಹಾಸಿಕ ರಾಜಕೀಯ ಬೆಳವಣಿಗೆಯಲ್ಲಿ ಬಿಜೆಪಿ ರಾಜ್ಯ ಕಾರ್ಯದರ್ಶಿ ಹಾಗೂ ಕೊಡಂಗನೂರು ವಾರ್ಡ್ ಕೌನ್ಸಿಲರ್ ವಿ.ವಿ ರಾಜೇಶ್ ತಿರುವನಂತಪುರಂ ಪಾಲಿಕೆ ಮೇಯರ್ ಆಗಿ ಆಯ್ಕೆಯಾಗಿದ್ದಾರೆ. 51 ಮತಗಳನ್ನ ಗಳಿಸುವ ಮೂಲಕ ರಾಜೇಶ್ ಮೇಯರ್ ಆಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

ಇತ್ತೀಚೆಗೆ ನಡೆದ ತಿರುವನಂತಪುರಂ ಪಾಲಿಕೆ ಚುನಾವಣೆಯಲ್ಲಿ ಎಲ್‌ಡಿಎಫ್‌ನ 45 ವರ್ಷಗಳ ಆಡಳಿತಕ್ಕೆ ಅಂತ್ಯಹಾಡಿ ಎನ್‌ಡಿಎ ನೇತೃತ್ವದ ಬಿಜೆಪಿ ಗೆಲುವು ಸಾಧಿಸಿತು. ತಿರುವನಂತಪುರಂನ 101 ವಾರ್ಡ್‌ಗಳ ಪೈಕಿ ಬಿಜೆಪಿ 50 ವಾರ್ಡ್‌ಗಳಲ್ಲಿ ಬಿಜೆಪಿ ಗೆದ್ದಿತ್ತು. 101 ಸದಸ್ಯರ ನಿಗಮದಲ್ಲಿ ರಾಜೇಶ್ 50 ಬಿಜೆಪಿ ಕೌನ್ಸಿಲರ್ ಹಾಗೂ ಓರ್ವ ಸ್ವತಂತ್ರ ಸದಸ್ಯರ ಬೆಂಬಲ ಪಡೆಯುವ ಮೂಲಕ ಮೇಯರ್ ಪಟ್ಟಕ್ಕೇರಿದರು. ಯುಡಿಎಫ್ ಮೇಯರ್ ಅಭ್ಯರ್ಥಿ ಆಗಿದ್ದ ಕೆ.ಎಸ್ ಶಬರಿನಾಥನ್ 17 ಮತಗಳನ್ನ ಪಡೆದರೆ, ಎಲ್‌ಡಿಎಫ್ ಅಭ್ಯರ್ಥಿ ಆರ್‌ಪಿ ಶಿವಾಜಿ 29 ಮತಗಳನ್ನ ಗಳಿಸಿದ್ರು. ಬಳಿಕ ಯುಡಿಎಫ್ ಪರ ಚಲಾವಣೆಗೊಂಡಿದ್ದ 2 ಮತಗಳನ್ನ ಅಮಾನ್ಯವೆಂದು ಘೋಷಿಸಲಾಯಿತು.

### ಮೂರು ವರ್ಷಗಳಲ್ಲಿ ಮೂರು ಮದುವೆಯಾಗಿ ಜೈಲುಪಾಲಾದ ವ್ಯಕ್ತಿ

**ಗೋಪಾಲ್‌ಗಂಜ್:** ವ್ಯಕ್ತಿಯೊಬ್ಬ ಮೂರು ವರ್ಷಗಳಲ್ಲಿ ಮೂರು ಮದುವೆಯಾಗಿ ಈಗ ಜೈಲುಪಾಲಾಗಿರುವ ಘಟನೆ ಬಿಹಾರದ ಗೋಪಾಲ್ ಗಂಜ್ ನಲ್ಲಿ ನಡೆದಿದೆ. ಗೋಪಾಲ್‌ಗಂಜ್ ಜಿಲ್ಲೆಯ ಪಿಂಟು ಬರ್ನ್‌ವಾಲ್ ಎಂಬ ವ್ಯಕ್ತಿಯನ್ನು ಮೂರು ವರ್ಷಗಳ ಅವಧಿಯಲ್ಲಿ ತನ್ನ ಹಿಂದಿನ ಯಾವುದೇ ಪತ್ನಿಯರಿಗೆ ವಿಚ್ಛೇದನ ನೀಡದೆ ಮೂವರು ಮಹಿಳೆಯರನ್ನು ಮದುವೆಯಾಗಿದ್ದಾನೆ. ಆತನ ಮೊದಲ ಮತ್ತು ಎರಡನೇ ಪತ್ನಿ ಆತನ ಮೇಲೆ ಕೌಟುಂಬಿಕ ಹಿಂಸೆ ಮತ್ತು ವರದಕ್ಷಿಣೆ ಬೇಡಿಕೆಯ ಆರೋಪ ಹೊರಿಸಿದ ನಂತರ ಆತನನ್ನು ಬಂಧಿಸಲಾಗಿದೆ.

ಆರೋಪಗಳಿಗೆ ಪ್ರತಿಕ್ರಿಯಿಸಿದ ಪಿಂಟು ಬರ್ನ್ವಾಲ್, ವರದಕ್ಷಿಣೆ, ಹಿಂಸೆ ಈ ಎಲ್ಲಾ ಆರೋಪಗಳನ್ನು ನಿರಾಕರಿಸಿದ್ದಾರೆ. ತನ್ನ ವಿರುದ್ಧ ಮಾಡಲಾದ ಆರೋಪಗಳು ಸುಳ್ಳು ಎಂದು ಅವರು ಹೇಳಿಕೊಂಡಿದ್ದಾರೆ. ವರದಕ್ಷಿಣೆ ಆರೋಪಗಳಿಗೆ ಸಂಬಂಧಿಸಿದಂತೆ ಅವರು ಹೇಳಿದ್ದೆಲ್ಲವೂ ಸುಳ್ಳು, ನಾವು ಅವರಿಂದ ಒಂದು ರೂಪಾಯಿ ಕೂಡ ಪಡೆದಿಲ್ಲ ಎಂದು ಪಿಂಟು ಹೇಳಿದ್ದಾರೆ.

## ಟೈರ್ ಕಾರ್ಖಾನೆಯಲ್ಲಿ ಸಿಕ್ಕಸಿಕ್ಕವರಿಗೆ ಚಾಕುವಿನಿಂದ ಇರಿದ ದುಷ್ಕರ್ಮಿ

**ಟೋಕಿಯೊ:** ಮಧ್ಯ ಜಪಾನ್‌ನ ಕಾರ್ಖಾನೆಯೊಂದರಲ್ಲಿ ಅಪರಿಚಿತ ವ್ಯಕ್ತಿ ಚಾಕು ಹಿಡಿದು ಮನಬಂದಂತೆ ದಾಳಿ ನಡೆಸಿದ್ದು ಸುಮಾರು 14 ಮಂದಿ ಗಾಯಗೊಂಡಿದ್ದಾರೆ. ಜತೆಗೆ ಕಾರ್ಖಾನೆಯಲ್ಲಿ ರಾಸಾಯನಿಕವನ್ನು ಸಿಂಪಡಿಸಿದ್ದಾನೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಘಟನೆಯಲ್ಲಿ ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 14 ಜನರನ್ನು ತುರ್ತು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಶಿಜುವೊಕಾ ಪ್ರದೇಶದ ಮಿಶಿಮಾ ನಗರದ ಅಗ್ನಿಶಾಮಕ ಇಲಾಖೆಯ ಅಧಿಕಾರಿ ಟೊಮೊಹರು ಸುಗಿಯಾಮಾ ಹೇಳಿದ್ದಾರೆ.

ಕ್ಯೋಡೋ ಸುದ್ದಿ ಸಂಸ್ಥೆಯ ಪ್ರಕಾರ, ಟೋಕಿಯೊದ ಪಶ್ಚಿಮದಲ್ಲಿರುವ ಮಿಶಿಮಾದಲ್ಲಿರುವ ರಬ್ಬರ್ ಕಾರ್ಖಾನೆಯಲ್ಲಿ ವ್ಯಕ್ತಿಯೊಬ್ಬ ಚಾಕು ಹಿಡಿದು ದಾಳಿ ನಡೆಸಿದ್ದಾನೆ. ಘಟನೆ ಬಗ್ಗೆ ಮಾಹಿತಿ ಕಲೆ ಹಾಕಲಾಗುತ್ತದೆ. ಸದ್ಯ ದಾಳಿ ನಡೆಸಿದ ವ್ಯಕ್ತಿಯನ್ನು ವಶಕ್ಕೆ ಪಡೆಯಾಗಿದೆ. ದಾಳಿಕೋರ ಇದ್ದಕ್ಕಿದ್ದಂತೆ ಅಲ್ಲಿದ್ದವರಿಗೆ ಚಾಕುವಿನಿಂದ ಇರಿದಿದ್ದಾನೆ. ಜತೆಗೆ ರಾಸಾಯನಿಕವೊಂದನ್ನ ಸ್ಪ್ರೇ ಮಾಡಿದ್ದಾನೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಯೊಕೊಹಮಾ ರಬ್ಬರ್ ಕೋ. ಕಂಪನಿ ಇದಾಗಿದ್ದು, ಇಲ್ಲಿ ಬಸ್ ಮತ್ತು ಟ್ರಕ್‌ಗಳ ಟೈರ್ ತಯಾರಿಸಲಾಗುತ್ತದೆ. ಜಪಾನ್‌ನಲ್ಲಿರುವ ಕಠಿಣ ನಿಯಮಗಳ ಕಾರಣದಿಂದ ಅಪರಾಧಗಳ ಸಂಖ್ಯೆ ಸಾಮಾನ್ಯವಾಗಿ ಕಡಿಮೆ ಎಂದು ಹೇಳಲಾಗುತ್ತಿದೆ. ಇದರ ಹೊರತಾಗಿಯೂ ಆಗಾಗ ದುಷ್ಕರ್ಮಿಗಳಿಂದ ಆಕ್ರಮಣ ನಡೆಯುತ್ತಿರುತ್ತದೆ. 2022ರಲ್ಲಿ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಹತ್ಯೆ ಸೇರಿದಂತೆ ಹಲವು ಬಾರಿ ದಾಳಿ ನಡೆದಿದೆ.

## ಸಿರಿಯಾ: ಶುಕ್ರವಾರದ ನಮಾಜ್ ವೇಳೆ ಮಸೀದಿಯಲ್ಲಿ ಸ್ಫೋಟ

● 8 ಸಾವು, 18 ಮಂದಿಗೆ ಗಾಯ, ಎಲ್ಲೆಡೆ ಆಂಬ್ಯುಲೆನ್ಸ್ ಸೈರನ್‌ಗಳದ್ದೇ ಸದ್ದು: ತನಿಖೆ ಪ್ರಾರಂಭ

**ಸಿರಿಯಾ:** ಸಿರಿಯಾದ ಹೋಮ್ಸ್ ನಗರದಲ್ಲಿ ಶುಕ್ರವಾರದ ನಮಾಜ್ ವೇಳೆ ಮಸೀದಿಯೊಂದರಲ್ಲಿ ಭಾರಿ ಬಾಂಬ್ ಸ್ಫೋಟ ಸಂಭವಿಸಿದೆ. ಈ ಸ್ಫೋಟದಲ್ಲಿ 8 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದು, 18 ಮಂದಿ ಗಾಯಗೊಂಡಿದ್ದಾರೆ. ಒಂದು ವರ್ಷದ ಹಿಂದೆ ಇಸ್ಲಾಮಿಕ್ ಅಧಿಕಾರಿಗಳು ಅಧಿಕಾರ ವಹಿಸಿಕೊಂಡ ನಂತರ ಯಾವುದೇ ಪೂಜಾ ಸ್ಥಳದ ಮೇಲೆ ನಡೆದ ಎರಡನೇ ದಾಳಿ ಇದಾಗಿದೆ. ಇದಕ್ಕೂ ಮುನ್ನ ಜೂನ್ 2025ರಲ್ಲಿ ಡಮಾಸ್ಕಸ್‌ನ ಚರ್ಚ್ ಒಂದರಲ್ಲಿ ನಡೆದ ಆತ್ಮಾಹುತಿ ಬಾಂಬ್ ದಾಳಿಯಲ್ಲಿ 25 ಮಂದಿ ಸಾವನ್ನಪ್ಪಿದ್ದರು.

**ಇಮಾಮ್ ಅಲಿ ಬಿನ್ ಅಬಿ ತಾಲಿಬ್ ಮಸೀದಿಯಲ್ಲಿ ಸ್ಫೋಟ:** ಸರ್ಕಾರಿ ಸುದ್ದಿ ಸಂಸ್ಥೆ SANA, ಹೋಮ್ಸ್ ನಗರದ ವಾದಿ ಅಲ್-ದಹಾಬ್ ಪ್ರದೇಶದ 'ಇಮಾಮ್ ಅಲಿ ಬಿನ್ ಅಬಿ ತಾಲಿಬ್' ಮಸೀದಿಯೊಳಗೆ ಸ್ಫೋಟ ಸಂಭವಿಸಿರುವುದಾಗಿ ವರದಿ ಮಾಡಿದೆ. ಅದೇ ಸಮಯದಲ್ಲಿ, ಸಿರಿಯಾದ ಗೃಹ ಸಚಿವಾಲಯವು, ಶುಕ್ರವಾರದ ನಮಾಜ್ ವೇಳೆ ಭಯೋತ್ಪಾದಕರು ಮಸೀದಿಯನ್ನು ಗುರಿಯಾಗಿಸಿಕೊಂಡು ಸ್ಫೋಟ ನಡೆಸಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಿದೆ. ಸಿರಿಯಾದ ಅಂತರ್ಯುದ್ಧದ ಸಮಯದಲ್ಲಿ ಹೋಮ್ಸ್‌ನಲ್ಲಿ ಭಾರಿ ಕೋಮು ಹಿಂಸಾಚಾರ ನಡೆದಿತ್ತು.

**ಮಸೀದಿಯೊಳಗೆ ಇಟ್ಟಿದ್ದ ಸ್ಫೋಟಕದಿಂದ ದುರಂತ:** ಸಿರಿಯಾದ ಗೃಹ ಸಚಿವಾಲಯವು ಮಸೀದಿಯ ಸುತ್ತಲೂ ಬಿಗಿ ಭದ್ರತೆ ಏರ್ಪಡಿಸಿದೆ ಈ ದಾಳಿಯ ಅಪರಾಧಿಗಳನ್ನು ಪತ್ತೆಹಚ್ಚಲು ತನಿಖೆ ಮತ್ತು ಸಾಕ್ಷ್ಯ ಸಂಗ್ರಹವನ್ನು ಪ್ರಾರಂಭಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಪ್ರಾಥಮಿಕ ತನಿಖೆಯಿಂದ, ಮಸೀದಿಯೊಳಗೆ ಇರಿಸಲಾಗಿದ್ದ ಸ್ಫೋಟಕ ಸಾಧನಗಳಿಂದ ಸ್ಫೋಟ ಸಂಭವಿಸಿದೆ ಎಂದು ತಿಳಿದುಬಂದಿದೆ ಎಂದು ಸುದ್ದಿ ಸಂಸ್ಥೆ ಸನಾ ಭದ್ರತಾ ಮೂಲವನ್ನು ಉಲ್ಲೇಖಿಸಿ ವರದಿ ಮಾಡಿದೆ.



### ಉಗ್ರರ ಮೇಲೆ ಬಾಂಬ್ ದಾಳಿ: ಅಧಿಕೃತವಾಗಿ ಪ್ರಕಟ


**ನೈಜೀರಿಯಾದಲ್ಲಿರುವ ಐಸಿಸ್ ಉಗ್ರರನ್ನು ಗುರಿಯಾಗಿಸಿಕೊಂಡು ಅಮೆರಿಕ ಬಾಂಬ್ ದಾಳಿ ನಡೆಸಿದೆ. ಕ್ರೈಸ್ತರನ್ನು ಗುರಿಯಾಗಿಸಿ ನಡೆಸುತ್ತಿರುವ ದಾಳಿಗೆ ಪ್ರತಿಯಾಗಿ ಏರ್‌ಸ್ಟ್ರೈಕ್ ಮಾಡಲಾಗಿದೆ ಎಂದು ಅಮೆರಿಕ ತನ್ನ ದಾಳಿಯನ್ನು ಸಮರ್ಥಿಸಿಕೊಂಡಿದೆ. ತಮ್ಮ ಟ್ರೂಥ್ ಸಾಮಾಜಿಕ ಜಾಲತಾಣದಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬಾಂಬ್ ದಾಳಿ ನಡೆಸಿದ್ದನ್ನು ಅಧಿಕೃತವಾಗಿ ಪ್ರಕಟಿಸಿದ್ದಾರೆ. ಇಂದು ರಾತ್ರಿ ನನ್ನ ನಿರ್ದೇಶನದ ಮೇರೆಗೆ ವಾಯುವ್ಯ ನೈಜೀರಿಯಾದಲ್ಲಿ ಐಸಿಸ್ ಭಯೋತ್ಪಾದಕರ ವಿರುದ್ಧ ಅಮೆರಿಕ ಪ್ರಬಲ ಮತ್ತು ಮಾರಕ ದಾಳಿಯನ್ನು ಪ್ರಾರಂಭಿಸಿದೆ ಎಂದು ಬರೆದಿದ್ದಾರೆ. ಐಸಿಸ್ ಉಗ್ರರು ಮುಗ್ಧ ಕ್ರೈಸ್ತರನ್ನು ಹಲವು ವರ್ಷಗಳಿಂದ ಮತ್ತು ಶತಮಾನಗಳಿಂದ ಕಾಣದ ಮಟ್ಟದಲ್ಲಿ ಗುರಿಯಾಗಿಸಿಕೊಂಡು ಕ್ರೂರವಾಗಿ ಕೊಲ್ಲುತ್ತಿದ್ದಾರೆ. ಕ್ರೈಸ್ತರ ಹತ್ಯೆಯನ್ನು ನಿಲ್ಲಿಸದಿದ್ದರೆ ಅವರು ನರಕಯಾತನೆ ಅನುಭವಿಸಬೇಕಾಗುತ್ತದೆ ಎಂದು ನಾನು ಈ ಹಿಂದೆ ಎಚ್ಚರಿಕೆ ನೀಡಿದ್ದೆ. ಇಂದು ಬಾಂಬ್ ದಾಳಿ ನಡೆಸುವ ಮೂಲಕ ನರಕಯಾತನೆಯ ದರ್ಶನ ನೀಡಿದ್ದೇವೆ ಎಂದು ತಿಳಿಸಿದ್ದಾರೆ.**

**ಗೊಂದಲ ಮತ್ತು ಆತಂಕದ ವಾತಾವರಣ**

ಇದೇ ವೇಳೆ, ಈ ಪ್ರದೇಶದ ಸ್ಥಳೀಯ ನಿವಾಸಿಯೊಬ್ಬರು ತಮ್ಮ ಸುರಕ್ಷತೆಯ ದೃಷ್ಟಿಯಿಂದ ಹೆಸರು ಹೇಳಲಿಚ್ಚಿಸದೆ, ಶುಕ್ರವಾರದ ನಮಾಜ್ ವೇಳೆ ದೊಡ್ಡ ಸ್ಫೋಟದ ಸದ್ದು ಕೇಳಿಸಿತು, ನಂತರ ಪ್ರದೇಶದಲ್ಲಿ ಗೊಂದಲ ಮತ್ತು ಆತಂಕದ ವಾತಾವರಣ ನಿರ್ಮಾಣವಾಯಿತು ಎಂದು ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ. ಯಾರೂ ಮನೆಯಿಂದ ಹೊರಬರಲು ಧೈರ್ಯ ಮಾಡುತ್ತಿಲ್ಲ ಮತ್ತು ಎಲ್ಲೆಡೆ ಆಂಬ್ಯುಲೆನ್ಸ್ ಸೈರನ್‌ಗಳು ಕೇಳಿಬರುತ್ತಿವೆ.

# ಪೈರಸಿ ವಿರುದ್ಧ ರಮೇಶ್ ರೆಡ್ಡಿ ಆಕ್ರೋಶ

ಸ್ಯಾಂಡಲ್‌ವುಡ್‌ನಲ್ಲಿ '45' ಸಿನಿಮಾಗೆ ಪೈರಸಿ ಕಾಟ ಹೆಚ್ಚಾಯ್ತು. ನಿರ್ಮಾಪಕ ರಮೇಶ್ ರೆಡ್ಡಿ ಸುದ್ದಿಗೋಷ್ಠಿ ಮಾಡಿ ಆಕ್ರೋಶ ಹೊರಹಾಕಿದ್ದಾರೆ. ಡಿ.25 ರಂದು ರಾಜ್ಯಾದ್ಯಂತ ತೆರೆಕಂಡ 45 ಸಿನಿಮಾದಲ್ಲಿ ಶಿವರಾಜ್ ಕುಮಾರ್ , ಉಪೇಂದ್ರ , ರಾಜ್ ಬಿ ಶೆಟ್ಟಿ ನಟಿಸಿದ್ದಾರೆ. ಸಿನಿಮಾ ತೆರೆಕಂಡ ಕಡೆಗೆಲ್ಲ ಹೌಸ್ ಫುಲ್ ಪ್ರದರ್ಶನ ಕಾಣ್ತಿದೆ. ಈ ಸಂದರ್ಭದಲ್ಲಿ ಪೈರಸಿ ಮಾಡುತ್ತಿದ್ದಾರೆ ಎಂದು ಗುಡುಗಿದ್ದಾರೆ ನಿರ್ಮಾಪಕ ರಮೇಶ್ ರೆಡ್ಡಿ. ನಾವು ಸಮಾಜಕ್ಕೆ ಒಳ್ಳೆಯ ಸಂದೇಶ ನೀಡಲು ಬಿಗ್ ಬಜೆಟ್‌ನಲ್ಲಿ ಸಿನಿಮಾ ಮಾಡಿದ್ದೇವೆ. ನನಗೆ ಪೈರಸಿಗಳ ಲಿಂಕ್ ಗಳು ಬರುತ್ತಿವೆ. ಪೈರಸಿ ಮಾಡುವವರಿಗೆ ನಾನು ಎಚ್ಚರಿಕೆ ನೀಡ್ತಿದ್ದೇನೆ.



ಯಾರೇ ಪೈರಸಿ ಮಾಡಿದ್ರೂ ಶಿಕ್ಷೆ ಅನುಭವಿಸಬೇಕಾಗುತ್ತೆ. ಸಿನಿಮಾ ರಿಲೀಸ್ ಆಗಿ 24 ಗಂಟೆಯಲ್ಲೇ ಪೈರಸಿ ಮಾಡ್ತಿದ್ದಾರೆ.

ಪೈರಸಿ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ತೀವಿ. ಪಾಪ, ಪುಣ್ಯ ಕರ್ಮ ನಮ್ಮ ಸಿನಿಮಾದಲ್ಲಿದೆ. ದಯವಿಟ್ಟು ಚಿತ್ರ ಮಂದಿರದಲ್ಲೇ ಸಿನಿಮಾ ನೋಡಿ.

ಬೆಳಗ್ಗೆಯಿಂದ 3 ರಿಂದ 4 ಪೈರೆಸಿ ಲಿಂಕ್‌ನ ಡಿಲೀಟ್ ಮಾಡಿಸಿದ್ದೇವೆ ಎಂದಿದ್ದಾರೆ ನಿರ್ಮಾಪಕ ರಮೇಶ್ ರೆಡ್ಡಿ.

ಅಂದಹಾಗೆ ಗರುಡ ಪುರಾಣದ ಈ ಸಿನಿಮಾ ಬಗ್ಗೆ ಎಲ್ಲರೂ ಮೆಚ್ಚುಗೆ ವ್ಯಕ್ತಪಡಿಸ್ತಿದ್ದಾರೆ. ಟಿಕೆಟ್ ಸಿಕ್ತಿಲ್ಲ ಎಂದು ಜನ ನನಗೆ ಫೋನ್ ಮಾಡ್ತಿದ್ದಾರೆ. ಇಷ್ಟೆಲ್ಲಾ ಮಾಡಿದ್ರೂ ಪೈರಸಿ ಮಾಡ್ತಾರೆ ಅಂದ್ರೆ ನನಗೆ ತುಂಬಾ ಬೇಜಾರ್ ಆಗುತ್ತೆ. ಜನರಿಗೆ ಗರುಡ ಪುರಾಣದ ಸಂದೇಶ ನೀಡಬೇಕು ಎಂದು ಸಿನಿಮಾ ಮಾಡಿದ್ದೀವಿ. ಸಿನಿಮಾ ಬಗ್ಗೆ ನೆಗೆಟಿವ್ ಪ್ರಚಾರ ಮಾಡುವವರಿಗೆ, ಪೈರೆಸಿ ಮಾಡುವವರ ವಿರುದ್ಧ ಕಾನೂನು ಮೂಲಕ ಕ್ರಮ ಜರುಗಿಸ್ತೀವಿ. ಇದಕ್ಕಾಗಿ ಈಗ ಕೋರ್ಟ್ ಆರ್ಡರ್ ಕೂಡ ತಂದಿದ್ದೇವೆ. ಮೂರು ವರ್ಷ ಶ್ರಮ ಪಟ್ಟಿದ್ದೇವೆ. ದಯವಿಟ್ಟು ಪೈರಸಿ ಮಾಡಬೇಡಿ ಎಂದಿದ್ದಾರೆ ನಿರ್ಮಾಪಕರು.

ಇನ್ನು 45 ಸಿನಿಮಾ ಕನ್ನಡ ಭಾಷೆಯಲ್ಲಿ ಮಾತ್ರ ತೆರೆಕಂಡಿದೆ. ಎಲ್ಲಾ ಭಾಷೆಗಳಲ್ಲೂ ಜನವರಿ ಮೊದಲ ವಾರದಲ್ಲಿ ಸಿನಿಮಾ ರಿಲೀಸ್ ಮಾಡಲು ಪ್ಲ್ಯಾನ್ ಮಾಡಿಕೊಂಡಿದ್ದಾರೆ ನಿರ್ಮಾಪಕರು.




# ಕ್ರಿಸ್‌ಮಸ್ ಪಾರ್ಟಿ ಕೊಟ್ಟ ಮೇಘನಾ

ನಟಿ ಮೇಘನಾ ರಾಜ್ ಅವರು ಪ್ರತಿ ವರ್ಷ ಕ್ರಿಸ್‌ಮಸ್ ಹಬ್ಬವನ್ನು ಅದ್ದೂರಿಯಾಗಿ ಆಚರಿಸುತ್ತಾರೆ. ಈ ವರ್ಷವೂ ಆ ಸಂಪ್ರದಾಯವನ್ನು ಮುಂದುವರಿಸಿಕೊಂಡು ಹೋಗಿದ್ದಾರೆ. ಅವರ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿ ಗಮನ ಸೆಳೆದಿವೆ. ಈ ಫೋಟೋಗೆ ಫ್ಯಾನ್ಸ್ ಕಡೆಯಿಂದ ನಾನಾ ರೀತಿಯ ಕಮೆಂಟ್‌ಗಳು ಬಂದಿವೆ. ಎಲ್ಲರೂ ಮೇಘನಾಗೆ ವಿಶ್ ಮಾಡಿದ್ದಾರೆ. ನಟಿ ಮೇಘನಾ ರಾಜ್ ಅವರು ಖುಷಿಯಿಂದ ಕ್ರಿಸ್‌ಮಸ್ ಹಬ್ಬ ಆಚರಿಸಿದ್ದಾರೆ. ಅವರು ಕ್ರಿಸ್‌ಮಸ್ ಗಿಡವನ್ನು ಮಾಡಿ ಅದನ್ನು ಬೆಳಕಿನಿಂದ ಅಲಂಕರಿಸಿದ್ದಾರೆ. ಇಷ್ಟೇ ಅಲ್ಲ, ಎಲ್ಲರನ್ನೂ ಕರೆದು ಅವರು ಖುಷಿಯನ್ನು ಮತ್ತಷ್ಟು ಹೆಚ್ಚಿಸಿದ್ದಾರೆ. ನಟಿ ಮೇಘನಾ ರಾಜ್ ಅವರು ಖುಷಿಯಿಂದ ಕ್ರಿಸ್‌ಮಸ್ ಹಬ್ಬ ಆಚರಿಸಿದ್ದಾರೆ. ಅವರು ಕ್ರಿಸ್‌ಮಸ್ ಗಿಡವನ್ನು ಮಾಡಿ ಅದನ್ನು ಬೆಳಕಿನಿಂದ ಅಲಂಕರಿಸಿದ್ದಾರೆ.

ಇಷ್ಟೇ ಅಲ್ಲ, ಎಲ್ಲರನ್ನೂ ಕರೆದು ಅವರು ಖುಷಿಯನ್ನು ಮತ್ತಷ್ಟು ಹೆಚ್ಚಿಸಿದ್ದಾರೆ. ಮೇಘನಾ ರಾಜ್ ಅವರು ಪ್ರತಿ ವರ್ಷವೂ ಅದ್ದೂರಿಯಾಗಿ ಕ್ರಿಸ್‌ಮಸ್ ಆಯೋಜನೆ ಮಾಡುತ್ತಾರೆ. ಈ ವರ್ಷವೂ ಅದು ಮುಂದುವರಿದಿದೆ. ಮನೆಯಲ್ಲೇ ಪಾರ್ಟಿಯನ್ನು ಆಯೋಜನೆ ಮಾಡಿದ್ದರು ಮೇಘನಾ. ಈ ಪಾರ್ಟಿಗೆ ಚಿತ್ರರಂಗದ ಸೆಲೆಬ್ರಿಟಿಗಳು ಬಂದಿದ್ದರು. ಮೇಘನಾ ರಾಜ್ ತಾಯಿ ಪ್ರಮಿಳಾ ಜೋಶಾಯ್, ಮಾಳವಿಕಾ, ರಕ್ಷಿತಾ ಪ್ರೇಮ್, ಶ್ರುತಿ ಹಾಗೂ ಅವರ ಮಗಳು ಈ ಪಾರ್ಟಿಯಲ್ಲಿ ಭಾಗಿ ಆಗಿದ್ದರು. ಎಲ್ಲರೂ ಒಟ್ಟಾಗಿ ಪೋಸ್ ಕೊಟ್ಟು ಗಮನ ಸೆಳೆದಿದ್ದಾರೆ.

# ತಗ್ಗಿಲ್ಲ ಧುರಂಧರ್ ಹವಾ



ಯಾವುದೇ ಹೊಸ ಸಿನಿಮಾಗಳು ಬಿಡುಗಡೆ ಆದರೂ ಕೂಡ 'ಧುರಂಧರ್' ಸಿನಿಮಾದ ಕಲೆಕ್ಷನ್ ತಗ್ಗುತ್ತಲೇ ಇಲ್ಲ. 'ಅವತಾರ್ 3', 'ಮಾರ್ಕ್', '45', 'ದಿ ಡೆವಿಲ್' ಸಿನಿಮಾಗಳ ಎದುರಲ್ಲಿ 'ಧುರಂಧರ್' ಚಿತ್ರ ಅಬ್ಬರಿಸುತ್ತಿದೆ. ವಿಶ್ವಾದ್ಯಂತ ಈ ಸಿನಿಮಾದ ಕಲೆಕ್ಷನ್ ಈಗಾಗಲೇ ಸಾವಿರ ಕೋಟಿ ರೂಪಾಯಿ ದಾಟಿದೆ. ಯಶಸ್ವಿ ಪ್ರದರ್ಶನ ಕಾಣುತ್ತಿದೆ.

ನಟ ರಣವೀರ್ ಸಿಂಗ್ ಅಭಿನಯದ 'ಧುರಂಧರ್' ಸಿನಿಮಾ ಬಿಡುಗಡೆ ಆಗಿ 22 ದಿನಗಳು ಕಳೆದಿವೆ. ಈ ಚಿತ್ರ ತೆರೆಕಂಡ ಬಳಿಕ ಸ್ಟಾರ್ ನಟರ ಹಲವು ಸಿನಿಮಾಗಳು ಬಿಡುಗಡೆ ಆದವು. ಹಾಗಿದ್ದರೂ ಕೂಡ 'ಧುರಂಧರ್' ಚಿತ್ರದ ಹವಾ ಕಡಿಮೆ ಆಗಿಲ್ಲ. ಇಂದಿಗೂ ಕೂಡ ಈ ಸಿನಿಮಾ ಪ್ರತಿ ದಿನ ಬಹುಕೋಟಿ ರೂಪಾಯಿ ಕಲೆಕ್ಷನ್ ಮಾಡುತ್ತಿದೆ. ಈಗಾಗಲೇ ಭಾರತದಲ್ಲಿ ಈ ಸಿನಿಮಾದ ಕಲೆಕ್ಷನ್ 633 ಕೋಟಿ ರೂಪಾಯಿ ಕೋಟಿ ಆಗಿದೆ. ಇನ್ನೂ ಹಲವು ದಿನಗಳ ಕಾಲ ಕಲೆಕ್ಷನ್ ಅಬ್ಬರ ಮುಂದುವರಿಯಲಿದೆ. ಪ್ರತಿ ವೀಕೆಂಡ್‌ನಲ್ಲಿ 'ಧುರಂಧರ್' ಸಿನಿಮಾ ಭರ್ಜರಿ ಕಲೆಕ್ಷನ್ ಮಾಡುತ್ತಾ ಬಂದಿದೆ. ಕ್ರಿಸ್ಮಸ್ ದಿನವೂ ಈ ಚಿತ್ರ ಅತ್ಯುತ್ತಮವಾಗಿ ಕಮಾಯಿ ಮಾಡಲಿದೆ ಎಂದು ನಿರೀಕ್ಷಿಸಲಾಗಿತ್ತು. ಅದು ನಿಜವಾಗಿದೆ. ಕ್ರಿಸ್ಮಸ್ ಹಬ್ಬದ ದಿನ, ಅಂದರೆ ಡಿಸೆಂಬರ್ 25ರಂದು ಸರ್ಕಾರಿ ರಜೆ ಇರುವ ಕಾರಣ ಹೆಚ್ಚಿನ ಸಂಖ್ಯೆಯ ಪ್ರೇಕ್ಷಕರು ಚಿತ್ರಮಂದಿರಕ್ಕೆ ಬಂದಿದ್ದಾರೆ. ಅದು 'ಧುರಂಧರ್' ಸಿನಿಮಾಗೆ ಪ್ಲಸ್ ಆಗಿದೆ. ಡಿಸೆಂಬರ್ 25ರಂದು 'ಧುರಂಧರ್' ಚಿತ್ರಕ್ಕೆ ಬರೋಬ್ಬರಿ 26 ಕೋಟಿ ರೂಪಾಯಿ ಕಲೆಕ್ಷನ್ ಆಗಿದೆ. ಬಿಡುಗಡೆ ಆಗಿ 21ನೇ ದಿನಕ್ಕೆ ಇಷ್ಟು ದೊಡ್ಡ ಮೊತ್ತದ ಕಲೆಕ್ಷನ್ ಮಾಡುವುದು ಎಂದರೆ ತಮಾಷೆಯೇ ಅಲ್ಲ. ಇದೇ ದಿನ ಕನ್ನಡ ಮತ್ತು ತಮಿಳಿನಲ್ಲಿ 'ಮಾರ್ಕ್' ಸಿನಿಮಾ ಬಿಡುಗಡೆ ಆಗಿದೆ. '45' ಚಿತ್ರ ಕೂಡ ತೆರೆಕಂಡಿದೆ. ಆ ಸಿನಿಮಾಗಳ ಪೈಪೋಟಿ ನಡುವೆಯೂ 'ಧುರಂಧರ್' ಮೇಲುಗೈ ಸಾಧಿಸಿದೆ.





# ಕೆಡಿ ರಿಲೀಸ್ ಡೇಟ್ ಔಟ್

ಧ್ರುವ ಸರ್ಜಾ ಹಾಗೂ ಪ್ರೇಮ್ ಸಿನಿಮಾ ಯಾವಾಗ ತೆರೆಗೆ ಬರಲಿದೆ ಎಂಬ ಪ್ರಶ್ನೆಗೆ ಈಗ ಉತ್ತರ ಸಿಕ್ಕಿದೆ. ಎರಡು ವರ್ಷಗಳಿಂದ ಕೆಡಿ ಸಿನಿಮಾ ಯಾವಾಗ ಬರುತ್ತೆ ಅಂತ ಕಾದು ಕಾದು ಸುಸ್ತಾಗಿದ್ದ ಅಭಿಮಾನಿಗಳಿಗೆ ರಿಲೀಸ್ ಡೇಟ್ ಅನೌನ್ಸ್ ಮಾಡಿದೆ ಚಿತ್ರತಂಡ. ಹೌದು, ಕೆಡಿ ಸಿನಿಮಾ 2026ರ ಏಪ್ರಿಲ್ 30ರಂದು ತೆರೆಗೆ ಬರಲಿದೆ. ಈ ಘೋಷಣೆಯ ಜೊತೆ ಸಿನಿಮಾದ 3ನೇ ಹಾಡು ಅಣ್ತಮ್ಮ ಜೋಡೆತ್ತು ಕಣೋ ಬಿಡುಗಡೆಯಾಗಿದೆ. ಮಂಜುನಾಥ್ ಸಾಹಿತ್ಯವಿರುವ ಈ ಹಾಡಿಗೆ ಧ್ವನಿಯಾಗಿದ್ದಾರೆ ನಿರ್ದೇಶಕ ಪ್ರೇಮ್. ಅಣ್ಣ ತಮ್ಮಂದಿರ ಬಾಂಧವ್ಯದ ಕುರಿತಾದ ಹಾಡು ರಿಲೀಸ್ ಆಗಿದ್ದು, ಸಖತ್ ರೆಸ್ಪಾನ್ಸ್ ಸಿಗುತ್ತಿದೆ. ಕೆಡಿ ಸಿನಿಮಾದ ಹಾಡುಗಳು ಒಂದಕ್ಕಿಂತ ಒಂದು ವಿಭಿನ್ನವಾಗಿದ್ದು, ಅಣ್ತಮ್ಮ ಜೋಡೆತ್ತು ಕಣೋ ಹಾಡು ಕೂಡಾ ಕಮಾಲ್ ಮಾಡಲಿದೆ. ಧ್ರುವ ಸರ್ಜಾ, ರವಿಚಂದ್ರನ್, ರಮೇಶ್ ಅರವಿಂದ್, ಸಂಜಯ್ ದತ್, ಶಿಲ್ಪಾ ಶೆಟ್ಟಿ, ರೀಷ್ಮಾ ನಾಣಯ್ಯ ಸೇರಿದಂತೆ ದೊಡ್ಡ ತಾರಾಗಣವಿದೆ. ಕೆವಿಎನ್ ಪ್ರೊಡಕ್ಷನ್ ಬ್ಯಾನರ್‌ನಲ್ಲಿ ತಯಾರಾಗಿರುವ ಕೆಡಿ ಸಿನಿಮಾ ಏಪ್ರಿಲ್ ತಿಂಗಳಾಂತ್ಯಕ್ಕೆ ತೆರೆಗೆ ಬರಲಿದೆ.

# ವಿದೇಶದಿಂದ ವಿಶ್ ಮಾಡಿದ ರಶ್ಮಿಕಾ!





ಜೋಡಿಹಕ್ಕಿಗಳಾದ ರಶ್ಮಿಕಾ ಮಂದಣ್ಣ ಹಾಗೂ ವಿಜಯ್ ದೇವರಕೊಂಡ ಹೊಸ ವರ್ಷಾರಂಭವನ್ನ ವಿದೇಶದಲ್ಲಿ ಕಳೆಯಲು ಈಗಾಗಲೇ ವಿದೇಶಕ್ಕೆ ತೆರಳಿದ್ದಾರೆ. ಇದೀಗ ವಿದೇಶದಿಂದಲೇ ರಶ್ಮಿಕಾ ಮಂದಣ್ಣ ಕ್ರಿಸ್‌ಮಸ್‌ಗೆ ಶುಭ ಹಾರೈಸಿ ಫೋಟೋಗಳನ್ನ ಪೋಸ್ಟ್ ಮಾಡಿದ್ದಾರೆ. ಫೋಟೋ ತೆಗೆದಿದ್ದು, ವಿಜಯ್ ದೇವರಕೊಂಡನಾ ಎಂದು ನೆಟ್ಟಿಗರು ಪ್ರಶ್ನೆ ಕೇಳುತ್ತಿದ್ದಾರೆ. ಕಳೆದ ಎರಡು ದಿನದ ಹಿಂದಷ್ಟೇ ರಶ್ಮಿಕಾ ಹಾಗೂ ವಿಜಯ್ ಹೈದ್ರಾಬಾದ್‌ನಿಂದ ವಿದೇಶ ಪ್ರಯಾಣ ಮಾಡಿದ್ದರು. ಇಬ್ಬರೂ ಒಟ್ಟಿಗೆ ಕಾಣಿಸ್ಕೊಂಡಿಲ್ಲ. ಆದರೆ, ಒಂದೇ ಸಮಯಕ್ಕೆ ಕಾಣಿಸ್ಕೊಂಡಿದ್ದಾರೆ. ಹೀಗೆ ತಮ್ಮ ಪ್ರೀತಿಯನ್ನು ಅಧಿಕೃತವಾಗಿ ಘೋಷಿಸದೇ ನೋಡುಗರಿಗೆ ಚಳ್ಳೆಹಣ್ಣು ತಿನ್ನಿಸುತ್ತಿದ್ದಾರೆ. ಆದರೆ, ವಿದೇಶದಲ್ಲಿ ಫೋಟೋ ಪೋಸ್ಟ್ ಮಾಡುವುದನ್ನ ಮಾತ್ರ ಮರೆಯುವುದಿಲ್ಲ.

ಇದೀಗ ವಿದೇಶದಲ್ಲಿ ವರ್ಷದ ಕೊನೆಯನ್ನ ಎಂಜಾಯ್ ಮಾಡ್ತಿರೋ ಜೋಡಿ ಇದುವರೆಗೂ ಹೆಚ್ಚಿನ ಫೋಟೋಗಳನ್ನ ರಿವೀಲ್ ಮಾಡಿಲ್ಲ. ವಿಜಯ್ ದೇವರಕೊಂಡ ಸೀಕ್ರೆಟ್ ಕಾಪಾಡಿಕೊಂಡಿದ್ರೆ, ರಶ್ಮಿಕಾ ಆಲ್‌ರೆಡಿ ಫೋಟೋ ಪೋಸ್ಟ್ ಮಾಡಿದ್ದಾರೆ. ಆದರೆ, ನೆಟ್ಟಿಗರು ಮಾತ್ರಾ ವಿಜಯ್ ಇನ್‌ಸ್ಟಾಗ್ರಾಂ ಫೋಟೋಗಳನ್ನ ನೋಡಲು ಕಾದು ಕುಳಿತಿದ್ದಾರೆ. ಹೀಗೆ ವಿಜಯ್ ರಶ್ಮಿಕಾ ಕಣ್ಣಾಮುಚ್ಚಾಲೆ ಆಡುತ್ತಿದ್ದಾರೆ.

# ಕೊಹ್ಲಿ ಅಬ್ಬರಕ್ಕೆ ದಾಖಲೆಗಳು ಪುಡಿಪುಡಿ..

37ರ ವಯಸಿನಲ್ಲೂ ಕಿಂಗ್ ಕೊಹ್ಲಿ ದರ್ಬಾರ್ ನಡೆಸ್ತಿದ್ದಾರೆ. ಏಕದಿನ ಮತ್ತು ಲಿಸ್ಟ್ ಎ ಕ್ರಿಕೆಟ್‌ನಲ್ಲಿ ವಿರಾಟ್‌ರನ್ನ ಕಟ್ಟಿಹಾಕೋರೇ ಇಲ್ಲದಂತಾಗಿದೆ. ಕೊಹ್ಲಿ ಹೊಡೆಯೋ ಒಂದೊಂದು ರನ್ ದಾಖಲೆಯ ಪುಟಗಳಲ್ಲಿ ಸೇರುತ್ತಿವೆ. ಕೊಹ್ಲಿ ಅಬ್ಬರಕ್ಕೆ ದಾಖಲೆಗಳು ಪುಡಿ ಪುಡಿ ಆಗ್ತಿವೆ. ಡ್ರೀಮ್ ಫ್ರಾರ್ಮ್‌ನಲ್ಲಿರುವ ವಿರಾಟ್ ಅಭಿಮಾನಿಗಳಿಗೆ ಫುಲ್ ಕಿಕ್ ನೀಡ್ತಿದ್ದಾರೆ. ಅದೆಷ್ಟೋ ದಾಖಲೆಗಳು! ಅದೆಷ್ಟೋ ಸಾಧನೆಗಳು! ನೆನಪಿಡುವಂತಹ ಅದೆಷ್ಟೊ ಇನ್ನಿಂಗ್ಸ್‌ಗಳು. ನಿಜ, ಕೊಹ್ಲಿ ಮಾಡಿರೋ ರೆಕಾರ್ಡ್ಸ್ ಹತ್ತಿರ ಯಾರೂ ಬರೋಕೆ ಸಾಧ್ಯವಿಲ್ಲ. ಆದ್ರೂ ವಿರಾಟ್ ಕೊಹ್ಲಿಯ ದಾಹ, ಹಸಿವು ಕಿಂಚಿತ್ತು ಕಡಿಮೆ ಆಗ್ಲಿಲ್ಲ. ಲೆಕ್ಕವಿಲ್ಲದಷ್ಟು ದಾಖಲೆಗಳು ಬರೆದ್ರೂ ಇನ್ನೂ ಸಾಧನೆ ಮಾಡಬೇಕು ಅನ್ನೋ ಹಂಬಲ ಕಿಂಗ್ ಕೊಹ್ಲಿಯದ್ದು. ಈ ಮನಸ್ಥಿತಿಯಿಂದಲೇ ವಿರಾಟ್ ಶಿಖರದೆತ್ತರಕ್ಕೆ ಬೆಳೆದಿರೋದು. ಐಪಿಎಲ್ ಸೀಸನ್-18ರ ಬಳಿಕ ಆಸ್ಟ್ರೇಲಿಯಾ ಏಕದಿನ ಸರಣಿ ಆರಂಭಿಸಿದ ವಿರಾಟ್ ಕೊಹ್ಲಿ, ಮೊದಲೆರಡು ಪಂದ್ಯಗಳಲ್ಲಿ ಡಕೌಟ್ ಆಗಿ ವ್ಯಾಪಕ ಟೀಕೆಗೆ ಗುರಿಯಾಗಿದ್ರು. ಪರ್ತ್, ಅಡಿಲೇಡ್‌ನಲ್ಲಿ ಯಡವಿದ ವಿರಾಟ್, ಒತ್ತಡದಿಂದಲೇ ಆಸಿಸ್ ಪ್ರವಾಸ ಶುರುಮಾಡಿದ್ರು. ಸಿಡ್ನಿ ಏಕದಿನ ಪಂದ್ಯದಲ್ಲಿ ವಿರಾಟ್, ಆಸಿಸ್‌ನ ಡೇಂಜರಸ್ ಬೌಲರ್‌ಗಳಿಗೆ ನೀರು ಕುಡಿಸಿದ್ರು.



ಮಿಚ್ಚೆಲ್ ಸ್ಟಾರ್ಕ್, ಜೋಷ್ ಹೇಝಲ್‌ವುಡ್, ಜೋಷ್ ಇಂಗ್ಲಿಸ್, ಡಂಝ್ಯಾಂಪರಂತಹ ಸೂಪರ್‌ಸ್ಟಾರ್ ಬೌಲರ್‌ಗಳಿಗೆ ದಿಟ್ಟ ಉತ್ತರ ನೀಡಿದ್ರು. 81 ಎಸೆತಗಳಲ್ಲಿ ಅಜೇಯ 74 ರನ್ ಸಿಡಿಸಿ ತಂಡಕ್ಕೆ ಗೆಲುವು ತಂದುಕೊಟ್ರು. ಸೌತ್ ಆಫ್ರಿಕಾ ವಿರುದ್ಧದ ಮೊದಲ ಏಕದಿನ ಪಂದ್ಯ ವಿರಾಟ್ ಅಬ್ಬರಿಸಿದ್ರು. ರಾಂಚಿಯಲ್ಲಿ ಆಫ್ರಿಕನ್ನರ ದಾಳಿಯನ್ನ ಚಿಂದಿ ಉಡಾಯಿಸಿದ ಕೊಹ್ಲಿ, 135 ರನ್ ದಾಖಲಿಸಿದ್ರು.11 ಬೌಂಡರಿ, 7 ಸಿಕ್ಸರ್‌ಗಳು ಕೊಹ್ಲಿ ಬ್ಯಾಟ್‌ನಿಂದ ದಾಖಲಾಗಿತ್ತು.

ಛತ್ತೀಸ್‌ಗಢದ ರಾಜಧಾನಿ ರಾಯ್‌ಪುರ್‌ನಲ್ಲಿ ಕಿಂಗ್ ಕೊಹ್ಲಿ, ರಾಯಲ್ ಇನ್ನಿಂಗ್ಸ್ ಆಡಿದ್ರು. ಹರಿಣ ಬೌಲರ್‌ಗಳ ಬೇಟೆಯಾಡಿದ ವಿರಾಟ್, 102 ರನ್ ಕಲೆಹಾಕಿದ್ರು. ಟೂರ್ನಿಯಲ್ಲಿ ಸತತ 2ನೇ ಶತಕ ಸಿಡಿಸಿ ಮಿಂಚಿದ್ರು.

ವಿಶಾಖಪಟ್ಟಣಂ ಏಕದಿನ ಪಂದ್ಯದಲ್ಲೂ ಕೊಹ್ಲಿ ದರ್ಬಾರ್ ನಡೆಸಿದ್ರು. ವೈಜಾಗ್‌ನಲ್ಲಿ ಆಫ್ರಿಕನ್ನರ ಎದುರು ವೀರಾವೇಶ ತೋರಿದ ಕೊಹ್ಲಿ, ಬಿರುಸಿನ ಬ್ಯಾಟಿಂಗ್ ನಡೆಸಿದ್ರು. ಕೇವಲ 45 ಎಸೆತಗಳಲ್ಲಿ 65 ರನ್ ಬಾರಿಸಿದ್ರು.





# ಎರಡನೇ ಪಂದ್ಯದಲ್ಲಿ ಮುಗ್ಗರಿಸಿದ ರೋಹಿತ್

ಮಾಜಿ ನಾಯಕ ರೋಹಿತ್ ಶರ್ಮಾ ಮೊದಲ ಪಂದ್ಯದಲ್ಲಿ ಅದ್ಭುತ ಶತಕ ಬಾರಿಸಿದ್ದರು. ಸಿಕ್ಕಿಂ ವಿರುದ್ಧದ ಪಂದ್ಯಾವಳಿಯ ಆರಂಭಿಕ ಪಂದ್ಯದಲ್ಲಿ ರೋಹಿತ್ 155 ರನ್ ಬಾರಿಸಿದ್ದರು. ಪರಿಣಾಮವಾಗಿ, ಎರಡನೇ ಪಂದ್ಯದಲ್ಲಿ ರೋಹಿತ್ ಅವರಿಂದ ಇದೇ ರೀತಿಯ ಬ್ಯಾಟಿಂಗ್ ಪ್ರದರ್ಶನ ನಿರೀಕ್ಷಿಸಲಾಗಿತ್ತು. ಆದರೆ ಎರಡನೇ ಪಂದ್ಯದಲ್ಲಿ ನಿರಾಸೆ ಮೂಡಿಸಿದ ರೋಹಿತ್, ಉತ್ತರಾಖಂಡ್ ವಿರುದ್ಧದ ಎರಡನೇ ಪಂದ್ಯದಲ್ಲಿ ಗೋಲ್ಡನ್ ಡಕ್‌ಗೆ ಔಟಾದರು. ಅಂದರೆ ಈ ಪಂದ್ಯದಲ್ಲಿ ರೋಹಿತ್ ಖಾತೆ ತೆರೆಯದೆಯೇ ಮೊದಲ ಎಸೆತದಲ್ಲೇ ಔಟಾದರು.

ಡಿಸೆಂಬರ್ 24 ರಂದು ಜೈಪುರದಲ್ಲಿ ಪ್ರಾರಂಭವಾದ ಈ ಪಂದ್ಯಾವಳಿಯ ಮೊದಲ ಪಂದ್ಯದಲ್ಲಿ ರೋಹಿತ್ ಶರ್ಮಾ ಕೇವಲ 62 ಎಸೆತಗಳಲ್ಲಿ ಶತಕ ಸಿಡಿಸಿ, 94 ಎಸೆತಗಳಲ್ಲಿ 155 ರನ್ ಸಿಡಿಸಿದ್ದರು. ರೋಹಿತ್ ತಮ್ಮ ಇನ್ನಿಂಗ್ಸ್‌ನಲ್ಲಿ 18 ಬೌಂಡರಿ ಮತ್ತು ಒಂಬತ್ತು ಸಿಕ್ಸರ್‌ಗಳನ್ನು ಬಾರಿಸಿದ್ದರು. ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆದ ಈ ಪಂದ್ಯವನ್ನು ಸುಮಾರು 20,000 ಪ್ರೇಕ್ಷಕರು ವೀಕ್ಷಿಸಿದ್ದರು. ಹೀಗಾಗಿ ಎರಡನೇ ಪಂದ್ಯದಲ್ಲಿಯೂ ರೋಹಿತ್ ಅಬ್ಬರಿಸುವುದನ್ನು ನೋಡಲು ಸಾವಿರಾರು ಅಭಿಮಾನಿಗಳು ಸವಾಯಿ ಮಾನ್ಸಿಂಗ್ ಕ್ರೀಡಾಂಗಣಕ್ಕೆ ಆಗಮಿಸಿದ್ದರು.

ಅದರಂತೆ ಮುಂಬೈ ತಂಡ ಕೂಡ ಮೊದಲು ಬ್ಯಾಟಿಂಗ್ ಆರಂಭಿಸಿತು. ಆದರೆ ರೋಹಿತ್ ಬ್ಯಾಟಿಂಗ್ ನೋಡಲು ಕಾದು ಕುಳಿತಿದ್ದ ಅಭಿಮಾನಿಗಳ ಸಂತೋಷ ಕೇವಲ ಆರು ಎಸೆತಗಳಲ್ಲಿ ಮಾಯವಾಯಿತು. ಇನ್ನಿಂಗ್ಸ್‌ನ ಮೊದಲ ಓವರ್‌ನ ಕೊನೆಯ ಎಸೆತದಲ್ಲಿ ಸ್ಟ್ರೈಕ್‌ಗೆ ಬಂದ ರೋಹಿತ್ ಶರ್ಮಾ, ತಮ್ಮ ಮೊದಲ ಎಸೆತದಲ್ಲೇ ಖಾತೆ ತೆರೆಯದೆಯೇ ವಿಕೆಟ್ ಒಪ್ಪಿಸಿದರು. ಉತ್ತರಾಖಂಡ ವೇಗಿ ದೇವೇಂದ್ರ ಬೋರಾ ಅವರ ಎಸೆತದಲ್ಲಿ ರೋಹಿತ್ ಕ್ಯಾಚಿತ್ತು ನಿರ್ಗಮಿಸಿದರು.

ಈ ಪಂದ್ಯದಲ್ಲಿ ರೋಹಿತ್ ಶರ್ಮಾ ವಿಫಲರಾದರೂ, ತಂಡದ ಉಳಿದ ಆಟಗಾರರು ಉತ್ತಮ ಪ್ರದರ್ಶನ ನೀಡಿದರು. ಇದರ ಪರಿಣಾಮದಿಂದಾಗಿ ಮುಂಬೈ ತಂಡ ನಿಗದಿತ 50 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 331 ರನ್ ಕಲೆಹಾಕಿತು. ತಂಡದ ಪರ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಹಾರ್ದಿಕ್ ತಮೋರೆ 93 ರನ್‌ಗಳ ಇನ್ನಿಂಗ್ಸ್ ಆಡಿದರೆ, ಸಹೋದರರಾದ ಸರ್ಫರಾಜ್ ಖಾನ್ ಹಾಗೂ ಮುಶೀರ್ ಖಾನ್ ತಲಾ 55 ರನ್‌ಗಳ ಇನ್ನಿಂಗ್ಸ್ ಆಡಿದರು.



# ಕೋಚ್ ಸಂಭಾವನೆ 5 ಕೋಟಿ!

ಐಪಿಎಲ್ ಕೋಚ್‌ಗಳಿಗೆ ಪ್ರತಿ ಸೀಸನ್‌ಗೆ ಸಿಗೋ ಸಂಭಾವನೆ ಎಷ್ಟು ಐಪಿಎಲ್. ಇದು ಮಿಲಿಯನ್ ಡಾಲರ್ ಟೂರ್ನಿ. ಇಲ್ಲಿ ಲಕ್ಷಗಳಿಗೆ ಬೆಲೆ ಇಲ್ಲ. ಇಲ್ಲೇನಿದ್ರೂ ಕೋಟಿಗಳದ್ದೇ ದರ್ಬಾರ್. ಇಂಡಿಯನ್ ಪೈಸಾ ಲೀಗ್‌ನಲ್ಲಿ ಆಟಗಾರರಷ್ಟೇ ಅಲ್ಲ, ತಂಡದ ಸಪೋರ್ಟಿಂಗ್ ಸ್ಟಾಫ್ ಸಹ ಕೋಟಿ ಕೋಟಿ ಹಣ ಸಂಭಾವನೆ ಪಡೆಯುತ್ತಾರೆ. ಒಂದೊಂದು ಫ್ರಾಂಚೈಸಿ ಒಂದೊಂದು ಲೆಕ್ಕದಲ್ಲಿ, ಕೋಚ್‌ಗಳಿಗೆ ಸ್ಯಾಲರಿ ಫಿಕ್ಸ್ ಮಾಡಿರುತ್ತದೆ. ಕೇವಲ ಒಂದುವರೆ ತಿಂಗಳಿಗೆ ಕೋಚ್‌ಗಳ ಅಕೌಂಟ್‌ಗೆ, ಕೋಟಿ ಕೋಟಿ ಹಣ ಬಂದು ಬೀಳುತ್ತದೆ.

ಚೆನ್ನೈ ಸೂಪರ್‌ಕಿಂಗ್ಸ್ ತಂಡದ ಕೋಚ್ ಸ್ಟೀಫನ್ ಫ್ಲೆಮಿಂಗ್ ಜರ್ನಿಯೇ, ಕನ್ಸಿಸ್ಟೆನ್ಸಿ ಮತ್ತು ಎಕ್ಸಲೆನ್ಸ್. ಸಿಎಸ್‌ಕೆ ತಂಡಕ್ಕೆ 5 ಟ್ರೋಫಿ ಗೆಲ್ಲಿಸಿಕೊಟ್ಟಿರುವ ಫ್ಲೆಮಿಂಗ್, 10 ಬಾರಿ ತಂಡವನ್ನ ಐಪಿಎಲ್ ಫೈನಲ್ ಪ್ರವೇಶಿಸಿದ್ದಾರೆ. ನ್ಯೂಜಿಲೆಂಡ್‌ನ ಈ ಅನುಭವಿ ಕೋಚ್ ಸೀಸನ್‌ಗೆ 5 ಕೋಟಿ ರೂಪಾಯಿ ಸಂಭಾವನೆ ಪಡೆಯುತ್ತಾರೆ.

ಕುಮಾರ್ ಸಂಗಕ್ಕರ. ರಾಜಸ್ಥಾನ್ ರಾಯಲ್ಸ್ ತಂಡದ ರಾಯಲ್ ಕೋಚ್. ಆರ್‌ಆರ್ ಕೋಚ್ ಆಗಿ ಸಂಗಕ್ಕರ, ಯುವ ಪಡೆಗೆ ಶಕ್ತಿ ತುಂಬಿದ್ದಾರೆ. ಆರ್‌ಆರ್ ಕೋಚಿಂಗ್ ಸ್ಟಾಫ್ ಅಪ್‌ಗ್ರೇಡ್ ಮಾಡಿರುವ ಸಂಗಕ್ಕರ, ಹೊಸ ನಾಯಕನೊಂದಿಗೆ ನೂತನ ಸೀಸನ್ ಎದುರು ನೋಡ್ತಿದ್ದಾರೆ. ರಾಹುಲ್ ದ್ರಾವಿಡ್ ಬಳಿಕ ಆರ್‌ಆರ್‌ಗೆ ಮರಳಿರುವ ಸಂಗಾಕ್ಕರ, ಸೀಸನ್-19ರಲ್ಲಿ 5 ಕೋಟಿ ಸಂಭಾವನೆ ಪಡೆಯಲಿದ್ದಾರೆ.

# 15 ಸಿಕ್ಸರ್.. 16 ಬೌಂಡರಿ.. ವೈಭವ್ ವಿಸ್ಫೋಟ..

ವಯಸ್ಸು ಕೇವಲ 14 ವರ್ಷ. ಆದ್ರೆ ಆತನ ಆಟ ಮಾತ್ರ ಬೆಂಕಿ, ಬಿರುಗಾಳಿ. ಈ ಯಂಗ್ ಬಾಯ್ ಟೆರರ್ ಬ್ಯಾಟಿಂಗ್ ಮುಂದೆ ಘಟಾನುಘಟಿ ಬೌಲರ್‌ಗಳೂ ಪತರುಗುಟ್ಟಿ ಹೋಗಿದ್ದಾರೆ. ಸದ್ಯ ಕ್ರಿಕೆಟ್ ಲೋಕದಲ್ಲಿ ನಡೀತಿರೋದು ಈತನದ್ದೇ ದರ್ಬಾರ್. ವೈಭವ್ ಸೂರ್ಯವಂಶಿ. ಈ ಚಿಕ್ಕ ವಯಸ್ಸಿನ ಆಟಗಾರನತ್ತ ವಿಶ್ವ ಕ್ರಿಕೆಟ್ ಜಗತ್ತು ಮತ್ತೆ ಮತ್ತೆ ತಿರುಗಿ ನೋಡ್ತಿದೆ. ವೈಭವ್ ಸೂರ್ಯವಂಶಿಯ ಡಮಾಲ್ ಡಿಮಿಲ್ ಆಟಕ್ಕೆ ದಿಗ್ಗಜ ಕ್ರಿಕಟರ್ಸೇ ಶಾಕ್ ಆಗಿದ್ದಾರೆ. ಈತನ ಅಬ್ಬರದ ಬ್ಯಾಟಿಂಗ್‌ಗೆ




ಟೀಮ್ ಇಂಡಿಯಾ ಸೀನಿಯರ್ ಸೆಲೆಕ್ಷನ್ ಕಮಿಟಿ ಸಂಕಷ್ಟಕ್ಕೆ ಸಿಲುಕಿದ್ರೆ ಟೀಮ್ ಇಂಡಿಯಾ ಸೀನಿಯರ್ ಆಟಗಾರರಿಗೆ ಢವಢವ ಶುರುವಾಗಿದೆ. ವೈಭವ್ ಸೂರ್ಯವಂಶಿಯ ಅಬ್ಬರ ವಿಜಯ್ ಹಜಾರೆ ಟೂರ್ನಿಯಲ್ಲೂ ಮುಂದುವರೆದಿದೆ. ಬಿಹಾರ ಪರ ಆಡಿದ ಮೊದಲ ಪಂದ್ಯದಲ್ಲೇ ವೈಭವ್ ಸೂರ್ಯವಂಶಿ ವಿಸ್ಫೋಟಕ ಇನ್ನಿಂಗ್ಸ್ ಕಟ್ಟಿದ್ದಾರೆ. ಅರುಣಾಚಲ ಪ್ರದೇಶ ಬೌಲರ್‌ಗಳನ್ನ ಹಿಗ್ಗಾಮುಗ್ಗಾ ಜಾಡಿಸಿದ ವೈಭವ್, ಬೌಂಡರಿ, ಸಿಕ್ಸರ್ ಮಳೆಸಿ ಜಸ್ಟ್ 36 ಎಸೆತಕ್ಕೆ ಶತಕ ಸಿಡಿಸಿದ್ದಾರೆ. ತನ್ನ ಭರ್ಜರಿ ಬ್ಯಾಟಿಂಗ್‌ನಿಂದ ಕ್ರಿಕೆಟ್ ಲೋಕವನ್ನ ಮತ್ತೊಮ್ಮೆ ನಿಬ್ಬೆರಗಾಗಿಸಿದ್ದಾರೆ. ಅರುಣಾಚಲ ಪ್ರದೇಶ ವಿರುದ್ಧ ವೈಭವ್ ವಿಸ್ಫೋಟಕ ಆಟ ಹೇಗಿತ್ತು ಅನ್ನೋದಕ್ಕೆ ಇದೇ ಬೆಸ್ಟ್ ಎಕ್ಸಾಂಪಲ್.! ಬೌಲರ್‌ಗಳನ್ನ ಹಿಗ್ಗಾಮುಗ್ಗಾ ಬೆಂಡೆತ್ತಿದ ವೈಭವ್ ಸೂರ್ಯವಂಶಿ 15 ಭರ್ಜರಿ ಸಿಕ್ಸರ್, 16 ಬೊಂಬಾಟ್ ಬೌಂಡರಿ ಬಾರಿಸಿದ್ರು. 86 ಎಸೆತ ಎದುರಿಸಿದ ವೈಭವ್ ಸೂರ್ಯವಂಶಿ ಒಟ್ಟಾರೆ ಬಾರಿಸಿದ್ದು 190 ರನ್ ಬಾರಿಸಿದ್ರು. ಜಸ್ಟ್ 10 ರನ್ ಅಂತರದಲ್ಲಿ ಡಬಲ್ ಸೆಂಚುರಿ ಮಿಸ್ ಮಾಡಿಕೊಂಡ್ರು. ತುಂಬಾ ಹಿಂದಲ್ಲ.. ವಾರದ ಹಿಂದಷ್ಟೇ ವೈಭವ್ ಸೂರ್ಯವಂಶಿಯ ದರ್ಬಾರ್ ದುಬೈನಲ್ಲೂ ನಡೆದಿತ್ತು, ಅಂಡರ್ 19 ಏಷ್ಯಾಕಪ್ ಟೂರ್ನಿಯ ಮೊದಲ ಪಂದ್ಯದಲ್ಲಿ ರಣಭಯಂಕರ ಇನ್ನಿಂಗ್ಸ್ ಕಟ್ಟಿದ್ರು. ಯುಎಇ ಬೌಲರ್‌ಗಳ ಬೌಲಿಂಗ್ ದಾಳಿಯನ್ನ ಚಿಂದಿ ಉಡಾಯಿಸಿದ್ದ ಸೂರ್ಯವಂಶಿ, ಕೇವಲ 56 ಎಸೆತಗಳಲ್ಲೇ ವೈಭವ್ ಸೂರ್ಯವಂಶಿ ಶತಕ ಸಿಡಿಸಿ ಅಬ್ಬರಿಸಿದ್ರು.

# ಫೀಲ್ಡಿಗೆ ಇಳಿದ ಸ್ಟಾರ್ ಬ್ಯಾಟರ್!



ಕ್ರಿಕೆಟ್ ಲೋಕದ ಪ್ರಮುಖ ಆರು ಸುದ್ದಿಗಳು ಇಲ್ಲಿವೆ. ವಿಜಯ್ ಹಜಾರೆ ಟೂರ್ನಿ ದೆಹಲಿ ಹಾಗೂ ಗುಜರಾತ್ ನಡುವಿನ ಪಂದ್ಯ ನಡೆಯಲಿದೆ. ವಿಶ್ವಕಪ್‌ನಿಂದ ಹೊರಬಿದ್ದಿರುವ ಗಿಲ್, ಸ್ಫೋಟಕ ಬ್ಯಾಟಿಂಗ್‌ಗೆ ಸಿದ್ಧರಾಗಿದ್ದಾರೆ. ವಿಜಯ್ ಹಜಾರೆ ಟೂರ್ನಿ ದೆಹಲಿ ಹಾಗೂ ಗುಜರಾತ್ ನಡುವಿನ ಪಂದ್ಯದ ಆರಂಭಕ್ಕೆ ಕ್ಷಣಗಣನೆ ಆರಂಭವಾಗಿದೆ. ಬಿಸಿಸಿಐನ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ನಡೆಯೋ ಇಂದಿನ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಪ್ರಮುಖ ಆಕರ್ಷಣೆಯಾಗಿದ್ದಾರೆ. ಟೂರ್ನಿಯ ಮೊದಲ ಪಂದ್ಯದಲ್ಲಿ ಶತಕ ಸಿಡಿಸಿರುವ ವಿರಾಟ್ ಕೊಹ್ಲಿಯಿಂದ ಮತ್ತೊಂದು ಭರ್ಜರಿ ಇನ್ನಿಂಗ್ಸ್‌ನ ನಿರೀಕ್ಷೆ ಅಭಿಮಾನಿಗಳಲ್ಲಿದೆ. ಬಹುತೇಕ ಇದೇ ಈ ಸೀಸನ್‌ನಲ್ಲಿ ಕೊಹ್ಲಿ ಆಡೋ ಕೊನೆಯ ವಿಜಯ್ ಹಜಾರೆ ಪಂದ್ಯವಾಗಿದೆ. ಆಸ್ಟ್ರೇಲಿಯಾ ಪ್ರವಾಸದಲ್ಲಿ ಇಂಜುರಿಗೆ ತುತ್ತಾಗಿದ್ದ ಟೀಮ್ ಇಂಡಿಯಾ ಏಕದಿನ ತಂಡದ ಉಪನಾಯಕ ಶ್ರೇಯಸ್ ಅಯ್ಯರ್ ಮೈದಾನಕ್ಕೆ ಮರಳಿದ್ದಾರೆ. ಒಂದೂವರೆ ತಿಂಗಳ ಬಳಿಕ ಫೀಲ್ಡ್‌ಗೆ ಕಮ್‌ಬ್ಯಾಕ್ ಮಾಡಿರೋ ಶ್ರೇಯಸ್ ಮುಂಬೈನಲ್ಲಿ ಅಭ್ಯಾಸ ಆರಂಭಿಸಿದ್ದಾರೆ. ಬ್ಯಾಟಿಂಗ್‌ಗಿಂತ ಫಿಟ್‌ನೆಸ್ ಕಡೆಗೆ ಹೆಚ್ಚು ಗಮನವಹಿಸಿದ್ದು, ಫಿಸಿಯೋ ನೆರವಿನೊಂದಿಗೆ ಶ್ರೇಯಸ್ ಅಯ್ಯರ್ ಸಿದ್ಧತೆಯನ್ನ ಆರಂಭಿಸಿದ್ದಾರೆ. ಅಕ್ಟೋಬರ್‌ನಲ್ಲಿ ಆಸ್ಟ್ರೇಲಿಯಾ ಪ್ರವಾಸದ ವೇಳೆ ಭುಜದ ಗಂಭೀರ ಇಂಜುರಿಗೆ ಶ್ರೇಯಸ್ ತುತ್ತಾಗಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966